23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 288 | ನವದೆಹಲಿ | ಬೆಲೆ ₹10 | ಏಪ್ರಿಲ್ 24 2026, ಶುಕ್ರವಾರ

# Heartiest Congratulations to Prof. Achyuta Samanta on the Conferment of the 71st Honorary Doctorate

**On the proud occasion of being conferred the 71st Honorary Doctorate by Karnataka University, Dharwad, we extend our heartfelt felicitations to Prof. Achyuta Samanta an educationist, institution-builder and visionary social reformer of global distinction.**



Prof. Achyuta Samanta's life stands as a rare confluence of scholarship, compassion and transformative leadership. As the Founder of KIIT, KISS and KIMS, he has created globally respected institutions that have empowered millions through inclusive education and social outreach. His pioneering work in tribal education, rural development and humanitarian service has reshaped lives across generations and geographies. Widely honoured across the world, his vision continues to inspire a model of education rooted in equity, dignity and nation-building. This recognition further celebrates a lifetime dedicated to knowledge, service and societal advancement.




Dr. Achyuta Samanta being conferred with an honorary Doctorate at the 75th Convocation of Karnatak University, Dharwad, by The Chancellor, His Excellency, Thawar Chand Gehlot, Governor of Karnataka.



May your inspiring journey continue to illuminate minds and transform lives across generations.
With heartfelt felicitations and warm regards.
from Friends & Well-Wishers

## ನಿತ್ಯ ಪಂಚಾಂಗ 24.04.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ವೈಶಾಖ ಶುದ್ಧ, ಅಷ್ಟಮಿ, ಪುಷ್ಯ ನಕ್ಷತ್ರ, ಗಂಗೋತ್ಪತ್ತಿ, ಮೊದಲಕಲ್ಲು ಶೇಷಾದಾಸರಾಯ ಪುಣ್ಯತಿಥಿ, ದೊಡ್ಡಚಿಂತನವೇಲ ಶೇಷಾದಾಸ್/ಇಂಡಿ ತಾಂಬಾ ನಾಗತಾಥ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರದಾನ

**ಧಾರವಾಡ, ಏ.23:** ಒಡಿಶಾದ ಭುವನೇಶ್ವರದ ಕಳಿಂಗಾ ಇನ್ಸ್‌ಟಿಟ್ಯೂಟ್ ಆಫ್ ಇಂಡಸ್ಟ್ರೀಯಲ್ ಟೆಕ್ನಾಲಜಿ (ಕೆಐಐಟಿ) ಮತ್ತು ಕಳಿಂಗಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸ್ (ಕೆಐಎಸ್‌ಎಸ್) ಸಂಸ್ಥಾಪಕ ಡಾ. ಅಚ್ಯುತ ಸಮಂತ ಅವರಿಗೆ ಕರ್ನಾಟಕ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

ಶಿಕ್ಷಣ, ಸಬಲೀಕರಣ ಮತ್ತು ಸಾಮಾಜಿಕ ಪರಿವರ್ತನೆಗೆ ನೀಡಿದ ಗಣನೀಯ ಕೊಡುಗೆ ಪರಿಗಣಿಸಿ ಸಮಂತ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಯಿತು. ವಿಶ್ವವಿದ್ಯಾಲಯದ ಗಾಂಧಿ ಭವನದಲ್ಲಿ ನಡೆದ 75 ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಗೌರವ ಪ್ರದಾನ ಮಾಡಿದರು.

ಸಮಂತ ಅವರೊಂದಿಗೆ ಕರ್ನಾಟಕದ ಮುಖ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ಹಾಗೂ ಸಮಾಜ ಸೇವೆ ಪರಿಗಣಿಸಿ ಹುಬ್ಬಳ್ಳಿಯ ಮಜೇಥಿಯಾ ಫೌಂಡೇಶನ್ ಸ್ಥಾಪಕರಾದ ಜಿತೇಂದ್ರ ಡಿ. ಮಜೀಥಿಯಾ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಯಿತು.

**71ನೇ ಡಾಕ್ಟರೇಟ್**

ಸಮಂತಾ ಅವರಿಗೆ ಈಗಾಗಲೇ 70 ವಿವಿಗಳು ಗೌರವ ಡಾಕ್ಟರೇಟ್ ನೀಡಿ ಗೌರವಿಸಿವೆ. ಗುರುವಾರ ಸ್ವೀಕರಿಸಿದ ಕರ್ನಾಟಕ ವಿಶ್ವವಿದ್ಯಾಲಯದ ಗೌರವ 71 ಡಾಕ್ಟರೇಟ್ ಆಗಿರುವುದು ವಿಶೇಷ.

ಸಮಂತ ಅವರು, ಸುಮಾರು 80,000ಕ್ಕೂ ಹೆಚ್ಚು ಬುಡಕಟ್ಟು ಬಡ ಹಾಗೂ ಅನಾಥಮಕ್ಕಳಿಗೆ ಶಿಕ್ಷಣ ಮತ್ತು ವಸತಿ ನೀಡಿ ಅವರ ಬದುಕಿಗೆ ಬೆಳಕು ನೀಡಿದ್ದಾರೆ. ಬುಡಕಟ್ಟು ಮಕ್ಕಳಿಗೆ ಶಿಕ್ಷಣ ಕೊಡಲು ಇಡೀ ಬದುಕನ್ನೇ ಸಮರ್ಪಿಸಿಕೊಂಡಿದ್ದಾರೆ. ಸಮಂತ ಅವರ ಸೇವೆಯನ್ನು ಇದೀಗ ಕರ್ನಾಟಕ ವಿಶ್ವವಿದ್ಯಾಲಯ ಗುರುತಿಸಿ ಗೌರವಿಸಿದೆ.



ಕರ್ನಾಟಕ ವಿಶ್ವವಿದ್ಯಾಲಯದ 75 ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಡಾ. ಅಚ್ಯುತ ಸಮಂತ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಿದರು. ಕರ್ನಾಟಕದ ಮುಖ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ಹಾಗೂ ಹುಬ್ಬಳ್ಳಿಯ ಮಜೇಥಿಯಾ ಫೌಂಡೇಶನ್ ಸ್ಥಾಪಕ ಜಿತೇಂದ್ರ ಡಿ. ಮಜೇಥಿಯಾ ಅವರೂ ಗೌರವ ಡಾಕ್ಟರೇಟ್ ಅನ್ನು ಇದೇ ವೇಳೆ ಸ್ವೀಕರಿಸಿದರು. ಇಸ್ರೊ ಮಾಜಿ ಅಧ್ಯಕ್ಷ ಡಾ. ಎ ಎಸ್ ಕಿರಣ್ ಕುಮಾರ್, ಉನ್ನತ ಶಿಕ್ಷಣ ಸಚಿವ ಡಾ. ಎಂ ಸಿ ಸುಧಾಕರ್, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎ ಎಂ ಖಾನ್, ವಿವಿಧ ನಿಕಾಯಗಳ ಡೀನರು, ಕುಲಸಚಿವರು ಉಪಸ್ಥಿತರಿದ್ದರು.

ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆ ಹಾಗೂ ಕ್ರೀಡೆಗೂ ಸಮಂತ ಅವರು ಆದ್ಯತೆ ನೀಡಿದ್ದಾರೆ. ಬುಡಕಟ್ಟು ಮಕ್ಕಳಿಗೆ ಕೌಶಲ್ಯ ಅಭಿವೃದ್ಧಿ ಹಾಗೂ ಮಹಿಳಾ ಸಬಲೀಕರಣಕ್ಕೂ ವಿವಿಯಲ್ಲಿ ಕಾರ್ಯಕ್ರಮ ರೂಪಿಸಿದ್ದಾರೆ.

**ಶೈಕ್ಷಣಿಕ ಕ್ಷೇತ್ರದ ಮಹಾನ್ ಸಾಧಕ**

ಕೆಐಐಟಿ ಹಾಗೂ ಕೆಐಎಸ್ ಎಸ್ ಗಳನ್ನು ಶೈಕ್ಷಣಿಕ ವಲಯದ ಬೃಹತ್ ಕಲ್ಪವೃಕ್ಷವಾಗಿ ಬೆಳೆಸಿರುವ ಸಮಂತ ಅವರು, ರಾಜ್ಯಸಭೆ ಮತ್ತು ಲೋಕಸಭೆಯ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಯುಜಿಸಿ, ಎಐಸಿಟಿಇ, ಎನ್ ಸಿಇಟಿ ಸೇರಿದಂತೆ ಹಲವು ಶೈಕ್ಷಣಿಕ ಮತ್ತು ಸರ್ಕಾರಿ ಸಂಸ್ಥೆಯಲ್ಲಿ ಶಿಕ್ಷಣ ಸಂಬಂಧಿ ಸೇವೆ ಸಲ್ಲಿಸಿದ್ದಾರೆ. ಕ್ರೀಡಾ ಪೋಷಕರೂ ಆದ ಇವರ ಸೇವೆ ಗುರುತಿಸಿ ಅನೇಕ ರಾಷ್ಟ್ರೀಯ-ಅಂತಾರಾಷ್ಟ್ರೀಯ ಪ್ರಶಸ್ತಿಗಳು ಸಂದಿವೆ

ಘಟಿಕೋತ್ಸವ ಸಮಾರಂಭದಲ್ಲಿ ಇಸ್ರೊ ನಿವೃತ್ತ ಅಧ್ಯಕ್ಷ ಡಾ. ಎ.ಎಸ್. ಕಿರಣ್ ಕುಮಾರ್, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎ.ಎಂ.ಖಾನ್, ವಿವಿಧ ನಿಕಾಯಗಳ ಡೀನರು, ಕುಲಸಚಿವರು, ಪದವಿ ಸ್ವೀಕರಿಸಿದ ವಿದ್ಯಾರ್ಥಿಗಳು, ಸಂಶೋಧನಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.



ಪೂಜ್ಯ ನಾಡೋಜ ಶ್ರೀ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರೋಪ ಸಮಾರಂಭದಲ್ಲಿ ವಿ.ವಿ. ಬಿರಾದಾರ ಅಧ್ಯಕ್ಷರು ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್, ನವದೆಹಲಿ ವತಿಯಿಂದ ಸನ್ಮಾನ ಮಾಡಿದ ದೃಶ್ಯ

# ಮೈಸೂರು ರೇಷ್ಮೆ ಅಸ್ಮಿತೆ, ಕಾರ್ಮಿಕರ ರಕ್ಷಣೆಗೆ ನಡೆದ ಹೋರಾಟಕ್ಕೆ ಜಯ: ಆರ್.ಅಶೋಕ್

**ಕ್ರೀಡಾ ಇಲಾಖೆಗೆ ಹಸ್ತಾಂತರಿಸಿದ್ದ ಭೂಮಿ ಕೆಎಸ್‌ಐಸಿಗೆ ವಾಪಸ್, ಸರ್ಕಾರದಿಂದ ಅಧಿಕೃತ ಆದೇಶ**

**ಮೈಸೂರು, ಏ.23:** ಕ್ರೀಡಾ ಇಲಾಖೆಗೆ ಹಸ್ತಾಂತರವಾಗಿದ್ದ ಕೆಎಸ್‌ಐಸಿ ಭೂಮಿಯನ್ನು ಈಗ ಅಧಿಕೃತವಾಗಿ ಮರಳಿ ಪಡೆಯಲಾಗಿದೆ. ಈ ಮೂಲಕ ಮೈಸೂರು ಸಿಲ್ಕ್‌ನ ಅಸ್ಮಿತೆ ಮತ್ತು ಕಾರ್ಮಿಕರ ಹಿತಾಸಕ್ತಿಯನ್ನು ರಕ್ಷಿಸಿದಂತಾಗಿದೆ. ಇದು ಕರ್ನಾಟಕದ ಜನತೆಯ ಹಾಗೂ ಮೈಸೂರು ರೇಷ್ಮೆ ಪರಂಪರೆಯನ್ನು ನಂಬಿರುವ ಸಾವಿರಾರು ಕಾರ್ಮಿಕರ ಸಂಘಟಿತ ಹೋರಾಟಕ್ಕೆ ಜಯ ಸಿಕ್ಕಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ.

ಮೈಸೂರಿನ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ (ಕೆಎಸ್‌ಐಸಿ) ಐದು ಎಕರೆ ಭೂಮಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಉಚಿತವಾಗಿ ಸರ್ಕಾರ ಹಸ್ತಾಂತರಿಸಿ ಆದೇಶಿಸಿತ್ತು. ಇದಕ್ಕೆ ಹೋರಾಟ, ಆಕ್ಷೇಪ ವ್ಯಕ್ತವಾಗಿತ್ತು. ಕೊನೆಗೂ ಸರ್ಕಾರ ಪ್ರತಿಭಟನೆಗೆ ಮಣಿದಿದೆ.

ಈ ವಿಚಾರ ಸಂಬಂಧ ಎಕ್ಸ್ ಮಾಹಿತಿ ಹಂಚಿಕೊಂಡಿರುವ ಆರ್.ಅಶೋಕ್, ಸರ್ಕಾರ ಕನ್ನಡಿಗರ ಹೋರಾಟಕ್ಕೆ ಮಣಿದಿದೆ. ಕಳೆದ ಮಾರ್ಚ್ 9ರಂದು ವಿಧಾನಸಭೆಯಲ್ಲಿ ಸ್ವತಃ ರೇಷ್ಮೆ ಸಚಿವರೇ ಭೂಮಿ ಹಸ್ತಾಂತರ, ನಿರ್ಧಾರ ಕೈ ಬಿಡುವ ಈ ಬಗ್ಗೆ ಘೋಷಣೆ ಮಾಡಿದ್ದರೂ. ಅದು ಕೇವಲ ಕಾಗದದ ಮೇಲೆ ಉಳಿಯುವ ಭೀತಿ ಇತ್ತು. ಆದರೆ, ನಮ್ಮ ನಿರಂತರ ಒತ್ತಡ, ಸದನದ ಒಳಗೆ ಮತ್ತು ಹೊರಗೆ ನಡೆಸಿದ ತೀವ್ರ ಹೋರಾಟ ಹಾಗೂ ಸಾರ್ವಜನಿಕರ ಬೆಂಬಲದಿಂದಾಗಿ ಇಂದು ಸರ್ಕಾರ ತನ್ನ ನಿರ್ಧಾರವನ್ನು ಕೈಬಿಟ್ಟು, ಉಚಿತ ಭೂಮಿ ಹಸ್ತಾಂತರ ಆದೇಶ ಹಿಂಪಡೆದಿದೆ ಎಂದಿದ್ದಾರೆ.




ಲೋಕಸಭೆ ಹಾಗೂ ರಾಜ್ಯಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ಕಲ್ಪಿಸುವ ನಾರಿಶಕ್ತಿ ವಂದನ ಮಸೂದೆಯನ್ನು ಸೋಲಿಸಿದ ಕಾಂಗ್ರೆಸ್ ನೇತೃತ್ವದ ಇಂಡಿ ಮೈತ್ರಿಕೂಟದ ಮಹಿಳಾ ವಿರೋಧಿ ನೀತಿಯನ್ನು ಖಂಡಿಸಿ, ಮಹಿಳಾ ಜನಾಕ್ರೋಶದ ಕುರಿತು ಮೈಸೂರಿನಲ್ಲಿ ಬಿಜೆಪಿ ನಾಯಕರು ಪತ್ರಿಕಾಗೋಷ್ಠಿಯಲ್ಲಿ ತರಾಟೆಗೆ ತೆಗೆದುಕೊಂಡರು. ಕೇಂದ್ರ ಸಚಿವ ವಿ.ಸೋಮಣ್ಣ, ಮೈಸೂರು-ಕೊಡಗು ಸಂಸದ ಯದುವೀರ್ ಒಡೆಯರ್, ರಾಜ್ಯ ಮಹಿಳಾ ಮೋರ್ಚಾದ ಅಧ್ಯಕ್ಷೆ ಸಿ. ಮಂಜುಳಾ, ನಟಿ ತಾರಾ ಹಾಗೂ ಮಹಿಳಾ ಮುಖಂಡರು ಹಾಜರಿದ್ದರು.

# ಕಾಂಗ್ರೆಸ್‌ಗೆ ಮೋದಿ ಜನಪ್ರಿಯತೆ ಸಹಿಸಲು ಆಗುತ್ತಿಲ್ಲ: ವಿಜಯೇಂದ್ರ

**ಪ್ರಧಾನಿ ವಿರುದ್ಧದ ಹೇಳಿಕೆ ವಿರೋಧಿಸಿ ಬಿಜೆಪಿಯಿಂದ ಪ್ರತಿಭಟನೆ**

**ಖರ್ಗೆ ದೇಶದ ಜನರ ಕ್ಷಮೆಯಾಚಿಸಲು ಆಗ್ರಹ**



**ಬೆಂಗಳೂರು, ಏ.23:** ಪ್ರಧಾನಿ ನರೇಂದ್ರ ಮೋದಿ ಅವರನ್ನು 'ಭಯೋತ್ಪಾದಕ' ಎಂದು ಕರೆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯನ್ನು ಖಂಡಿಸಿ ಕರ್ನಾಟಕ ಬಿಜೆಪಿ ವಿಧಾನಸೌಧದ ಮಹಾತ್ಮ ಗಾಂಧಿ ಪ್ರತಿಮೆ ಎದುರು ಗುರುವಾರ ಪ್ರತಿಭಟನೆ ನಡೆಸಿತು ಮತ್ತು ಅವರು ದೇಶದ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದೆ.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ, ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್ ಹಾಗೂ ಛಲವಾದಿ ನಾರಾಯಣಸ್ವಾಮಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮತ್ತು ಪಕ್ಷದ ಹಲವಾರು ಶಾಸಕರು ಹಾಗೂ ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಈ ವೇಳೆ ಬಿಜೆಪಿ ನಾಯಕರು ಫಲಕಗಳನ್ನು ಹಿಡಿದು ಖರ್ಗೆ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಸುದ್ದಿಗಾರರ ಜತೆ ಮಾತನಾಡಿದ ಬಿ.ವೈ. ವಿಜಯೇಂದ್ರ ಪ್ರಧಾನಿ ನರೇಂದ್ರಮೋದಿಯವರಿಗೆ ಹಲವಾರು ದೇಶಗಳು ತಮ್ಮ ಅತ್ಯುನ್ನತ ನಾಗರಿಕ ಪ್ರಶಸ್ತಿಗಳನ್ನು ನೀಡಿ ಗೌರವಿಸಿವೆ. ಭಾರತದ ಬೇರೆ ಯಾವುದೇ ಪ್ರಧಾನಿ ಇಷ್ಟೊಂದು ಪ್ರಮಾಣದಲ್ಲಿ ಪ್ರಶಸ್ತಿಗಳನ್ನು ಪಡೆದಿಲ್ಲ. ಇಡೀ ಜಗತ್ತು ನರೇಂದ್ರ ಮೋದಿಯವರ ನಾಯಕತ್ವವನ್ನು ಗುರುತಿಸಿರುವ ಸಮಯದಲ್ಲಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭಯೋತ್ಪಾದಕ ಎಂದು ಕರೆದಿದ್ದಾರೆ. ಬಿಜೆಪಿ ಮಾತ್ರವಲ್ಲ, ಇಡೀ ದೇಶವೇ ಇದನ್ನು ಖಂಡಿಸುತ್ತದೆ. ಖರ್ಗೆ ಮತ್ತು ಕಾಂಗ್ರೆಸ್ ಪಕ್ಷವು ನರೇಂದ್ರ ಮೋದಿಯವರ ಜನಪ್ರಿಯತೆಯನ್ನು ಒಪ್ಪಿಕೊಳ್ಳಲು ಸಿದ್ಧವಿಲ್ಲ ಎಂದರು.

## ಕಾಂಗ್ರೆಸ್ ನಾಯಕರ ದೇಶವಿರೋಧಿ ಹೇಳಿಕೆ: ಶೋಭಾ ಕರಂದ್ಲಾಜೆ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ವಿದೇಶದಲ್ಲೂ ದೇಶವಿರೋಧಿ ಹೇಳಿಕೆ ನೀಡುತ್ತಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಟೀಕಿಸಿದರು. ಖರ್ಗೆ ಮತ್ತು ರಾಹುಲ್ ಗಾಂಧಿಯವರು ಭಾರತ ವಿರೋಧಿಗಳು ಎಂದು ಆಕ್ಷೇಪಿಸಿದರು. ಇವರು ವಿದೇಶಿ ಏಜೆಂಟರಂತೆ ನಡೆದುಕೊಳ್ಳುತ್ತಿದ್ದಾರೆ. ಇವರಿಬ್ಬರು ಜಾರ್ಜ್ ಸೊರೋಸ್ ಏಜೆಂಟರು ಎಂದು ಟೀಕಿಸಿದರು. ಅವರ ಮಾನಸಿಕತೆಗೆ ತಕ್ಕಂತೆ ಇವರು ಭಾರತದಲ್ಲಿ ಕುಣಿಯುತ್ತಿದ್ದಾರೆ ಎಂದು ಖಂಡಿಸಿದರು.

## ಸೋನಿಯಾ ಮೆಚ್ಚಿಸಲು ಹೊರಟಿದ್ದಾರೆಯೇ: ಸಂಸದ ಗೋವಿಂದ ಕಾರಜೋಳ ವ್ಯಂಗ್ಯ

ಮಾಜಿ ಉಪ ಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಮಾತನಾಡಿ, ಖರ್ಗೆ ಮತ್ತು ಅವರ ಮಗ, ಸೋನಿಯಾ ಗಾಂಧಿಯವರನ್ನು ಮೆಚ್ಚಿಸಲು ಹೀಗೆ ಮಾತನಾಡುತ್ತಿದ್ದಾರಾ ಎಂದು ಕೇಳಿದರು. ಹಿಂದೆ ವಿಷಸರ್ಪಕ್ಕೆ ಹೋಲಿಸಿದ್ದರು ಎಂದು ಖಂಡಿಸಿದರು. ಪ್ರಧಾನಿಯವರನ್ನು ಹೀಗೆ ಹೋಲಿಸಿ ಮಾತನಾಡಿದ್ದರಿಂದ ಕಾಂಗ್ರೆಸ್ಸಿಗೆ 140 ಕೋಟಿ ಜನರ ಶಾಪ ತಟ್ಟಲಿದೆ. ಅದರಿಂದ ಕಾಂಗ್ರೆಸ್ ನಶಿಸಿ ಹೋಗಲಿದೆ ಎಂದು ನುಡಿದರು.

# ತಡಮಾಡದೆ ಯುವನಿಧಿಗೆ ನೋಂದಾಯಿಸಿಕೊಂಡು ಸೌಲಭ್ಯ ಪಡೆಯಿರಿ

**ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಕರೆ**



**ಬೆಂಗಳೂರು, ಏ.23:** ಪದವಿ ಮುಗಿಸಿ ಕೆಲಸಕ್ಕಾಗಿ ಕಾಯುತ್ತಿರುವ ಯುವ ಸಮೂಹಕ್ಕೆ ಆರ್ಥಿಕ ಶಕ್ತಿ ನೀಡುವ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯುವನಿಧಿ ಯೋಜನೆ ಯಶಸ್ವಿಯಾಗಿ ಮೂರು ವರ್ಷ ಪೂರೈಸಿದೆ. ಈ ಹಿನ್ನೆಲೆಯಲ್ಲಿ 2025-26ನೇ ಸಾಲಿನಲ್ಲಿ ತೇರ್ಗಡೆಯಾದ ಹೊಸ ಪದವೀಧರರು ತಡಮಾಡದೆ ಯೋಜನೆಯಡಿ ನೋಂದಾಯಿಸಿ ಕೊಂಡು ಭತ್ಯೆ ಪಡೆಯುವಂತೆ ಶಾಸಕ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಕರೆ ನೀಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ದಿನೇಶ್ ಗೂಳಿಗೌಡ, ಕಾಂಗ್ರೆಸ್ ಪಕ್ಷವು ಸದಾ ಜನಪರ ಚಿಂತನೆಯುಳ್ಳದ್ದು ಎಂಬುದು ಪದೇ ಪದೆ ಸಾಬೀತಾಗುತ್ತಲೇ ಬಂದಿದೆ. ಚುನಾವಣೆಗೆ ಮೊದಲು ಘೋಷಿಸಿದಂತೆ ಪಂಚ ಗ್ಯಾರಂಟಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಗೂ ಉಪಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರು ಸದಾ ಮುಂದಿದ್ದಾರೆ. ಅವರಿಗೆ ನಾಡಿನ ಸಮಸ್ತ ಜನತೆ ಪರವಾಗಿ ಅಭಿನಂದನೆಗಳು. ಈ ಯುವನಿಧಿ ಯೋಜನೆಯಿಂದ ಸಾಕಷ್ಟು ಪದವೀಧರ ನಿರುದ್ಯೋಗಿಗಳಿಗೆ ಅನುಕೂಲವಾಗಿದೆ. ಅವರು ದೂರದ ನಗರಗಳಿಗೆ ಹೋಗಿ ಉದ್ಯೋಗ ಹುಡುಕಿ ಕೊಳ್ಳಲು, ಸಣ್ಣಪುಟ್ಟ ಖರ್ಚು-ವೆಚ್ಚಗಳನ್ನು ಸರಿದೂಗಿಸಿಕೊಳ್ಳಲು ಇದರಿಂದ ಸಾಕಷ್ಟು ಸಹಾಯಕವಾಗಿದೆ ಎಂದು ಅವರು ಹೇಳಿದ್ದಾರೆ.

ಅಲ್ಲದೆ, ಫಲಾನುಭವಿಗಳು ಪ್ರತಿ ತಿಂಗಳು 1ನೇ ತಾರೀಖಿನಿಂದ 25ರೊಳಗೆ ತಾವು ಸ್ವ-ಉದ್ಯೋಗಿಯುಲ್ಲವೆಂದು/ಉದ್ಯೋಗ ಮಾಡುತ್ತಿಲ್ಲವೆಂದು/ಉನ್ನತ ಶಿಕ್ಷಣ ಮಾಡುತ್ತಿಲ್ಲವೆಂದು ಸ್ವಯಂ ದೃಢೀಕರಣವನ್ನು ಮಾಡಬೇಕು. ಹೀಗೆ ಸ್ವಯಂ ದೃಢೀಕರಣವನ್ನು ಮಾಡಿಕೊಂಡವರಿಗೆ ಯುವನಿಧಿ ಭತ್ಯೆಯನ್ನು ನೇರವಾಗಿ ಅವರ ಖಾತೆಗೆ ಜಮೆ ಮಾಡಲಾಗುತ್ತದೆ ಎಂದು ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

**950 ಕೋಟಿ ಭತ್ಯೆ ವಿತರಣೆ**-ಯೋಜನೆ ಜಾರಿಗೆ ಬಂದಾಗಿನಿಂದ ಇಲ್ಲಿನವರೆಗೆ ಸರ್ಕಾರವು ಒಟ್ಟು 950,57,13,000 ರೂ. (ಅಂದಾಜು 950.57 ಕೋಟಿ ರೂ.) ಮೊತ್ತವನ್ನು ನಿರುದ್ಯೋಗಿ ಯುವಕರ ಖಾತೆಗೆ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಯಶಸ್ವಿಯಾಗಿ ತಲುಪಿಸಿದೆ.

ಈ ಬೃಹತ್ ಮೊತ್ತವು ರಾಜ್ಯದ ನಿರುದ್ಯೋಗಿ ಯುವಜನತೆಯ ಪಾಲಿಗೆ ಸಂಕಷ್ಟದ ಸಮಯದಲ್ಲಿ ದೊಡ್ಡ ಆಸರೆಯಾಗಿದೆ ಎಂದು ದಿನೇಶ್ ಗೂಳಿಗೌಡ ಹೇಳಿದ್ದಾರೆ.

ರಾಜ್ಯಾದ್ಯಂತ ಈವರೆಗೆ ಒಟ್ಟು 4,22,519 ಅಭ್ಯರ್ಥಿಗಳು ಯೋಜನೆಯ ಲಾಭ ಪಡೆಯಲು ನೋಂದಾಯಿಸಿಕೊಂಡಿದ್ದಾರೆ. ಇದರಲ್ಲಿ ಪದವೀಧರರು ಮಾತ್ರವಲ್ಲದೆ ಡಿಪ್ಲೋಮಾ ಮುಗಿಸಿದ ಯುವಕರೂ ಸೇರಿದ್ದಾರೆ ಎಂದು ಶಾಸಕ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

2022ರಿಂದ 2026ರವರೆಗಿನ ಶೈಕ್ಷಣಿಕ ಸಾಲಿನಲ್ಲಿ ಪದವಿ ಅಥವಾ ಡಿಪ್ಲೊಮಾ ಪೂರೈಸಿ, ಆರು ತಿಂಗಳು ಕಳೆದರೂ ಉದ್ಯೋಗ ಸಿಗದ ಎಲ್ಲರೂ ಅರ್ಜಿ ಸಲ್ಲಿಸಬಹುದು. ಅರ್ಹ ಪದವೀಧರರಿಗೆ ಮಾಸಿಕ 3,000 ರೂ. ಹಾಗೂ ಡಿಪ್ಲೋಮಾ ಅಭ್ಯರ್ಥಿಗಳಿಗೆ 1,500 ರೂ. ಭತ್ಯೆ ನೀಡಲಾಗುತ್ತದೆ. ಹೀಗಾಗಿ ಈ ಬಾರಿ ಪದವಿ ಮುಗಿದವರು ಅರ್ಜಿ ಸಲ್ಲಿಸಬಹುದು ಎಂದು ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ದಾಖಲೆ ಶೇ.94.10ರಷ್ಟು ತೇರ್ಗಡೆ: ದಕ್ಷಿಣ ಕನ್ನಡ ಪ್ರಥಮ, ಉಡುಪಿ ದ್ವಿತೀಯ, ಉತ್ತರ ಕನ್ನಡಕ್ಕೆ 3ನೇ ಸ್ಥಾನ

## ಎಂದಿನಂತೆ ಈ ಬಾರಿಯೂ ವಿದ್ಯಾರ್ಥಿನಿಯರದ್ದೇ ಮೇಲುಗೈ

**ಬೆಂಗಳೂರು, ಏ.23:** 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ಪ್ರಕಟವಾಗಿದ್ದು, ಶೇ.94.01 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದು ದಾಖಲೆಯ ಫಲಿತಾಂಶವಾಗಿದ್ದು, ಗೊಂದಲದ ನಡುವೆಯೂ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ. ದಕ್ಷಿಣ ಕನ್ನಡ ಪ್ರಥಮ, ಉಡುಪಿ ದ್ವಿತೀಯ ಹಾಗೂ ಉತ್ತರ ಕನ್ನಡ ಜಿಲ್ಲೆಗಳು ತೃತೀಯ ಸ್ಥಾನ ಪಡೆದುಕೊಂಡಿವೆ. ಎಂದಿನಂತ ಈ ಬಾರಿಯೂ ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ.

ಇತಿಹಾಸದಲ್ಲಿ ಇದೇ ಮೊದಲಬಾರಿಗೆ ಶೇ.94.10ರಷ್ಟು ಫಲಿತಾಂಶ ಪ್ರಕಟವಾಗಿದೆ. ಈಗಾಗಲೇ ಇಲಾಖೆ ವೆಬ್‌ಸೈಟ್‌ನಲ್ಲೂ (web: https://karresults.nic.in/) ಪರೀಕ್ಷಾ ಮಂಡಳಿ ಫಲಿತಾಂಶ ಪ್ರಕಟ ಮಾಡಿದೆ. ಎಸ್.ಎಂ.ಎಸ್, ವಾಟ್ಸಪ್ ಮೂಲಕವೂ ಫಲಿತಾಂಶ ಕಳುಹಿಸಲಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಮಾರ್ಚ್ 18ರಿಂದ ಏಪ್ರಿಲ್ 2ರವರೆಗೆ ರಾಜ್ಯದ ಸುಮಾರು 2,870 ಕೇಂದ್ರಗಳಲ್ಲಿ ಪರೀಕ್ಷೆ ನಡೆದಿತ್ತು. ಈ ವರ್ಷ 9 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿ ಕೊಂಡಿದ್ದರೆ, 7,70,209 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ 7,24,794 ಮಂದಿ ಉತ್ತೀರ್ಣರಾಗಿದ್ದಾರೆ. ಶೇ94.1ರಷ್ಟು ಫಲಿತಾಂಶ ಬಂದಿದೆ. ಈ ಬಾರಿ ಉತ್ತಮ ಫಲಿತಾಂಶ ಬಂದಿರುವುದರಿಂದ ಮೂರನೇ ಪರೀಕ್ಷೆ ಇರುವುದಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪಷ್ಟಪಡಿಸಿದರು. ಮೇ 18ರಿಂದ ಮೇ 25ರವರೆಗೆ ಎರಡನೇ ಪರೀಕ್ಷೆ ನಡೆಯಲಿದೆ ಎಂದು ಸಚಿವರು ತಿಳಿಸಿದ್ದಾರೆ.

**7 ಮಂದಿಗೆ ಶೇ.100 ಅಂಕ**

7 ವಿದ್ಯಾರ್ಥಿಗಳು 625ಕ್ಕೆ 625 ಅಂಕ ಪಡೆದುಕೊಂಡಿದ್ದಾರೆ. ದಾವಣಗೆರೆಯ ಭರತ್, ಚಿಕ್ಕಮಗಳೂರಿನ ಬೃಂದಾ, ಬೆಂಗಳೂರು ಉತ್ತರದ ಧನುಷ್, ಉಡುಪಿಯ ಪ್ರೀತಂ, ಚಿಕ್ಕೋಡಿಯ ಪ್ರಾರ್ಥನಾ, ವಿಜಯಪುರದ ಸೌಜನ್ಯಾ, ರಾಯಚೂರಿನ ಸುಖದೇವ್ ಶೇ.100 ಅಂಕ ಪಡೆದುಕೊಂಡಿದ್ದಾರೆ.

**ಫಲಿತಾಂಶ ಎಲ್ಲಿ ಲಭ್ಯ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯ ಅಧಿಕೃತ ಪೋರ್ಟಲ್ https://karresults.nic.in ಹಾಗೂ KarnatakaOne ಮೊಬೈಲ್ ಆಪ್ ಮೂಲಕವೂ ಫಲಿತಾಂಶ ನೋಡಬಹುದು ಅಥವಾ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿರುವ ಮೊಬೈಲ್ ಸಂಖ್ಯೆಗೆ ಮಂಡಳಿ ವತಿಯಿಂದಲೇ ನೇರವಾಗಿ ಫಲಿತಾಂಶದ ವಿವರಗಳು ಎಸ್‌ಎಂಎಸ್ ಅಥವಾ ವಾಟ್ಸಾಪ್ ಮಾಡಲಾಗುವುದು.

**ಯಾವ ಜಿಲ್ಲೆಗೆ ಯಾವ ಸ್ಥಾನ**

ದಕ್ಷಿಣ ಕನ್ನಡ – 1ನೇ ಸ್ಥಾನ (ಶೇ.98.40)
ಉಡುಪಿ – 2ನೇ ಸ್ಥಾನ (ಶೇ.98.18)
ಉತ್ತರ ಕನ್ನಡ – 3ನೇ ಸ್ಥಾನ (ಶೇ.98.09)
ಹಾಸನ – 4ನೇ ಸ್ಥಾನ (ಶೇ.97.51)
ಮಂಡ್ಯ – 5ನೇ ಸ್ಥಾನ (ಶೇ.97.45)
ಶಿರಸಿ – 6ನೇ ಸ್ಥಾನ (ಶೇ.97.21)
ಹಾವೇರಿ – 7ನೇ ಸ್ಥಾನ (ಶೇ.96.87)
ಕೊಡಗು – 8ನೇ ಸ್ಥಾನ (ಶೇ.96.70)
ಶಿವಮೊಗ್ಗ – 9ನೇ ಸ್ಥಾನ (ಶೇ.96.56)
ವಿಜಯನಗರ – 10ನೇ ಸ್ಥಾನ (ಶೇ.96.39)
ಬೆಂಗಳೂರು ಗ್ರಾಮಾಂತರ – 11ನೇ ಸ್ಥಾನ (ಶೇ.95.84)
ಧಾರವಾಡ – 12ನೇ ಸ್ಥಾನ (ಶೇ.95.59)
ಕೋಲಾರ – 13ನೇ ಸ್ಥಾನ (ಶೇ.95.50)
ಬಾಗಲಕೋಟೆ – 14ನೇ ಸ್ಥಾನ (ಶೇ.95.42)
ಬೆಂ.ಉತ್ತರ – 15ನೇ ಸ್ಥಾನ (ಶೇ.95.34)
ಗದಗ – 16ನೇ ಸ್ಥಾನ (ಶೇ.95.24)
ಚಿಕ್ಕಮಗಳೂರು – 17ನೇ ಸ್ಥಾನ (ಶೇ.94.99)
ಬೆಳಗಾವಿ – 18ನೇ ಸ್ಥಾನ (ಶೇ.94.75)
ದಾವಣಗೆರೆ – 19ನೇ ಸ್ಥಾನ (ಶೇ.94.64)
ಮೈಸೂರು – 20ನೇ ಸ್ಥಾನ (ಶೇ.94.50)
ರಾಯಚೂರು –21ನೇ ಸ್ಥಾನ (ಶೇ.94.41)
ವಿಜಯಪುರ – 22ನೇ ಸ್ಥಾನ (ಶೇ.94.17)
ಚಿಕ್ಕೋಡಿ – 23ನೇ ಸ್ಥಾನ (ಶೇ.94.09)
ಬಳ್ಳಾರಿ – 24ನೇ ಸ್ಥಾನ (ಶೇ.93.36)
ಕೊಪ್ಪಳ 25ನೇ ಸ್ಥಾನ (ಶೇ.93.10)
ರಾಮನಗರ – 26ನೇ ಸ್ಥಾನ (ಶೇ.92.83)
ಚಿತ್ರದುರ್ಗ – 27ನೇ ಸ್ಥಾನ (ಶೇ.92.25)
ಬೀದರ್ – 28ನೇ ಸ್ಥಾನ (ಶೇ.92.18)
ತುಮಕೂರು – 29ನೇ ಸ್ಥಾನ (ಶೇ.92.04)
ಚಾಮರಾಜನಗರ – 30ನೇ ಸ್ಥಾನ (ಶೇ.91.89)
ಯಾದಗಿರಿ – 31ನೇ ಸ್ಥಾನ (ಶೇ.91.89)

**ತೃತೀಯ ಭಾಷೆ ಸಾಧನೆ ಹೀಗಿದೆ:**

ಪರೀಕ್ಷೆ ಬರೆದವರು – 7,69,751
ತೇರ್ಗಡೆಯಾದವರು – 7,58,623
ಅನುತ್ತೀರ್ಣರಾದವರು – 11,128

ತೃತೀಯ ಭಾಷೆಯಾಗಿ ಹಿಂದಿ ಆರಿಸಿಕೊಂಡಿದ್ದ 7,02,009 ವಿದ್ಯಾರ್ಥಿಗಳಲ್ಲಿ 6,92,528 ಮಂದಿ ಪಾಸಾಗಿದ್ದರೆ, ಬರೋಬ್ಬರಿ 9,481 ವಿದ್ಯಾರ್ಥಿಗಳು ಫೇಲಾಗಿದ್ದಾರೆ.

**ಮೇ18ರಿಂದ 25ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2, 3ನೇ ಪರೀಕ್ಷೆ ಇಲ್ಲ**

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರಿಗೆ ಹಾಗೂ ಫಲಿತಾಂಶಗಳನ್ನು ಉತ್ತಮಪಡಿಸಿಕೊಳ್ಳಲು ಮೇ 18ರಿಂದ 25ರವರೆಗೆ ಪರೀಕ್ಷೆ-2 ನಡೆಯಲಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಎಸ್‌ಎಸ್‌ಎಲ್‌ಸಿಯಲ್ಲಿ 3ನೇ ಪರೀಕ್ಷೆ ಇರುವುದಿಲ್ಲ ಎಂದು ಅವರು ಹೇಳಿದರು. ಫಲಿತಾಂಶ ಉತ್ತಮಪಡಿಸಿಕೊಳ್ಳುವ ಹಾಗೂ ಅನುತ್ತೀರ್ಣರಾದ ವಿದ್ಯಾರ್ಥಿಗಳು ಪ್ರತಿ ವಿಷಯಕ್ಕೆ 448 ರೂ. ಪರೀಕ್ಷಾ ಶುಲ್ಕ ಪಾವತಿಸಬೇಕು. 2 ವಿಷಯಗಳಿಗೆ 559 ರೂ., ಮೂರು ಅಥವಾ ಮೇಲ್ಪಟ್ಟ ವಿಷಯಗಳಿಗೆ 752 ರೂಪಾಯಿ ಪರೀಕ್ಷಾ ಶುಲ್ಕ ಪಾವತಿಸಬೇಕಾಗುತ್ತದೆ. ದ್ವಿತೀಯ ಭಾಷೆ ಹಿಂದಿಯಲ್ಲಿ ಅಂಕಗಳನ್ನು ಉತ್ತಮಪಡಿಸಿಕೊಳ್ಳಲು ಶುಲ್ಕ ವಿನಾಯ್ತಿ ನೀಡಲಾಗಿದೆ. ಈ ಪೂರಕ ಪರೀಕ್ಷೆ ಶುಲ್ಕ ಪಾವತಿಸಲು ಮೇ 4 ಕೊನೆಯ ದಿನವಾಗಿದೆ. ಪರೀಕ್ಷೆಗಳು ಮೇ 18 ರಿಂದ 25 ರವರೆಗೂ ನಡೆಯಲಿವೆ. ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್ ಪ್ರತಿ ಪಡೆಯಲು ಅರ್ಜಿ ಸಲ್ಲಿಸಲು ಏಪ್ರಿಲ್ 26 ಕೊನೆಯ ದಿನವಾಗಿದೆ ಎಂದು ತಿಳಿಸಿದ್ದಾರೆ.

## ಫಲಿತಾಂಶ ಸುಧಾರಣೆಗೆ ವ್ಯಾಪಕ ಕ್ರಮ: ಮಧು ಬಂಗಾರಪ್ಪ



**ಬೆಂಗಳೂರು, ಏ.23:** ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಸುಧಾರಣೆಗೆ ಇಲಾಖೆ ವ್ಯಾಪಕ ಕ್ರಮಗಳನ್ನು ಕೈಗೊಂಡಿದ್ದು, 29 ಅಂಶಗಳ ಸಮಗ್ರ ಕ್ರಮಗಳನ್ನು ಅಳವಡಿಸಲಾಗಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಿಕೆಯಲ್ಲಿ ಯಾವುದೇ ಮಕ್ಕಳು ಹಿಂದುಳಿಯದಂತೆ ನೋಡಿಕೊಳ್ಳುವ ಉದ್ದೇಶದಿಂದ ಸಾಕಷ್ಟು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಕಳೆದ ಬಾರಿ ಜೂನ್ 1ರಿಂದ ಅನ್ವಯವಾಗುವಂತೆ ಅತಿಥಿ ಶಿಕ್ಷಕರನ್ನು ನೇಮಿಸಿದ್ದು, ಇದರಿಂದ ಪಾಠ ಪ್ರವಚನಗಳನ್ನು ಸಕಾಲದಲ್ಲಿ ಪೂರ್ಣಗೊಳಿಸಲು ಸಹಕಾರಿಯಾಯಿತು ಎಂದರು.

ಸರಾಸರಿಗಿಂತ ಕಡಿಮೆ ಇರುವ ವಿದ್ಯಾರ್ಥಿಗಳನ್ನು ಪ್ರತ್ಯೇಕವಾಗಿ ವರ್ಗೀಕರಣ ಮಾಡಿ ವಿಶೇಷ ಗಮನ ನೀಡಲಾಗಿದೆ. ಹೆಚ್ಚುವರಿ ತರಗತಿಗಳ ಜೊತೆಗೆ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಕಡೆಗೆ ಲಕ್ಷ್ಯ ವಹಿಸಲಾಗಿದೆ. ಮೊಬೈಲ್ ಮತ್ತು ಸಾಮಾಜಿಕ ತಾಣಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಯಿತು. ವೃತ್ತಿ ಮಾರ್ಗದರ್ಶನ, ನಿರಂತರ ಮೌಲ್ಯ ಮಾಪನ, ಪರೀಕ್ಷೆಯಲ್ಲಿ ಪಾರದರ್ಶಕತೆ, ಶೈಕ್ಷಣಿಕ ಶಿಸ್ತು, ಮೇಲ್ವಿಚಾರಣೆ, ಕಡಿಮೆ ಫಲಿತಾಂಶದ ಶಾಲೆಗಳನ್ನು ಗುರುತಿಸಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ದತ್ತು ಸ್ವೀಕರಿಸಿ ವಿಶೇಷ ಮುತುವರ್ಜಿ ಮೂಲಕ ಫಲಿತಾಂಶ ಹೆಚ್ಚಳಕ್ಕೆ ಗಮನಹರಿಸಲಾಯಿತು ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಶೇಷ ಗಮನಹರಿಸಲಾಗಿತ್ತು. ಪ್ರತಿಯೊಬ್ಬ ವಿದ್ಯಾರ್ಥಿಗೆ ಕಲಿಕಾ ಸಾಮಗ್ರಿ ದೊರಕಿಸಿಕೊಡಲು ಇಲಾಖೆಯ ವೆಬ್ ಸೈಟ್ ನಲ್ಲಿ ವಿದ್ಯಾರ್ಥಿ ಕಾರ್ನರ್ ಎಂಬ ವಿಭಾಗವನ್ನು ತೆರೆಯಲಾಗಿತ್ತು. ಪರೀಕ್ಷಾ ವೇಳಾಪಟ್ಟಿಯನ್ನು ಮುಂಚಿತವಾಗಿ ಪ್ರಕಟಿಸಿದ್ದು, ಹೆಚ್ಚಿನ ರೀತಿಯಲ್ಲಿ ಅನುಕೂಲವಾಯಿತು. ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನೆ ಹೆಚ್ಚಿನ ರೀತಿಯಲ್ಲಿ ಅನುಕೂಲವಾಯಿತು. ಪರೀಕ್ಷಾ ಸಿದ್ಧತಾ ಪ್ರಕ್ರಿಯೆಯಲ್ಲಿ ಸಮುದಾಯ ಪಾಲ್ಗೊಳ್ಳುವಿಕೆಗೆ ಒತ್ತು ನೀಡಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಶಿ ವಿ. ಮಹೇಶ್, ಶಾಲಾ ಶಿಕ್ಷಣ ಇಲಾಖೆ ಆಯುಕ್ತರಾದ ವಿಕಾಸ್ ಕಿಶೋರ್ ಸುರಾಳ್ಕರ್, ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಧ್ಯಕ್ಷ ಪ್ರಕಾಶ್ ಜಿ ನಿತ್ತಾಳ್, ಮಂಡಳಿಯ ನಿರ್ದೇಶಕ ಗೋಪಾಲಕೃಷ್ಣ, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕ ಭರತ್, ಸರ್ವಶಿಕ್ಷಣ ಕರ್ನಾಟಕದ ರಾಜ್ಯ ಯೋಜನಾ ನಿರ್ದೇಶಕರಾದ ವಿದ್ಯಾಕುಮಾರಿ ಉಪಸ್ಥಿತರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಏಪ್ರಿಲ್ 24, 2026, ಶುಕ್ರವಾರ

# ವಿಧಾನಸಭಾ ಚುನಾವಣೆ: ಬಂಗಾಳ–ತಮಿಳುನಾಡಿನಲ್ಲಿ ಭರ್ಜರಿ ಮತದಾನ

■ ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದಲ್ಲಿ ಶೇ.93, ತಮಿಳುನಾಡಿನ ಎಲ್ಲ 234 ಸ್ಥಾನಗಳಲ್ಲಿ ಶೇ.85 ಮತದಾನ ■ ಸ್ವಾತಂತ್ರ್ಯಾನಂತರ ಈ ರಾಜ್ಯಗಳಲ್ಲಿ ಅತ್ಯಧಿಕ ಮತಚಲಾವಣೆ

**ನವದೆಹಲಿ, ಏ.23:** ಪಶ್ಚಿಮ ಬಂಗಾಳ ವಿಧಾನಸಭೆ ಮೊದಲ ಹಂತ ಹಾಗೂ ತಮಿಳುನಾಡು ಚುನಾವಣೆಗೆ ಗುರುವಾರ ನಡೆದ ಮತದಾನದಲ್ಲಿ ದಾಖಲೆ ಪ್ರಮಾಣದಲ್ಲಿ ಮತದಾರರು ಹಕ್ಕು ಚಲಾಯಿಸಿದ್ದಾರೆ. ಪಶ್ಚಿಮ ಬಂಗಾಳದ ಒಟ್ಟು 294 ಕ್ಷೇತ್ರಗಳ ಪೈಕಿ ಇಂದು 152 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಚುನಾವಣೆ ನಡೆಯಿತು. ಒಟ್ಟು ಶೇ.93ರಷ್ಟು ಮತದಾನವಾದರೆ, ತಮಿಳುನಾಡಿನ 234 ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಈ ಬಾರಿ ದಾಖಲೆಯ ಶೇ.85ರಷ್ಟು ಮತದಾನ ನಡೆದಿದೆ. ರಾಜ್ಯದ ಒಟ್ಟು 5.73 ಕೋಟಿ ಮತದಾರರಲ್ಲಿ ಸುಮಾರು 4.84 ಕೋಟಿ ಮಂದಿ ಮತದಾನದ ಹಕ್ಕನ್ನು ಚಲಾಯಿಸಿದ್ದಾರೆ. 2021ರ ಚುನಾವಣೆಗೆ ಹೋಲಿಸಿದರೆ (ಬಂಗಾಳ 86%, ತಮಿಳುನಾಡು 76.6%), ಈ ಬಾರಿ ಮತದಾನದ ಪ್ರಮಾಣ ಗಣನೀಯವಾಗಿ ಏರಿಕೆಯಾಗಿರುವುದು ವಿಶೇಷ. ಪ್ರಜಾಪ್ರಭುತ್ವದ ಹಬ್ಬದಲ್ಲಿ ಇಷ್ಟೊಂದು ದೊಡ್ಡಸಂಖ್ಯೆಯಲ್ಲಿ ಮತದಾರರನ ಪಾಲ್ಗೊಂಡಿದ್ದಕ್ಕಾಗಿ ಎರಡೂ ರಾಜ್ಯಗಳ ಮತದಾರರಿಗೆ ಚುನಾವಣಾ ಆಯೋಗ ಧನ್ಯವಾದ ಅರ್ಪಿಸಿದೆ.

## ಪ.ಬಂಗಾಳ: 3.6 ಕೋಟಿ ಮತದಾರರಿಂದ ಹಕ್ಕು ಚಲಾವಣೆ



**ಪಶ್ಚಿಮ ಬಂಗಾಳ ವಿಧಾನಸಭೆಯ ಒಟ್ಟು 294 ಕ್ಷೇತ್ರಗಳ ಪೈಕಿ 152 ಕ್ಷೇತ್ರಗಳಿಗೆ ಗುರುವಾರ ನಡೆದ ಮೊದಲ ಹಂತದ ಚುನಾವಣೆಯಲ್ಲಿ ದಾಖಲೆಯ ಶೇ.92ರಷ್ಟು ಮತದಾನವಾಗಿದೆ. ರಾಜ್ಯದ ಇತಿಹಾಸದಲ್ಲೇ ಇದು ಅತ್ಯಧಿಕ ಮತದಾನವಾಗಿದ್ದು, ಚುನಾವಣಾ ಆಯುಕ್ತರು ಮತದಾರರ ಭಾಗವಹಿಸುವಿಕೆಯನ್ನು ಶ್ಲಾಘಿಸಿದ್ದಾರೆ.**

ಗುರುವಾರ ಬೆಳಿಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದ್ದು, ತೃಣಮೂಲ ಕಾಂಗ್ರೆಸ್ ಮತ್ತು ಭಾರತೀಯ ಜನತಾ ಪಾರ್ಟಿ ಸೇರಿದಂತೆ ಪ್ರಮುಖ ರಾಜಕೀಯ ಪಕ್ಷಗಳು 294 ಸ್ಥಾನಗಳಿಗಾಗಿ ಪೈಪೋಟಿ ನಡೆಸಿವೆ. ಮೊದಲ ಹಂತದಲ್ಲಿ ಸುಮಾರು 3.6 ಕೋಟಿಗೂ ಅಧಿಕ ಮತದಾರರು ಹಕ್ಕು ಚಲಾಯಿಸಿದ್ದಾರೆ. ಈ ಬಾರಿ ಸುಮಾರು 7 ಲಕ್ಷ ಹೊಸ ಮತದಾರರು ಹಕ್ಕುಚಲಾಯಿಸಲಿದ್ದು, ಒಟ್ಟು ಮತದಾರರ ಸಂಖ್ಯೆ 6.8 ಕೋಟಿ ದಾಟಿದೆ. ಮೊದಲ ಹಂತದ ಮತದಾನ ಮುಗಿದಿದ್ದು, ಎರಡನೇ ಹಂತದಲ್ಲಿ ಏ.29ರಂದು ಉಳಿದ 142 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಮೇ 4ರಂದು ಫಲಿತಾಂಶ ಪ್ರಕಟವಾಗಲಿದೆ. ದಕ್ಷಿಣ



ದಿನಾಜ್‌ಪುರ – 94.85%, ಕೂಚ್ ಬೆಹಾರ್ – 94.54%ನಲ್ಲಿ ಅತಿಹೆಚ್ಚು ಮತದಾನವಾಗಿದೆ.

ವಿಶೇಷವಾಗಿ ಈ ಬಾರಿ ಮತದಾರರ ಪಟ್ಟಿಯ ಪರಿಷ್ಕರಣೆಯಿಂದಾಗಿ ಸುಮಾರು 60ರಿಂದ 90 ಲಕ್ಷ ಹೆಸರುಗಳನ್ನು ತೆಗೆದುಹಾಕಲಾಗಿದ್ದು, ಒಟ್ಟು ಮತದಾರರ ಸಂಖ್ಯೆ 7.04 ಕೋಟಿಗೆ ಇಳಿಕೆಯಾಗಿದೆ.

**ಪ್ರಮುಖ ಅಭ್ಯರ್ಥಿಗಳು:** ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಭವಾನಿಪುರದಿಂದ ಸ್ಪರ್ಧಿಸುತ್ತಿದ್ದರೆ, ಬಿಜೆಪಿ ನಾಯಕ ಸುವೇಂದು ಅಧಿಕಾರಿ ಭವಾನಿಪುರ ಮತ್ತು ನಂದಿಗ್ರಾಮ ಎರಡೂ ಕ್ಷೇತ್ರಗಳಿಂದ ಸ್ಪರ್ಧಿಸುತ್ತಿದ್ದಾರೆ. ಅತಿ ಶ್ರೀಮಂತ ಅಭ್ಯರ್ಥಿಗಳು: ಅಸೋಸಿಯೇಷನ್ ಫಾರ್ ಡೆಮೋಕ್ರಟಿಕ್ ರಿಫಾರ್ಮ್ಸ್ ವರದಿಯಂತೆ, ಜಂಗೀಪುರದ ಟಿಎಂಸಿ ಅಭ್ಯರ್ಥಿ ಜಾಕಿರ್ ಹೊಸೈನ್ (67 ಕೋಟಿ ರೂ. ಆಸ್ತಿ) ಅತ್ಯಂತ ಶ್ರೀಮಂತ ಅಭ್ಯರ್ಥಿಯಾಗಿದ್ದಾರೆ.

**ಪ್ರಮುಖ ಕ್ಷೇತ್ರಗಳು: ಮುರ್ಷಿದಾಬಾದ್:** ಇಲ್ಲಿ ಕಾಂಗ್ರೆಸ್ ಮತ್ತು ಸಿಪಿಎಂ ಇಂದಿಗೂ ಪ್ರಬಲವಾಗಿದ್ದು, ಬಹುಕೋನ ಸ್ಪರ್ಧೆ ಏರ್ಪಟ್ಟಿದೆ. **ಬಂಕುರಾ:** ಇಲ್ಲಿ ಬಿಜೆಪಿ ಮತ್ತು ಟಿಎಂಸಿ ನಡುವೆ ಸಮಬಲದ ಪೈಪೋಟಿ ಇದೆ. **ಪುರುಲಿಯಾ ಮತ್ತು ಪೂರ್ವ ಮೇದಿನಿಪುರ:** ಈ ಕ್ಷೇತ್ರಗಳು ಹಿರಿಯ ನಾಯಕರ ಉಪಸ್ಥಿತಿಯಿಂದಾಗಿ ಹೈವೋಲ್ಟೇಜ್ ಕಣಗಳಾಗಿ ಮಾರ್ಪಟ್ಟಿವೆ.

**ಹಿಂಸಾಚಾರದ ವರದಿ:** ಮುರ್ಶಿದಾಬಾದ್ ಜಿಲ್ಲೆಯ ನೌಡಾದಲ್ಲಿ ಬಾಂಬ್ ಸ್ಫೋಟ ಸಂಭವಿಸಿದ್ದು, ಟಿಎಂಸಿ ಮತ್ತು ಎಯುಜೆಪಿ ಕಾರ್ಯಕರ್ತರ ನಡುವೆ ಸಂಘರ್ಷ ನಡೆದಿದೆ. ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಲು ಲಘು ಲಾಠಿ ಪ್ರಹಾರ ನಡೆಸಿದ್ದಾರೆ.

ರಹಮತ್ ನಗರ ಬಳಿ ಅಸನ್ಸೋಲ್ ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಗ್ನಿಮಿತ್ರ ಪಾಲ್ ಅವರ ಕಾರಿನ ಮೇಲೆ ಗುರುವಾರ ದಾಳಿ ನಡೆಸಲಾಗಿದ್ದು, ಅದರ ಹಿಂಭಾಗದ ಕಿಟಕಿ ಗಾಜುಗಳಿಗೆ ಹಾನಿಯಾಗಿದೆ. ನಾನು ಮತಗಟ್ಟೆ ಆವರಣದಿಂದ ಹೊರಬರುತ್ತಿದ್ದಾಗ ನನ್ನ ಕಾರಿನ ಮೇಲೆ ಕಲ್ಲು ಎಸೆಯಲಾಯಿತು. ಹಿಂಭಾಗದ ಕಿಟಕಿ

ಒಡೆದುಹೋಗಿತ್ತು. ಇದರ ಹಿಂದೆ ಯಾರಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಇದು ಚುನಾವಣೆಯ ಮೇಲೆ ಪ್ರಭಾವ ಬೀರುವ ಪ್ರಯತ್ನ ಎಂದು ಹಾಲಿ ಶಾಸಕರು ಆರೋಪಿಸಿದ್ದಾರೆ. ಚುನಾವಣಾ ಅಧಿಕಾರಿಗಳಿಗೆ ದೂರು ನೀಡಲಾಗಿದೆ ಎಂದು ಅವರು ಹೇಳಿದರು. ಪೊಲೀಸರ ಪ್ರಕಾರ, ಘಟನೆಯ ತನಿಖೆ ನಡೆಸಲಾಗುತ್ತಿದೆ ಮತ್ತು ಪ್ರದೇಶದಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ.

## ತಮಿಳುನಾಡು: 4.84 ಕೋಟಿ ಮಂದಿ ಮತ ಚಲಾವಣೆ



**ತಮಿಳುನಾಡಿನ 234 ವಿಧಾನಸಭಾ ಕ್ಷೇತ್ರಗಳಿಗೆ ಗುರುವಾರ ನಡೆದ ಚುನಾವಣೆಯಲ್ಲಿ ಈ ಬಾರಿ ದಾಖಲೆಯ ಶೇ.85ರಷ್ಟು ಮತದಾನ ನಡೆದಿದೆ. ರಾಜ್ಯದ ಒಟ್ಟು 5.73 ಕೋಟಿ ಮತದಾರರಲ್ಲಿ ಸುಮಾರು 4.84 ಕೋಟಿ ಮಂದಿ ಮತದಾನದ ಹಕ್ಕನ್ನು ಚಲಾಯಿಸಿದ್ದಾರೆ.**

ಕರೂರು ಜಿಲ್ಲೆಯಲ್ಲಿ ಗರಿಷ್ಠ 92.48%, ಸೇಲಂ ಜಿಲ್ಲೆಯಲ್ಲಿ 90.42% ರಷ್ಟು ಅಧಿಕ ಮತದಾನ ದಾಖಲಾಗಿದ್ದರೆ, ಅತಿ ಕಡಿಮೆ ಶೇ.75.50ರಷ್ಟು ಕನ್ಯಾಕುಮಾರಿ ಜಿಲ್ಲೆಯಲ್ಲಾಗಿದೆ.

ಬೇಸಿಗೆಯ ತೀವ್ರ ಶಾಖದ ಕಾರಣ ಮಧ್ಯಾಹ್ನ 1 ರಿಂದ 3 ಗಂಟೆಯವರೆಗೆ ಮತದಾನದ ಪ್ರಮಾಣ ಸ್ವಲ್ಪ ಕಡಿಮೆಯಾಗಿತ್ತು, ಆದರೆ ಸಂಜೆ 3 ಗಂಟೆಯ ನಂತರ ಮತ್ತೆ ಚುರುಕುಗೊಂಡಿತು. ಸಂಜೆ 6 ಗಂಟೆಯ ಮೊದಲು ಸಾಲಿನಲ್ಲಿ ನಿಂತಿದ್ದ ಮತದಾರರಿಗೆ ಕೂಪನ್ ನೀಡಿ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿತ್ತು.

ಮತ ಚಲಾಯಿಸಿದ ಪ್ರಮುಖರಲ್ಲಿ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ಉಪ ಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್, ಎಐಎಡಿಎಂಕೆ ಮುಖ್ಯಸ್ಥ ಎಡಪ್ಪಾಡಿ ಕೆ. ಪಳನಿಸ್ವಾಮಿ ಮತ್ತು ನಟ–ರಾಜಕಾರಣಿ ವಿಜಯ್, ಸೂಪರ್‌ಸ್ಟಾರ್ ರಜನಿಕಾಂತ್, ಕಮಲಹಾಸನ್, ನಟಿ ಖುಷ್ಬೂ ಮತ್ತಿತರರು ಸೇರಿದ್ದಾರೆ.





### ಚುನಾವಣಾ ಕಣದ ಸ್ಪಷ್ಟ ಚಿತ್ರಣ

**ಈ ಬಾರಿ ಒಟ್ಟು 4,023 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಆಡಳಿತಾರೂಢ ಡಿಎಂಕೆ ನೇತೃತ್ವದ ಜಾತ್ಯತೀತ ಪ್ರಗತಿಪರ ಮೈತ್ರಿಕೂಟ ಮತ್ತು ಎಐಎಡಿಎಂಕೆ–ಬಿಜೆಪಿ ಮೈತ್ರಿಕೂಟದ ನಡುವೆ ನೇರ ಹಣಾಹಣಿ ಇದೆ. ಇದರ ನಡುವೆ ನಟ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ ಪಕ್ಷವು ಎಲ್ಲಾ 234 ಕ್ಷೇತ್ರಗಳಲ್ಲಿ ಸ್ಪರ್ಧಿಸುವ ಮೂಲಕ ಚುನಾವಣೆಗೆ ಹೊಸ ಆಯಾಮ ನೀಡಿದೆ.**



## ಪೆಟ್ರೋಲ್, ಡೀಸೆಲ್ ದರ ಏರಿಕೆ ಪ್ರಸ್ತಾವ ಇಲ್ಲ

### ವದಂತಿಗಳಿಗೆ ಸ್ಪಷ್ಟನೆ ನೀಡಿದ ಕೇಂದ್ರ ಸರ್ಕಾರ



**ನವದೆಹಲಿ, ಏ.23:** ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯ ಚಿಂತನೆ ಇಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಿದ್ದು, ವದಂತಿಗಳಿಗೆ ಬ್ರೇಕ್ ಹಾಕಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ 25–28 ರೂ. ಏರಿಕೆಯಾಗುವ ಸಾಧ್ಯತೆ ಇದೆ ಎಂಬ ವರದಿಗಳನ್ನು ಸರ್ಕಾರ ತಳ್ಳಿಹಾಕಿದ್ದು, ಅಂತಹ ಯಾವುದೇ ದರ ಏರಿಕೆ ಬಗ್ಗೆ ಚಿಂತನೆ ಇಲ್ಲ ಎಂದು ಸ್ಪಷ್ಟಪಡಿಸಿದೆ.

ಈ ಕುರಿತು ಎಕ್ಸ್ ಖಾತೆಯಲ್ಲಿ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಮಾಹಿತಿ ಹಂಚಿಕೊಂಡಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಕೆಲವು ಸುದ್ದಿಗಳು ವರದಿಯಾಗಿವೆ. ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿಲ್ಲ. ಇಂತಹ ಸುದ್ದಿಗಳು ನಾಗರಿಕರಲ್ಲಿ ಭಯ ಹುಟ್ಟಿಸಲು ಮಾಡಲಾಗಿದೆ. ಇವು ದುರುದ್ದೇಶ ಹಾಗೂ ದಾರಿತಪ್ಪಿಸುವ ಕೆಲಸ ಮಾಡುತ್ತಿವೆ ಎಂದು ತಿಳಿಸಿದೆ.

ಇನ್ನೂ ಕೆಲವು ವರದಿಗಳ ಪ್ರಕಾರ, ಏ.29ರಂದು ವಿಧಾನಸಭಾ ಚುನಾವಣೆ ಕೊನೆಗೊಂಡ ನಂತರ ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ತೀವ್ರ ಏರಿಕೆಯನ್ನು ಕಾಣಬಹುದು. ಕಚ್ಚಾ ತೈಲವು ಬ್ಯಾರಲ್‌ಗೆ 120 ಡಾಲರ್ (11,293 ರೂ.) ಸಮೀಪಿಸುತ್ತಿದ್ದು, ಇದರ ಆಧಾರದ ಮೇಲೆ ಲೀಟರ್‌ಗೆ 25–28 ರೂ. ಏರಿಕೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ.

ಕಳೆದ ನಾಲ್ಕು ವರ್ಷಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಾಗದ ಏಕೈಕ ದೇಶವೆಂದರೆ ಅದು ಭಾರತ ಎಂದು ಸರ್ಕಾರ ಪುನರುಚ್ಚರಿಸಿದೆ. ಮಧ್ಯಪ್ರಾಚ್ಯದ ಸಂಘರ್ಷದ ಮಧ್ಯೆಯೂ ಸರ್ಕಾರ ನಾಗರಿಕರನ್ನು ಬೆಲೆ ಏರಿಕೆಯಿಂದ ರಕ್ಷಿಸಲು ನಿರಂತರ ಕ್ರಮಗಳನ್ನು ತೆಗೆದುಕೊಂಡಿದೆ. ಅಲ್ಲದೇ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 10 ರೂ.ಗಳಷ್ಟು ಕಡಿಮೆ ಮಾಡಿದೆ ಎಂದಿದೆ. ಇನ್ನೂ ಎಲ್ಲಾ ರಿಫೈನರಿಗಳು ಸಾಕಷ್ಟು ಕಚ್ಚಾ ತೈಲದೊಂದಿಗೆ ಹೆಚ್ಚಿನ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಹೆಚ್ಚಿನ ಲಭ್ಯತೆಗಾಗಿ ಸಾಕಷ್ಟು ಕೆಲಸ ನಿರ್ವಹಣೆ ಮಾಡಲಾಗುತ್ತಿದೆ ಎಂದು ಸರ್ಕಾರ ದೃಢಪಡಿಸಿದೆ.

## ವಾಯುಸೇವನೆಗೆ ದೆಹಲಿಗೆ ಬಂದಿಲ್ಲ ಹೈಕಮಾಂಡ್ ಭೇಟಿ ಮಾಡಿದ್ದೇನೆ



**ನವದೆಹಲಿ, ಏ. 23:** ನಾನು ಪಕ್ಷದ ನಾಯಕರನ್ನು ಭೇಟಿಯಾಗಿದ್ದೇನೆ. ಆದರೆ, ಯಾರನ್ನು ಭೇಟಿಯಾಗಿರುವೆ ಎಂದು ಹೇಳುವುದಿಲ್ಲ. ದೆಹಲಿಗೆ ಗಾಳಿ ಕುಡಿಯಲು ಬಂದಿಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಮಾರ್ಮಿಕವಾಗಿ ನುಡಿದರು.

ನವದೆಹಲಿಯಲ್ಲಿ ಮಾತನಾಡಿದ ಅವರು, "ತಮಿಳುನಾಡು, ಕೇರಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಚುನಾವಣೆ ಪ್ರವಾಸ ಮಾಡಿದ್ದೆ. ಎಲ್ಲೆಲ್ಲಿ ಏನಾಗಿದೆ ಎಂದು ನಾಯಕರಿಗೆ ಮಾಹಿತಿ ನೀಡಬೇಕಿದೆ. ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯ ಮಂತ್ರಿಯಾಗಿ ನನ್ನ ಕರ್ತವ್ಯ. ಅದನ್ನು ಮಾಡುತ್ತೇನೆ" ಎಂದರು. ರಾಜ್ಯದಲ್ಲಿ ಬದಲಾವಣೆಗಳ ಬಗ್ಗೆ ಜವಾಬ್ದಾರಿ ಸ್ಥಾನದಲ್ಲಿರುವ ನಾನು ಮಾಧ್ಯಮಗಳ ಮುಂದೆ ಚರ್ಚೆ ಮಾಡಲ್ಲ ಎಂದಷ್ಟೇ ಹೇಳಿದರು.

ಸಿಎಂ ಆಪ್ತ ಸಚಿವರು ಬುಧವಾರ ಚರ್ಚೆ ಮಾಡಿದ್ದಾರೆ ಎಂದಾಗ, "ನನಗೆ ಈ ಬಗ್ಗೆ ಮಾಹಿತಿ ಇಲ್ಲ. ಯಾರು ಯಾರ ಆಪ್ತರು, ಯಾರಿಗೆ ಆಪ್ತರಲ್ಲ ಎಂದು ನನಗೆ ಗೊತ್ತಿಲ್ಲ. ನಾನು ಈ ಸಭೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ" ಎಂದು ತಿಳಿಸಿದರು. ಹಿರಿಯ ಶಾಸಕರು ಸಂಪುಟ ಪುನಾರಚನೆಗೆ ಆಗ್ರಹಿಸಲು ಮತ್ತೆ ದೆಹಲಿ ಪ್ರವಾಸ ಮಾಡಲಿದ್ದಾರೆ ಎಂದು ಕೇಳಿದಾಗ, "ಕಾದು ನೋಡೋಣ" ಎಂದರು.

ತಮಿಳುನಾಡು, ಕೇರಳ, ಅಸ್ಸಾಂ ರಾಜ್ಯಗಳಲ್ಲಿ ವಿಧಾನಸಭೆ ಹಾಗೂ ಕರ್ನಾಟಕದಲ್ಲಿ ಉಪಚುನಾವಣೆ ಮುಗಿದಿದೆ. ಕೇರಳ ಹಾಗೂ ತಮಿಳು ನಾಡಿನಲ್ಲಿ ನಮ್ಮ ಮೈತ್ರಿಕೂಟದೊಂದಿಗೆ ಸರ್ಕಾರ ರಚನೆ ಮಾಡುತ್ತೇವೆ. ಅಸ್ಸಾಂನಲ್ಲಿ ನಮ್ಮ ನಾಯಕರು ಹಾಗೂ ಕಾರ್ಯಕರ್ತರು ಬಹಳಷ್ಟು ಶ್ರಮಪಟ್ಟು ಕೆಲಸ ಮಾಡಿದ್ದಾರೆ. ನಮ್ಮ ಮೈತ್ರಿಕೂಟಕ್ಕೆ ಸಕಾರಾತ್ಮಕವಾಗಿದೆ" ಎಂದರು. ದೆಹಲಿಗೆ ಗಾಳಿ ಕುಡಿಯಲು ಬಂದಿಲ್ಲ. ಬೆಂಗಳೂರು ಸಮಸ್ಯೆಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚೆ ಮಾಡಬೇಕಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶುಕ್ರವಾರ ಬೆಳಗ್ಗೆ 11.45ಕ್ಕೆ ಭೇಟಿಗೆ ಸಮಯ ನೀಡಿದ್ದಾರೆ" ಎಂದು ಮಾಹಿತಿ ನೀಡಿದರು.

ಅಲ್ಪಸಂಖ್ಯಾತ ನಾಯಕರು ತಮ್ಮ ಭಾವನೆ, ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ತಪ್ಪಿಲ್ಲ. ಕೆಲವು ಬಾರಿ ನಾವು ಹೇಳಿದ್ದು, ಇಲ್ಲ ಅವರು ಹೇಳಿದ್ದು ಸರಿ ಇಲ್ಲದಿರಬಹುದು. ಒಟ್ಟಿಗೆ ಚರ್ಚೆ ಮಾಡುತ್ತೇವೆ" ಎಂದು ತಿಳಿಸಿದರು. ಅಮಾನತು ವಾಪಸ್ ಪಡೆಯಬೇಕು ಎಂಬ ಆಗ್ರಹದ ಬಗ್ಗೆ ಕೇಳಿದಾಗ, "ನಾವು ಯಾರನ್ನು ಅಮಾನತು ಮಾಡಿದ್ದೇವೆ. ಅವರೇ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ. ಎಂದು ಎಂದರು.

## ದಿಗ್ಬಂಧನ ಧಿಕ್ಕರಿಸಿ, ಹಾರ್ಮುಜ್ ಜಲಸಂಧಿಯಲ್ಲಿ ಟೋಲ್ ಸಂಗ್ರಹ

**ಟೆಹರಾನ್, ಏ.23:** ಅಮೆರಿಕ ವಿಧಿಸಿದ್ದ ದಿಗ್ಬಂಧನಕ್ಕೆ ಕಿಮ್ಮತ್ತು ನೀಡದ ಇರಾನ್ ಹಾರ್ಮುಜ್ ಜಲಸಂಧಿಯಲ್ಲಿ ಹಾದು ಹೋಗುವ ಹಡಗುಗಳಿಂದ ಟೋಲ್ ಸಂಗ್ರಹಿಸಲು ಆರಂಭಿಸಿದೆ. ಈ ಮೂಲಕ ತನ್ನ ಆದಾಯವನ್ನು ಸಂಗ್ರಹಿಸುತ್ತಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಸರಕು ಸಾಗಣೆಗೆ ವಿಧಿಸುತ್ತಿರುವ ಸುಂಕದಿಂದ ಇರಾನ್ ಮೊದಲ ಆದಾಯವನ್ನು ಪಡೆದುಕೊಂಡಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ಗುರುವಾರ ಹೇಳಿದ್ದಾರೆ,




■ ಡೊನಾಲ್ಡ್ ಟ್ರಂಪ್‌ಗೆ ಟೆಹರಾನ್ ತಿರುಗೇಟು

ಇಸ್ಲಾಮಿಕ್ ಗಣರಾಜ್ಯದ ವಿರುದ್ಧ ಅಮೆರಿಕ–ಇಸ್ರೇಲಿ ಜಂಟಿಯಾಗಿ ನಡೆಸುತ್ತಿರುವ ಯುದ್ಧದಿಂದ ಇಡೀ ಜಗತ್ತಿನ ಆರ್ಥಿಕತೆ ಜರ್ಝರಿತಗೊಳ್ಳುತ್ತಿದೆ. ವೈಮಾನಿಕ ಇಂಧನ ಕೊರತೆ ಮತ್ತು ಬೆಲೆ ಹೆಚ್ಚಳದಿಂದ ವಿಮಾನಯಾನ ಸಂಸ್ಥೆಗಳು ವಿಮಾನಗಳ ಕಾರ್ಯಾಚರಣೆಯನ್ನೇ ರದ್ದುಗೊಳಿಸಿವೆ.

ತನ್ನ ಬಂದರುಗಳ ಮೇಲೆ ನೌಕಾ ದಿಗ್ಬಂಧನವನ್ನು ಮುಂದುವರೆಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡಿದ ಸ್ವಲ್ಪ ಸಮಯಲ್ಲೇ ಇರಾನ್ ಮತ್ತೆ ಹಾರ್ಮುಜ್ ಜಲಸಂಧಿಗೆ ಬಂದ್ ಮಾಡಿದೆ. ಅಲ್ಲದೆ ದಿಗ್ಬಂಧನ ತೆರವುಗೊಳಿಸುವವರೆಗೆ ಅನುಮೋದಿತ ಹಡಗುಗಳನ್ನು ಹೊರತುಪಡಿಸಿ ಉಳಿದೆಲ್ಲದಕ್ಕೂ ಜಲಸಂಧಿಯನ್ನು ಮುಚ್ಚುವುದಾಗಿ ಇರಾನ್ ಪ್ರತಿಜ್ಞೆ ಮಾಡಿದೆ.

ಇದೀಗ ಟ್ರಂಪ್‌ಗೆ ಮತ್ತೊಂದು ತಿರುಗೇಟು ನೀಡಿರುವ ಟೆಹ್ರಾನ್, ಹಾರ್ಮುಜ್ ಅನ್ನು ದಾಟಲು ಬಯಸುವ ಹಡಗುಗಳ ಮೇಲೆ ವಿಧಿಸುತ್ತಿರುವ ಸುಂಕದಿಂದ ಇರಾನ್ ತನ್ನ ಮೊದಲ ಆದಾಯವನ್ನು ಪಡೆದುಕೊಂಡಿದೆ ಎಂದು ಗಾಲಿಬಾಫ್‌ನ ಉಪ, ಹಮೀದ್ರೆಜ್ ಹಾಜಿಬಾಬೆಯ್ ಹೇಳಿದ್ದಾರೆ.

## ಗ್ಯಾರಂಟಿ ಯೋಜನೆಗಳಿಂದ ಸಂಪೂರ್ಣವಾಗಿ ಹಳಿತಪ್ಪಿದ ಅಭಿವೃದ್ಧಿ: ಎಚ್‌ಡಿಕೆ ಕಳವಳ

**ಬೆಂಗಳೂರು, ಏ.23:** ಕೇವಲ 2000 ರೂ. ಗ್ಯಾರಂಟಿ ಹಣದಿಂದ ಅಭಿವೃದ್ಧಿ ಸಾಧ್ಯವಿಲ್ಲ. ಮಹಿಳೆಯರು ಈ ಸಣ್ಣ ಮೊತ್ತಕ್ಕೆ ಮರುಳಾಗಬಾರದು. ಇದರಿಂದ ಕುಟುಂಬಗಳ ಉದ್ಧಾರ ಅಸಾಧ್ಯ. ಇಂತಹ ಗ್ಯಾರಂಟಿಗಳಿಂದ ರಾಜ್ಯ ಸರ್ಕಾರಕ್ಕೆ ತನ್ನ ಸಿಬ್ಬಂದಿಗೆ ಸಂಬಳ ಕೊಡಲಾಗದಂತ ದುಸ್ಥಿತಿ ಎದುರಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಕಳವಳ ವ್ಯಕ್ತಪಡಿಸಿದರು.

ಹೊಳೆನರಸೀಪುರ ತಾಲೂಕಿನ ಉದ್ದನ ಹೊಸಹಳ್ಳಿ ಗ್ರಾಮದಲ್ಲಿ ಶ್ರೀ ವೀರಾಂಜನೇಯಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ಕೇವಲ ಎರಡು ಸಾವಿರ ರೂಪಾಯಿಯಿಂದ ಅಭಿವೃದ್ಧಿ ಸಾಧ್ಯವಿಲ್ಲ. ಅದರಿಂದ ಆರೋಗ್ಯ, ಶಿಕ್ಷಣ ಸೇರಿದಂತೆ ಕುಟುಂಬಗಳ ಯಾವ ಅಗತ್ಯವು ಪೂರೈಕೆ ಆಗುವುದಿಲ್ಲ. ದೊಡ್ಡ ಕಾಯಿಲೆಗಳು ಬಂದಾಗ ಜನರಿಗೆ ಈ ಎರಡು ಸಾವಿರ ರೂಪಾಯಿಯಿಂದ ಚಿಕಿತ್ಸೆ ಪಡೆಯಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಕರ್ನಾಟಕದಲ್ಲಿ ಸರ್ಕಾರಿ ನೌಕರರಿಗೆ ಮಾರ್ಚ್ ತಿಂಗಳ ವೇತನವನ್ನು ಇನ್ನು ಕೊಟ್ಟಿಲ್ಲ ಎನ್ನುವ ಮಾಹಿತಿ ಇದೆ. ಹಾಗೆಯೇ ಕಾಂಗ್ರೆಸ್ ಆಡಳಿತ ಇರುವ ಹಿಮಾಚಲ ಪ್ರದೇಶದಲ್ಲಿಯೂ ಸರ್ಕಾರಿ ನೌಕರರ ಸಂಬಳವನ್ನು ನೀಡಲು ಪರದಾಡುತ್ತಿದೆ. ಅಲ್ಲಿನ ಸರ್ಕಾರವು ನೌಕರರ ಸಂಬಳವನ್ನು ಕಡಿತ ಮಾಡಿಕೊಂಡಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಹೀಗಾಗಿ ರಾಜ್ಯಗಳ ಅಭಿವೃದ್ಧಿ ಸಂಪೂರ್ಣವಾಗಿ ಹಳಿತಪ್ಪಿದೆ ಇದಕ್ಕೆ ಕಾಂಗ್ರೆಸ್ ಕಾರಣವಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು.

ಸುಮಾರು 7,26,000 ಲಕ್ಷ ಕೋಟಿ ರೂ.ಗೂ ಹೆಚ್ಚು ಹಣವನ್ನು ಕರ್ನಾಟಕ ಸರ್ಕಾರ ಸಾಲ ಮಾಡಿದೆ. ಕಾಂಗ್ರೆಸ್ ಸರ್ಕಾರವೇ ಅತಿಹೆಚ್ಚು ಸಾಲ ಮಾಡಿದೆ. ರಾಜ್ಯದ ಪ್ರತಿಯೊಬ್ಬರ ತಲೆಯ ಮೇಲೆಯೂ ಕನಿಷ್ಠವೆಂದರೂ ಒಂದು ಲಕ್ಷ ರೂಪಾಯಿಗೂ ಅಧಿಕ ಸಾಲವಿದೆ. ಇದಕ್ಕೆ ಕಾರಣ ಯಾರು, ಇದನ್ನು ತೀರಿಸುವವರು ಯಾರು, ಇಷ್ಟು ಸಾಲವನ್ನು ಮಾಡಿದರೆ ರಾಜ್ಯ ಅಭಿವೃದ್ಧಿ ಹೊಂದಲು ಸಾಧ್ಯವೇ ಎಂದು ಸಚಿವ ಕುಮಾರಸ್ವಾಮಿ ಆತಂಕ ವ್ಯಕ್ತಪಡಿಸಿದರು.

ಒಂದು ಕೈಯಲ್ಲಿ 2000 ರೂ. ಕೊಡುತ್ತಾರೆ. ಇನ್ನೊಂದು ಕೈಯಲ್ಲಿ ತೆರಿಗೆ ಮೇಲೆ ತೆರಿಗೆ ವಿಧಿಸುತ್ತಾರೆ. ಬೆಲೆ ಏರಿಕೆಗಳ ಬಗ್ಗೆ ಹೇಳುವ ಹಾಗೆಯೇ ಇಲ್ಲ. ಇತ್ತೀಚೆಗೆ ವಿದ್ಯುತ್ ದರ ಹೆಚ್ಚಿಸಿದರು. ಹಾಗೆಯೇ ಮದ್ಯದ ದರವನ್ನು ಏರಿಸಿದರು. ಎಷ್ಟು ಸಾಧ್ಯವೊ ಅಷ್ಟು ಕಡೆ ಜನರನ್ನು ಕಿತ್ತು ತಿನ್ನುವ ಕೆಲಸವನ್ನು ಈ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ಎಚ್.ಡಿ.ಕೆ. ಕಿಡಿಕಾರಿದರು.

### ರಾಜ್ಯ ಸರ್ಕಾರಕ್ಕೆ ತನ್ನ ಸಿಬ್ಬಂದಿಗೆ ವೇತನ ನೀಡಲಾಗದ ಸ್ಥಿತಿ ನಿರ್ಮಾಣವಾಗಿದೆ



ಚುನಾವಣೆ ಬಂದಾಗ ನಿಮ್ಮ ಭವಿಷ್ಯ ಮತ್ತು ನಿಮ್ಮ ಮಕ್ಕಳ ಉದ್ಧಾರಕ್ಕಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವವರನ್ನು ನೋಡಿ ಆಯ್ಕೆ ಮಾಡಿ. ಜಾತಿ ನೋಡಿ ಮತ ಹಾಕಬೇಡಿ. ಹಾಸನ ಜಿಲ್ಲೆ ಸೇರಿ ಇಡೀ ರಾಜ್ಯದಲ್ಲಿ ಆರೋಗ್ಯ, ಶಿಕ್ಷಣ, ವಿದ್ಯುತ್ ಕ್ಷೇತ್ರಗಳಲ್ಲಿ ಆಗಿರುವ ಅಭಿವೃದ್ಧಿಯನ್ನು ಗಮನಿಸಿ. ನನಗೆ ದೊರೆತ ಸಣ್ಣ ಅವಧಿಯಲ್ಲಿ ಇಷ್ಟೆಲ್ಲ ಕೆಲಸಗಳನ್ನು ಮಾಡಿದ್ದೇನೆ. ಸಾವಿರಾರು ಶಿಕ್ಷಕರನ್ನು ನೇರವಾಗಿ ಮತ್ತು ಪಾರದರ್ಶಕವಾಗಿ ನೇಮಕ ಮಾಡಿದ್ದೆ. ಆದರೆ ಈಗಿನ ಸರ್ಕಾರಕ್ಕೆ ಒಂದೇ ಒಂದು ನೇಮಕಾತಿ ಮಾಡುವ ಶಕ್ತಿಯು ಇಲ್ಲವಾಗಿದೆ ಎಂದು ಕೇಂದ್ರ ಸಚಿವರು ದೂರಿದರು.

ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಕಿರಿಕೊಡ್ಲಿ ಮಠದ ಸಾಂಬ ಸದಾಶಿವ ಸ್ವಾಮೀಜಿ ಅವರು, ಅರಕಲಗೂಡಿನ ಚಿಲುಮೆ ಮಠದ ಜಯದೇವ ಸ್ವಾಮೀಜಿ ಅವರು ಸಾನಿಧ್ಯ ವಹಿಸಿದ್ದರು. ಗ್ರಾಮಸ್ಥರು ಬಹಳ ದೊಡ್ಡ ಪ್ರಮಾಣದಲ್ಲಿ ಸಭೆಯಲ್ಲಿ ನೆರೆದಿದ್ದರು. ಇದಕ್ಕೂ ದೇವಾಲಯಕ್ಕೆ ತೆರಳಿದ ಕೇಂದ್ರ ಸಚಿವರು ಶ್ರೀ ವೀರಾಂಜನೇಯ ಸ್ವಾಮಿಗೆ ಪೂಜೆ ಸಲ್ಲಿಸಿದರು.

### ಅವಕಾಶ ಕೊಟ್ಟರೆ ರಾಮರಾಜ್ಯ ಸ್ಥಾಪನೆ

ರಾಮರಾಜ್ಯ ಸ್ಥಾಪನೆಯಾಗಬೇಕು ಎಂದು ನೀವೆಲ್ಲರೂ ಶ್ರೀ ಆಂಜನೇಯನ ದೇವಸ್ಥಾನಗಳನ್ನು ಕಟ್ಟುತ್ತಿದ್ದೀರಿ. ಕೇಸರಿ ಶಾಲು ಹಾಕಿ ದೇವರನ್ನು ಪ್ರಾರ್ಥಿಸುತ್ತಿದ್ದೀರಿ. ನನ್ನದು ಕೂಡ ಅದೇ ಪ್ರಾರ್ಥನೆ. ಒಮ್ಮೆ ನನ್ನ ಕೈಗೆ ಸರ್ಕಾರ ಕೊಡಿ, ಕರ್ನಾಟಕದಲ್ಲಿ ರಾಮರಾಜ್ಯ ಸ್ಥಾಪನೆ ಮಾಡಿ ತೋರಿಸುತ್ತೇನೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಘೋಷಿಸಿದರು. ಹೊಳೆನರಸೀಪುರ ತಾಲೂಕಿನ ದೊಡ್ಡಬೀಕನಹಳ್ಳಿ ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಚಿವರು, ಯುವಕರು ಭುಜದ ಮೇಲೆ ಕೇಸರಿ ಶಾಲುಗಳನ್ನು ಧರಿಸಿರುವುದನ್ನು ಗಮನಿಸಿ, ನೀವು ಮಾತ್ರ ಕೇಸರಿ ಶಾಲು ಹಾಕಿದ್ದೀರಿ ನನಗೆ ಕೊಟ್ಟಿಲ್ಲ. ನಾನು ಕೂಡ ನಿಮ್ಮಂತೆ ರಾಮಭಕ್ತ ಎಂದು ನಗೆ ಚಟಾಕಿ ಹಾರಿಸಿದರು. ಕೇಸರಿ ಶಾಲು ನಮ್ಮ ಧರ್ಮದ ಸಂಕೇತ. ನಮ್ಮ ಧರ್ಮವು ವಿಶಾಲ ದೃಷ್ಟಿಕೋನದ ಮತ್ತು ಮಾನವೀಯ ಮೌಲ್ಯಗಳ ಆಧಾರದ ನಿಂತಿದೆ. ರಾಮನನ್ನು ನೆನಪು ಮಾಡಿಕೊಂಡಾಗಲಿಲ್ಲ ನಾವು ರಾಮರಾಜ್ಯ ಬಗ್ಗೆ ಮಾತನಾಡುತ್ತೇವೆ. ನನಗೆ ಒಂದೇ ಒಂದು ಸಲ ಅವಕಾಶ ಕೊಟ್ಟು ನೋಡಿ, ಕರ್ನಾಟಕದಲ್ಲಿ ರಾಮರಾಜ್ಯ ಸ್ಥಾಪನೆ ಮಾಡುತ್ತೇನೆ ಎಂದು ಕುಮಾರಸ್ವಾಮಿ ಹೇಳಿದರು.

# ಪಶ್ಚಿಮ ಬಂಗಾಳ: 2021ರಲ್ಲಿ 14 ಕಡೆ ಜಯದ ಅಂತರಕ್ಕಿಂತ ನೋಟಾಗೆ ಹೆಚ್ಚು ಮತ

**ಕೊಲ್ಕತ್ತಾ, ಏ.23:** 2021ರ ವಿಧಾನಸಭಾ ಚುನಾವಣೆಯಲ್ಲಿ, ಬಿಜೆಪಿ ಈ 152 ಕ್ಷೇತ್ರಗಳ ಪೈಕಿ 59 ಕ್ಷೇತ್ರಗಳನ್ನು ಗೆದ್ದಿತ್ತು, ಟಿಎಂಸಿ 93 ಕ್ಷೇತ್ರಗಳಲ್ಲಿ ಗೆದ್ದಿತ್ತು. ಮಮತಾ ಬ್ಯಾನರ್ಜಿ ಅವರನ್ನು ಹೇಗಾದರೂ ಮಾಡಿ ಅಧಿಕಾರದಿಂದ ಕೆಳಗಿಳಿಸುವಂತೆ ಮಾಡುವುದಕ್ಕೆ ಬಿಜೆಪಿ ಎಲ್ಲಾ ರೀತಿಯಲ್ಲಿ ಹರಸಾಹಸ ಪಡುತ್ತಿದೆ. ಈ ಮೊದಲ ಹಂತದಲ್ಲಿ ಚುನಾವಣೆಯನ್ನು ಎದುರಿಸುತ್ತಿರುವ ಕ್ಷೇತ್ರಗಳನ್ನೇ ಹೆಚ್ಚಾಗಿ ಗುರಿಯಾಗಿಸಿಕೊಂಡಿದೆ.




2021ರ ವಿಧಾನಸಭಾ ಚುನಾವಣೆಯಲ್ಲಿ ಸುಮಾರು 14 ವಿಧಾನಸಭಾ ಕ್ಷೇತ್ರಗಳಲ್ಲಿ ಗೆಲುವಿನ ಅಂತರಕ್ಕಿಂತ ನೋಟಾಗೆ ಚಲಾವಣೆಯಾದ ಮತಗಳೇ ಹೆಚ್ಚಿವೆ ಎನ್ನುವುದು ಕೂಡ ಉಲ್ಲೇಖನೀಯ. ಜಲಪೈಗುಡಿ ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕ ಡಾ. ಪ್ರದೀಪ್ ಕುಮಾರ್ (ಟಿಎಂಸಿ) 2021ರ ಚುನಾವಣೆಯಲ್ಲಿ 941 ಮತಗಳಿಂದ(ಒಟ್ಟು ಮತ 95,668) ಗೆಲುವು ಸಾಧಿಸಿದ್ದರು. 3381 ಮತಗಳು ನೋಟಾಗೆ ಚಲಾವಣೆಯಾಗಿದ್ದವು.

ರಾಣಿಬಂದ್ ಕ್ಷೇತ್ರದ ಹಾಲ ಶಾಸಕ ಜೋತ್ಸ್ನಾ ಮಾಂಡಿ(ಟಿಎಂಸಿ) 3939 ಮತಗಳ (ಒಟ್ಟು ಮತ 90,928) ಅಂತರದಿಂದ ಗೆಲುವು ಸಾಧಿಸಿದ್ದರು. 4,226 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ಬಂಕುರಾ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯ ಶಾಸಕ ನೀಲಾದ್ರಿ ಶೇಖರ್ 1468 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. 4507 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ಬರ್ಜೋರಾ ವಿಧಾನಸಭಾ ಕ್ಷೇತ್ರದಲ್ಲಿ ಟಿಎಂಸಿ ಶಾಸಕ ಅಲೋಕ್ ಮುಖರ್ಜಿ 2021ರ ವಿಧಾನಸಭಾ ಚುನಾವಣೆಯಲ್ಲಿ 3269 ಮತಗಳ ಅಂತರದಿಂದ ಗೆದ್ದಿದ್ದರು(ಒಟ್ಟು ಮತ 93,290) 4903 ಮತಗಳು ಈ ಕ್ಷೇತ್ರದಲ್ಲಿ ನೋಟಾಗೆ ಚಲಾವಣೆಯಾಗಿದ್ದವು.

ತಮ್ಲುಕ್ ಕ್ಷೇತ್ರದಲ್ಲಿ ಟಿಎಂಸಿ ಶಾಸಕ ಸೌಮೇನ್ ಕುಮಾರ್ 793 ಮತಗಳ ಅಂತರದಲ್ಲಿ ಗೆದ್ದಿದ್ದರು (ಒಟ್ಟು ಮತ 1,08,243). 1136 ಮತಗಳು ನೋಟಾಗೆ ಚಲಾವಣೆಯಾಗಿತ್ತು. ಕುಲ್ಟಿ ಕ್ಷೇತ್ರದಲ್ಲಿ ಬಿಜೆಪಿಯ ಶಾಸಕ ಅಜಯ್ ಕುಮಾರ್ 679 ಮತಗಳಿಂದ 2021ರ ವಿಧಾನಸಭಾ ಚುನಾವಣೆಯಲ್ಲಿ ಗೆದ್ದಿದ್ದರು(ಒಟ್ಟು ಮತ 81112). 3553 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ಮೊಯ್ನಾ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯ ಅಶೋಕ್ ದಿಂಡಾ 1260 ಮತಗಳ ಅಂತರದಲ್ಲಿ ಗೆದ್ದಿದ್ದರು(ಒಟ್ಟು ಮತ 108109). 1335 ಮತಗಳು ಈ ಕ್ಷೇತ್ರದಲ್ಲಿ ನೋಟಾಗೆ ಚಲಾವಣೆಯಾಗಿದ್ದವು.

ತಪನ್ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯ ಬಂದು ರಾಜ್ 1650 ಮತಗಳ ಅಂತರದಲ್ಲಿ ಗೆದ್ದಿದ್ದರು(84381 ಒಟ್ಟು ಮತಗಳು). 1703 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ದಂತನ್ ಕ್ಷೇತ್ರದಲ್ಲಿ ಟಿಎಂಸಿಯ ಬಿಕ್ರಂ ಚಂದ್ರ ಪ್ರಧಾನ್ 623 ಮತಗಳ ಅಂತರದಲ್ಲಿ ಗೆದ್ದಿದ್ದರು (95209 ಒಟ್ಟು ಮತಗಳು). 1250 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ಮುರ್ಷಿದಾಬಾದ್ ಕ್ಷೇತ್ರದಲ್ಲಿ ಬಿಜೆಪಿಯ ಗೌರಿಶಂಕರ್ ಘೋಷ್ 2491 ಮತಗಳ ಅಂತರದಿಂದ ಗೆದ್ದಿದ್ದರು (ಒಟ್ಟು ಮತಗಳು). 2904 ಮತಗಳು ನೋಟಾಗೆ ಚಲಾವಣೆಯಾಗಿದ್ದವು.

ಘಾಟಲ್ ಕ್ಷೇತ್ರದಲ್ಲಿ ಬಿಜೆಪಿಯ ಸಿತಾಲ್ ಕಾಪಟ್ 966 ಮತಗಳಿಂದ ಗೆದ್ದಿದ್ದರು (105812 ಒಟ್ಟು ಮತಗಳು). 1305 ಮತಗಳು ಈ ವಿಧಾನಸಭಾ ಕ್ಷೇತ್ರದಲ್ಲಿ ನೋಟಾಗೆ ಚಲಾವಣೆಯಾಗಿತ್ತು. ದಿನಹಾಟ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯ ನಿತೀಶ್ ಪ್ರಾಮಾಣಿಕ್ ಕೇವಲ 57 ಮತಗಳ ಅಂತರದಲ್ಲಿ ಗೆದ್ದಿದ್ದರು (116035 ಒಟ್ಟು ಮತಗಳು) 1537 ಮತಗಳು ನೋಟಾಗೆ ಚಲಾವಣೆಯಾಗಿದ್ದವು.

ಬಲರಾಮ ಪುರ ಕ್ಷೇತ್ರದ 2021ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಬನೇಸ್ವರ್ ಮಹಾಟೋ 423 ಮತಗಳಿಂದ ಗೆದ್ದಿದ್ದರು (89521 ಒಟ್ಟು ಮತಗಳು). 2441 ಮತಗಳು ನೋಟಾಗೆ ಚಲಾವಣೆಯಾಗಿದ್ದವು. ಕಲ್ಯಾಣಿ ಕ್ಷೇತ್ರದಲ್ಲಿ ಬಿಜೆಪಿ ಅಂಬಿಕಾ ರಾಯ್ 2206 ಮತಗಳಿಂದ ಗೆದ್ದಿದ್ದರು(97026 ಒಟ್ಟು ಮತಗಳು). 2577 ಮತಗಳು ನೋಟಾಗೆ ಚಲಾವಣೆಯಾಗಿದ್ದವು.

# ನ್ಯಾಯಾಲಯದ ವಿಚಾರಣೆ ವೀಡಿಯೋ ಹಂಚಿಕೆ: ಕೇಜ್ರಿವಾಲ್‌ಗೆ ನೋಟಿಸ್

**ನವದೆಹಲಿ, ಏ.23:** ನ್ಯಾಯಾಲಯದ ವಿಚಾರಣೆಯ ವೀಡಿಯೋವನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡ ಹಿನ್ನಲೆ ದೆಹಲಿ ಹೈಕೋರ್ಟ್ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ನೋಟಿಸ್ ಜಾರಿ ಮಾಡಿದೆ.

ಹೊಸ ಅಬಕಾರಿ ನೀತಿಯಲ್ಲಿ ಅಕ್ರಮ ಆರೋಪ ಪ್ರಕರಣದಲ್ಲಿ ಕೇಜ್ರಿವಾಲ್ ಅವರು ವೈಯಕ್ತಿಕವಾಗಿ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ವಾದವನ್ನು ಮಂಡಿಸಿದ್ದರು. ಬಳಿಕ ಇದನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ನ್ಯಾಯಾಲಯದ ವಿಚಾರಣೆಯ ವೀಡಿಯೋಗಳನ್ನು ಹರಡುವುದು ನ್ಯಾಯಾಂಗದ ಗೌರವ ಮತ್ತು




ಮಾನವನ್ನು ಕುಂಠಿತಗೊಳಿಸುತ್ತದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಆದ್ದರಿಂದ ಇಂತಹ ವಿಷಯಗಳನ್ನು ತಕ್ಷಣ ತೆಗೆದುಹಾಕಬೇಕು ಎಂದು ಆದೇಶಿಸಿದೆ. ನ್ಯಾಯಮೂರ್ತಿ ಸ್ವರ್ಣಾ ಕಾಂತಾ ಶರ್ಮಾ ಅವರು ನ್ಯಾಯಾಲಯದಲ್ಲಿ ನಡೆದ ವಿಚಾರಣೆಯ ವೀಡಿಯೋಗಳನ್ನು ತೆಗೆದುಹಾಕುವಂತೆ ಫೇಸ್‌ಬುಕ್, ಗೂಗಲ್, ಎಕ್ಸ್ ಸೇರಿದಂತೆ ಸಾಮಾಜಿಕ ಮಾಧ್ಯಮ ಮಧ್ಯಸ್ಥರಿಗೆ ಮತ್ತು ಸರ್ಚ್ ಎಂಜಿನ್‌ಗಳಿಗೆ ನಿರ್ದೇಶನ ನೀಡಿದ್ದಾರೆ. ಇದಲ್ಲದೆ, ಪತ್ರಕರ್ತ ರವೀಶ್ ಕುಮಾರ್ ಸೇರಿದಂತೆ ವೀಡಿಯೋ ಅಪ್ಲೋಡ್ ಮಾಡಿದ ಇತರ ವ್ಯಕ್ತಿಗಳಿಗೂ ನೋಟಿಸ್ ಜಾರಿ ಮಾಡಲಾಗಿದೆ. ವೀಡಿಯೋದಲ್ಲಿ ಕೇಜ್ರಿವಾಲ್ ಅವರು ನ್ಯಾಯಮೂರ್ತಿ ಸ್ವರ್ಣಾ ಕಾಂತಾ ಶರ್ಮಾ ಅವರ ಮುಂದೆ ವೈಯಕ್ತಿಕವಾಗಿ ವಾದಿಸುತ್ತಿದ್ದುದು ಕಂಡುಬಂದಿದೆ. ಈ ಅರ್ಜಿಯಲ್ಲಿ ತಮ್ಮನ್ನು ಪ್ರಕರಣದಿಂದ ಹಿಂತೆಗೆದುಕೊಳ್ಳುವಂತೆ ಕೋರಲಾಗಿತ್ತು.

# ನಿಮ್ಮನ್ನು ಯಾರೂ ಉಳಿಸಲು ಸಾಧ್ಯವಿಲ್ಲ: ಬಿಜೆಪಿ ನಾಯಕರಿಗೆ ಮಹುವಾ ಮೊಯಿತ್ರಾ ಎಚ್ಚರಿಕೆ

**ನವದೆಹಲಿ, ಏ.23:** ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನದ ದಿನದಂದೇ ತೃಣಮೂಲ ಕಾಂಗ್ರೆಸ್ ಸಂಸದೆ ಮಹುವಾ ಮೊಯಿತ್ರಾ ಹೊಸ ವಿವಾದ ಹುಟ್ಟುಹಾಕಿದ್ದು, ಕೋಲ್ಕತ್ತಾದಲ್ಲಿ ಬೀಡುಬಿಟ್ಟಿರುವ ಇಬ್ಬರು ಹಿರಿಯ ಬಿಜೆಪಿ ನಾಯಕರ ರಹಸ್ಯ ಸ್ಥಳ ಮತ್ತು ಅವರ ಚಲನವಲನಗಳನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಿ ಕಟುವಾದ ಎಚ್ಚರಿಕೆ ನೀಡಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಹಿಟ್ ಲಿಸ್ಟ್‌ನಂತೆ ಕಾಣುವ ಚಿತ್ರವನ್ನು ಹಂಚಿಕೊಂಡಿದ್ದಾರೆ. ಇದರಲ್ಲಿ ಬಿಜೆಪಿ ನಾಯಕರಾದ ಸೌರಭ್‌ಸಿಂಗ್, ಪ್ರೊ.ಸ್ವದೇಶ್‌ಸಿಂಗ್ ಮತ್ತು ಇತ್ತೀಚೆಗಷ್ಟೇ ಬಿಜೆಪಿ ಸೇರಿದ ಟೆನಿಸ್ ದಂತಕಥೆ ಲಿಯಾಂಡರ್ ಪೇಸ್ ಅವರ ಚಿತ್ರಗಳಿವೆ. ವಿಶೇಷವೆಂದರೆ, ಸೌರಭ್ ಮತ್ತು ಸ್ವದೇಶ್ ಚಿತ್ರಗಳನ್ನು ಕೆಂಪುಬಣ್ಣದಲ್ಲಿ ವೃತ್ತಾಕಾರವಾಗಿ ಗುರುತಿಸಲಾಗಿದ್ದು, ಫೋಟೋ ಮೇಲೆ S+S



ಎಂದು ಬರೆಯಲಾಗಿದೆ.

ಛತ್ತೀಸ್‌ಗಢದ ಮಾಜಿ ಬಿಜೆಪಿ ಶಾಸಕ ಸೌರಭ್‌ಸಿಂಗ್ ಬಂಗಾಳದ ಮತದಾರರ ಮೇಲೆ ಪ್ರಭಾವ ಬೀರಲು ಹಣ ಹಂಚಿಕೆ ಮಾಡುತ್ತಿದ್ದಾರೆ ಎಂದು ಮೊಯಿತ್ರಾ ಗಂಭೀರವಾಗಿ ಆರೋಪಿಸಿದ್ದು, 'ಸೌರಭ್ ಸಿಂಗ್, ಎಚ್ಚರಿಕೆಯಿಂದಿರಿ. ನನ್ನ ಟ್ವೀಟ್ ಬಳಿಕ ನೀವು ಎಲ್ಗಿನ್ ಹೋಟೆಲ್‌ನಿಂದ ಚೆಕ್‌ಔಟ್ ಮಾಡಿ ನೊವೊಟೆಲ್‌ಗೆ ತೆರಳಿ ಹಣ ವಿತರಣೆ ಮುಂದುವರಿಸುತ್ತಿದ್ದೀರ. ನೆನಪಿರಲಿ, ಇದು ಬಂಗಾಳ, ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್ ಕೂಡ ನಿಮ್ಮನ್ನು ಉಳಿಸಲು ಸಾಧ್ಯವಿಲ್ಲ' ಎಂದು ಎಚ್ಚರಿಕೆ ನೀಡಿದ್ದಾರೆ.

ಇದು ಬಿಜೆಪಿ ನಾಯಕರಿಗೆ ಮೊಯಿತ್ರಾ ನೀಡುತ್ತಿರುವ ಎರಡನೇ ಎಚ್ಚರಿಕೆಯಾಗಿದ್ದು, ಸತ್ಯವತಿ ಕಾಲೇಜಿನ ಪ್ರಾಧ್ಯಾಪಕಿ ಸ್ವದೇಶ್ ಸಿಂಗ್ ಮತ್ತು ಸೌರಭ್‌ಸಿಂಗ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರ ಹೆಸರಿನಲ್ಲಿ ಜನರನ್ನು ಕರೆಸಿಕೊಂಡು ವಸೂಲಿ ಮಾಡುತ್ತಿದ್ದಾರೆ ಮತ್ತು ನಗದು ಹಂಚುತ್ತಿದ್ದಾರೆ ಎಂದು ಸಂಸದೆ ದೂರಿದ್ದಾರೆ. ನಾವು ನಿಮ್ಮ ಪ್ರತಿಯೊಂದು ನಡೆಯನ್ನು ಗಮನಿಸುತ್ತಿದ್ದೇವೆ, ನೀವು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಗುಡುಗಿದ್ದಾರೆ.

ರಾಜ್ಯದಲ್ಲಿ ಮೊದಲ ಹಂತದ ಚುನಾವಣೆ ನಡೆಯುತ್ತಿರುವಾಗಲೇ ಸಂಸದೆಯೊಬ್ಬರು ವಿರೋಧ ಪಕ್ಷದ ನಾಯಕರ ಇರುವಿಕೆಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಿರುವುದು ಭದ್ರತೆಯ ದೃಷ್ಟಿಯಿಂದಲೂ ಚರ್ಚೆಗೆ ಕಾರಣವಾಗಿದೆ. ಮೊಯಿತ್ರಾ ಅವರ ಈ ಬಹಿರಂಗ ಬೆದರಿಕೆ ಮತ್ತು ಗಂಭೀರ ಆರೋಪಗಳ ಕುರಿತು ಬಿಜೆಪಿ ಇದುವರೆಗೆ ಪ್ರತಿಕ್ರಿಯೆ ನೀಡಿಲ್ಲ.

# ಜೆಡಿಯು ಹೊಸ ರಾಷ್ಟ್ರೀಯ ನಾಯಕರ ಪಟ್ಟಿಯಲ್ಲಿ ನಿತೀಶ್ ಪುತ್ರ ನಿಶಾಂತ್ ಹೆಸರಿಲ್ಲ

**ನವದೆಹಲಿ, ಏ.23:** ಬಿಹಾರದ ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಸಂಯುಕ್ತ ಜನತಾದಳ –ಜೆಡಿಯು ತನ್ನ ಹೊಸ ರಾಷ್ಟ್ರೀಯ ತಂಡದ ಪಟ್ಟಿಯನ್ನು ಬುಧವಾರ ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ನಿತೀಶ್ ಪುತ್ರ ನಿಶಾಂತ್ ಕುಮಾರ್ ಹೆಸರು ಕಾಣಿಸಿಕೊಂಡಿಲ್ಲ. ಅಂದರೆ ಸಾಂಸ್ಥಿಕ ಪುನಾರಚನೆ ಮಾಡಿದಾಗ ನಿಶಾಂತ್ ಕುಮಾರ್‌ಗೆ ಯಾವುದೇ ಸ್ಥಾನ ನೀಡಲಾಗಿಲ್ಲ.

ಸಿಎಂ ಸ್ಥಾನಕ್ಕೆ ನಿತೀಶ್ ರಾಜೀನಾಮೆ ನೀಡಿ ರಾಜ್ಯಸಭೆಗೆ ತೆರಳಿದ ನಂತರ ಜೆಡಿಯು ಸಾಂಸ್ಥಿಕ ಪುನಾರಚನೆಯನ್ನು ಮಾಡಿದೆ. ನಿತೀಶ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹುದ್ದೆಯಲ್ಲಿ ಮುಂದುವರಿದಿದ್ದಾರೆ. ಸಂಜಯ್ ಕುಮಾರ್ ಝಾ ಪಕ್ಷದ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರಾಗಿಯೂ ತಮ್ಮ ಸ್ಥಾನ ಉಳಿಸಿಕೊಂಡಿದ್ದಾರೆ.

ನಿತೀಶ್ ಅವರ ಮಗನಾದ ನಿಶಾಂತ್ ಅವರಿಗೆ ಯಾವುದೇ ಸ್ಥಾನವನ್ನು ನೀಡದಿರಲು



ಜೆಡಿಯು ನಿರ್ಧರಿಸಿದೆ. ನಿಶಾಂತ್ ಇತ್ತೀಚೆಗೆ ಪಕ್ಷಕ್ಕೆ ಸೇರಿದ್ದು ಅನೇಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ.

ಆದ್ದರಿಂದ ನಿಶಾಂತ್‌ಗೆ ಯಾವುದಾದರು ಸ್ಥಾನ ಸಿಗಬಹುದು ಎಂಬ ನಿರೀಕ್ಷೆಯಿತ್ತು. ಆದರೆ ಯಾವುದೇ ಸ್ಥಾನ ಇಲ್ಲದಿರವುದು ಅನೇಕರಲ್ಲಿ ಆಶ್ಚರ್ಯ ಉಂಟುಮಾಡಿದೆ. ಇನ್ನು ನಿಶಾಂತ್ ಮೇ 3ರಂದು ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುವ ಸಾಧ್ಯತೆಯಿದೆ.

ಈ ನಡುವೆ ಈ ಪಟ್ಟಿ ಬಿಡುಗಡೆಯಾಗಿದೆ. ಪಕ್ಷವು ರಾಷ್ಟ್ರೀಯ ಉಪಾಧ್ಯಕ್ಷರ ಸಂಖ್ಯೆಯನ್ನು ಒಂದಕ್ಕೆ ಇಳಿಸಿದೆ. ಮಾಜಿ ಸಂಸದ ಚಂದೇಶ್ವರ್ ಪ್ರಸಾದ್ ಚಂದ್ರವಂಶಿ ಅವರನ್ನು ಏಕೈಕ ರಾಷ್ಟ್ರೀಯ ಉಪಾಧ್ಯಕ್ಷರನ್ನಾಗಿ ಹೆಸರಿಸಲಾಗಿದೆ.

ಹಿರಿಯ ನಾಯಕರಾದ ಮನೀಶ್ ವರ್ಮಾ, ಶ್ಯಾಮ್ ರಜಕ್ ಮತ್ತು ಅಶೋಕ್ ಚೌಧರಿ ಪ್ರಧಾನ ಕಾರ್ಯದರ್ಶಿಗಳಾಗಿ ಮುಂದುವರಿಯಲಿದ್ದಾರೆ. ಆದರೆ ಅಫಾಕ್ ಅಹ್ಮದ್ ಖಾನ್ ಮತ್ತು ಗುಲಾಮ್ ರಸೂಲ್ ಬಲ್ಯಾವಿ ಕೂಡ ಪ್ರಧಾನ ಕಾರ್ಯದರ್ಶಿಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಅಲೋಕ್‌ಕುಮಾರ್ ಸುಮನ್ ಅವರನ್ನು ಖಜಾಂಚಿಯಾಗಿ ನೇಮಿಸಲಾಗಿದ್ದು, ರಾಜೀವ್ ರಂಜನ್ ಪ್ರಸಾದ್ ಕಾರ್ಯದರ್ಶಿ ಮತ್ತು ವಕ್ತಾರರಾಗಿ 2 ಹುದ್ದೆ ವಹಿಸಿಕೊಳ್ಳಲಿದ್ದಾರೆ. ಜೆಡಿಯುನ ಹೊಸ ರಚನೆಯಲ್ಲಿ 24 ರಾಷ್ಟ್ರೀಯ ಪದಾಧಿಕಾರಿಗಳಿದ್ದಾರೆ.

# ಬಿಜೆಪಿ ಏಜೆಂಟ್, ಗೋ ಬ್ಯಾಕ್ ಎಂದು ಹುಮಾಯೂನ್ ಕಬೀರ್ ವಿರುದ್ಧ ಟಿಎಂಸಿ ಕಾರ್ಯಕರ್ತರ ಆಕ್ರೋಶ

**ಕೋಲ್ಕತ್ತಾ, ಏ.23:** ಪಶ್ಚಿಮ ಬಂಗಾಳದಲ್ಲಿ ಮೊದಲನೆಯ ಹಂತದ ಮತದಾನದ ವೇಳೆ ಮತ ಚಲಾಯಿಸಲು ಬಂದ ಆಮ್ ಜನತಾ ಉನ್ನಯನ್ ಪಕ್ಷದ ಮುಖ್ಯಸ್ಥ ಹುಮಾಯೂನ್ ಕಬೀರ್ ವಿರುದ್ಧ ಟಿಎಂಸಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುರ್ಷಿದಾಬಾದ್‌ನ ನೌಡಾ ವಿಧಾನಸಭಾ ಕ್ಷೇತ್ರದ ಶಿಬ್ನಗರ ಗ್ರಾಮದ ಮತಗಟ್ಟೆಯಲ್ಲಿ ಕಬೀರ್ ಮತ ಚಲಾಯಿಸಲು ಬಂದಾಗ ಟಿಎಂಸಿ ಬೆಂಬಲಿಗರು ಪ್ರತಿಭಟನೆ ನಡೆಸಿದ್ದಾರೆ. ಹುಮಾಯೂನ್ ವಿರುದ್ಧ 'ಬಿಜೆಪಿ ಏಜೆಂಟ್, ಗೋ ಬ್ಯಾಕ್' ಘೋಷಣೆ ಕೂಗಿದ್ದಾರೆ. ಸ್ಥಳೀಯ ಟಿಎಂಸಿ ನಾಯಕರ ನೇತೃತ್ವದಲ್ಲಿ, ಪ್ರತಿಭಟನಕಾರರು ಕಬೀರ್ ಅವರ ವಾಹನವನ್ನು ಸುತ್ತುವರೆದರು. ಸದ್ಯ ಪ್ರದೇಶದಲ್ಲಿ ಉದ್ವಿಗ್ನತೆ ಉಂಟಾಗಿದೆ.

ಮುರ್ಷಿದಾಬಾದ್‌ನ ಭರತ್‌ಪುರದ ಶಾಸಕರಾಗಿರುವ ಕಬೀರ್, ಕಳೆದ ವರ್ಷ ಡಿಸೆಂಬರ್‌ನಲ್ಲಿ ಬಾಬ್ರಿ ಮಸೀದಿ ಸ್ಥಾಪಿಸುವ ಹೇಳಿಕೆಗಳ ಬಳಿಕ ಟಿಎಂಸಿಯಿಂದ ಅಮಾನತುಗೊಂಡಿದ್ದಾರೆ. ಅದಾದ ಬಳಿಕ ತಮ್ಮದೇ ಆದ ಪಕ್ಷವನ್ನು ಸ್ಥಾಪಿಸಿದ್ದಾರೆ. ಆದರೆ ಇತ್ತೀಚೆಗೆ ಬಿಜೆಪಿ ಜತೆಗೆ ಕೈಜೋಡಿಸಿದ್ದಾರೆ, ಮುಸ್ಲಿಂ ಮತಗಳನ್ನು ವಿಭಜಿಸಲು ಬಿಜೆಪಿಯೊಂದಿಗೆ ಒಪ್ಪಂದ ಮಾಡಿಕೊಂಡಿದ್ದಾರೆ ಎಂಬ ಆರೋಪಗಳು ಕೇಳಿಬಂದಿದೆ. ಈ ಸಂಬಂಧ ಸ್ಟಿಂಗ್ ಆಪರೇಷನ್ ವಿಡಿಯೋಗಳೂ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು.

ವಿಡಿಯೋದಲ್ಲಿ ಕಬೀರ್ ಅವರು ಅಪರಿಚಿತ ವ್ಯಕ್ತಿಯೊಂದಿಗೆ ಮಾತನಾಡುತ್ತಾ, ತಾವು ಬಿಜೆಪಿಯ ಸುವೇಂದು ಅಧಿಕಾರಿ ಅವರೊಂದಿಗೆ ಗುಪ್ತ ಒಪ್ಪಂದ ಮಾಡಿಕೊಂಡಿರುವುದಾಗಿ ಹೇಳಿರುವುದು ಕಂಡು ಬಂದಿದೆ. ಚುನಾವಣೆಯ ನಂತರ ಬಿಜೆಪಿ ಸರ್ಕಾರ ರಚಿಸಲು ಬೆಂಬಲ ನೀಡಿದರೆ ತಮಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಲಾಗುವುದು ಎಂದು ಸುವೇಂದು



ಭರವಸೆ ನೀಡಿರುವುದಾಗಿಯೂ ಕಬೀರ್ ಹೇಳಿದ್ದಾರೆ. ಅಷ್ಟು ಮಾತ್ರವಲ್ಲದೆ ಮುಸ್ಲಿಮರನ್ನು ಮೂರ್ಖರನ್ನಾಗಿಸುವುದು ಸುಲಭ ಎಂಬ ವಿವಾದಾತ್ಮಕ ಹೇಳಿಕೆಯೂ ಈ ಸ್ಟಿಂಗ್ ವಿಡಿಯೋದಲ್ಲಿದೆ.


ಈ ವಿಡಿಯೋ ಸದ್ಯ ಪಶ್ಚಿಮ ಬಂಗಾಳ ರಾಜಕೀಯದಲ್ಲಿ ತೀವ್ರ ಸಂಚಲನ ಮೂಡಿಸಿದೆ. ಇಂದು ಮೊದಲನೆಯ ಹಂತದ ಚುನಾವಣೆ ನಡೆಯುತ್ತಿರುವ ನಡುವೆ ಟಿಎಂಸಿ ಕಾರ್ಯಕರ್ತರು ಕಬೀರ್ ವಿರುದ್ಧ ಪ್ರತಿಭಟಿಸಿ ಬಿಜೆಪಿ ಏಜೆಂಟ್ ಎಂದು ಕರೆದಿದ್ದಾರೆ.

ಈ ನಡುವೆ ಎಜೆಯುಪಿ ಕಾರ್ಯಕರ್ತರು ತಮ್ಮ ಪಕ್ಷದ ಬೂತ್‌ಮಟ್ಟದ ಅಧ್ಯಕ್ಷರ ಮೇಲೆ ಆಡಳಿತ ಪಕ್ಷದ ಕಾರ್ಯಕರ್ತರು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿದ್ದಾರೆ. ಇನ್ನು ಭದ್ರತಾ ಪಡೆಗಳುಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಟಿಎಂಸಿ ತನ್ನ ಪಕ್ಷದ ಹಲವಾರು ಅಭ್ಯರ್ಥಿಗಳನ್ನು ಚುನಾವಣಾ ಕಣದಿಂದ ಹಿಂದೆ ಸರಿಯಲು ಲಂಚ ನೀಡಿದೆ ಎಂದು ಈ ಹಿಂದೆ ಕಬೀರ್ ದೂರಿದ್ದಾರೆ. 27 ಅಭ್ಯರ್ಥಿಗಳನ್ನು 9 ಲಕ್ಷದಿಂದ 30 ಲಕ್ಷ ರೂ.ಗಳವರೆಗಿನ ಮೊತ್ತಕ್ಕೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಖರೀದಿಸಿದ್ದಾರೆ. ತಮ್ಮ ಪಕ್ಷದ ಅಭ್ಯರ್ಥಿಗಳ ಸಂಖ್ಯೆ 142ರಿಂದ 115ಕ್ಕೆ ಇಳಿದಿದೆ ಎಂದು ಹೇಳಿದ್ದಾರೆ.

# ಮುರ್ಷಿದಾಬಾದ್‌ನಲ್ಲಿ ಕಚ್ಚಾಬಾಂಬ್ ದಾಳಿ

**ಮುರ್ಷಿದಾಬಾದ್, ಏ.23:** ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯ 152 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಮತದಾನ ಬಿರುಸಿನಿಂದ ನಡೆಯುತ್ತಿದ್ದು, ಮುರ್ಷಿದಾಬಾದ್ ಜಿಲ್ಲೆಯ ನೋಯ್ಡಾದಲ್ಲಿ ದುಷ್ಕರ್ಮಿಗಳು ಮತ ಕೇಂದ್ರದ ಬಳಿ ಕಚ್ಚಾಬಾಂಬ್ ಎಸೆದ ಘಟನೆ ನಡೆದಿದೆ. ಘಟನೆಯಲ್ಲಿ 7 ಮಂದಿ ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ.



ಗುರುವಾರ ಬೆಳಗ್ಗೆ 8ಗಂಟೆಗೆ ನಮಾಜ್ ಮಾಡಲು ತೆರಳಿದ್ದೆ. ನಮಾಜ್ ಮುಗಿಸಿ ಹೊರಬಂದಾಗ ಇಬ್ಬರು ಯುವಕರು ಕಚ್ಚಾಬಾಂಬ್ ತಂದು ನನ್ನ ಕಾಲ ಬಳಿಗೆ ಎಸೆದರು. ಅವರು ಸ್ಥಳೀಯ ನಾಯಕ ಹುಮಾಯೂನ್ ಕಬೀರ್ ಬೆಂಬಲಿಗರಿರಬಹುದು ಎಂದು ಸ್ಥಳದಲ್ಲೇ ಇದ್ದ ಸಂತ್ರಸ್ತರೊಬ್ಬರು ಹೇಳಿದ್ದಾರೆ.

ಶಿವನಗರದ ಪ್ರಾಥಮಿಕ ಶಾಲೆ ಬಳಿ ಕಚ್ಚಾಬಾಂಬ್ ಎಸೆಯಲಾಗಿದೆ. ಈ ಸಂದರ್ಭ ಟಿಎಂಸಿ ಅಭ್ಯರ್ಥಿ ಸಾಹಿನಾ ಮುಮ್ತಾಜ್ ಸಹ ಸಮೀಪದಲ್ಲೇ ಇದ್ದರು. ಯಾವುದೇ ಅಪಾಯವಿಲ್ಲದೇ ಅವರು ಪಾರಾಗಿದ್ದಾರೆ ಎಂದು ವರದಿ ತಿಳಿಸಿದೆ. ಘಟನೆಗೆ ಸಂಬಂಧಿಸಿದ ಪ್ರತಿಕ್ರಿಯಿಸಿದ ಟಿಎಂಸಿ ಸಂಸದ ಅಬು ತಹೇರ್ ಖಾನ್, ಹುಮಾಯುನ್ ಕಬೀರ್ ಅವರ ಆಮ್ ಜನತಾ ಉನ್ನಯನ್ ಪಕ್ಷದ ಕಾರ್ಯಕರ್ತರ ಕೈವಾಡವಿದೆ ಎಂದು ಶಂಕೆ ವ್ಯಕ್ತಪಡಿಸಿದ್ದಾರೆ.

ಸ್ಥಳದಲ್ಲಿ ಪೊಲೀಸರು ಮತ್ತು ಕೇಂದ್ರೀಯ ದಳಗಳನ್ನು ನಿಯೋಜಿಸುವ ಮೂಲಕ ಭದ್ರತೆ ಹೆಚ್ಚಿಸಲಾಗಿದೆ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಮುಖ್ಯ ಚುನಾವಣಾ ಆಯುಕ್ತ ಮನೋಜ್ ಅಗರ್ವಾಲ್ ತಿಳಿಸಿದ್ದಾರೆ.

# ಚೀನಾದ ನಾಗರಿಕರಿಗೆ ಪ್ರವಾಸಿ ವೀಸಾ ಪುನರಾರಂಭಿಸಲು ಕೇಂದ್ರ ಸರ್ಕಾರ ಸಿದ್ಧತೆ

**ನವದೆಹಲಿ,ಏ.23:** ಭಾರತ ಸರ್ಕಾರವು ಚೀನಾದ ನಾಗರಿಕರಿಗೆ ಪ್ರವಾಸಿ ವೀಸಾಗಳನ್ನು ಪುನರಾರಂಭಿಸಲು ಸಿದ್ಧತೆ ನಡೆಸುತ್ತಿದೆ. ಗಲ್ವಾನ್ ಕಣಿವೆಯಲ್ಲಿ ನಡೆದ ಹಿಂಸಾತ್ಮಕ ಘರ್ಷಣೆಯ ನಂತರ ಸುಮಾರು ಐದು ವರ್ಷಗಳ ಹಿಂದೆ ಈ ಸೇವೆಗಳನ್ನು ಸ್ಥಗಿತಗೊಳಿಸಲಾಗಿತ್ತು.




ಭಾರತ ಮತ್ತು ಚೀನಾ ಇತ್ತೀಚೆಗೆ ನೇರ ವಿಮಾನಯಾನವನ್ನು ಪುನರಾರಂಭಿಸಲು ನಿರ್ಧರಿಸಿದ್ದು, ದೀರ್ಘಕಾಲದಿಂದ ಸ್ಥಗಿತಗೊಂಡಿದ್ದ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಸಹ ಪುನಃ ಸ್ಥಾಪಿಸಲಾಗಿದೆ. ಹೊಸ ವೀಸಾ ನಿಯಮಗಳು ಚೀನಾ, ಹಾಂಗ್‌ಕಾಂಗ್ ಮತ್ತು ಮಕಾವುಗಳಿಂದ ಬರುವ ಪ್ರಯಾಣಿಕರಿಗೆ ಅನ್ವಯಿಸುತ್ತವೆ. ಎರಡೂ ದೇಶಗಳ ನಡುವಿನ ಉದ್ವಿಗ್ನತೆಯಿಂದಾಗಿ ಕಳೆದ ಕೆಲವು ವರ್ಷಗಳಿಂದ ಸ್ಥಗಿತಗೊಂಡಿದ್ದ ಪ್ರವಾಸೋದ್ಯಮ, ವ್ಯಾಪಾರ ಮತ್ತು ಜನರ ನಡುವಿನ ಸಂಪರ್ಕವನ್ನು ಪುನಶ್ಚೇತನಗೊಳಿಸುವ ಪ್ರಯತ್ನಗಳ ಭಾಗವಾಗಿ ಸರ್ಕಾರದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸಾಮಾನ್ಯ ವೀಸಾ ಕಾರ್ಯವಿಧಾನಗಳನ್ನು ಅನುಸರಿಸಲಾಗುತ್ತದೆಯಾದರೂ, ಭದ್ರತಾ ಕಾಳಜಿಗಳಿಂದಾಗಿ ಕೆಲವು ನಿರ್ಬಂಧಗಳು ಇನ್ನೂ ಅನ್ವಯವಾಗುತ್ತವೆ.

ಈ ನಿರ್ಧಾರವು ಎರಡೂ ದೇಶಗಳ ನಡುವಿನ ಆರ್ಥಿಕ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬಲಪಡಿಸುತ್ತದೆ ಎಂದು ತಜ್ಞರು ನಂಬಿದ್ದಾರೆ. ವ್ಯಾಪಾರ ಸಮುದಾಯವೂ ಈ ಕ್ರಮವನ್ನು ಸ್ವಾಗತಿಸಿದೆ. ಪ್ರಸ್ತುತ, ಎರಡೂ ದೇಶಗಳು ತಮ್ಮ ಹಿಂದಿನ ಭಿನ್ನಾಭಿಪ್ರಾಯಗಳನ್ನು ಬಿಟ್ಟು ಕ್ರಮೇಣ ಸಹಕಾರದತ್ತ ಸಾಗುತ್ತಿವೆ, ಎರಡೂ ದೇಶಗಳ ನಡುವಿನ ಸಂಬಂಧ ನಿಧಾನವಾಗಿ ಸುಧಾರಿಸುತ್ತಿದೆ ಎನ್ನಲಾಗಿದೆ.

# ಆಸ್ಪತ್ರೆಯಿಂದ ಶರದ್‌ಪವಾರ್ ಬಿಡುಗಡೆ

**ಮುಂಬೈ, ಏ.23:** ಮತ್ತೆ ಆರೋಗ್ಯದ ಸಮಸ್ಯೆಯಿಂದ ಇದೇ ತಿಂಗಳ 19ರಂದು ಇಲ್ಲಿನ ಬ್ರೀಜ್ ಕ್ಯಾಂಡಿ ಆಸ್ಪತ್ರೆಗೆ ದಾಖಲಾಗಿದ್ದ ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ–ಶರದ್ಚಂದ್ರ ಪವಾರ್ ಅಧ್ಯಕ್ಷ ಶರದ್ ಪವಾರ್ ಅವರನ್ನು ಗುರುವಾರ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಯಿತು.

ಶರದ್ ಪವಾರ್ ಅವರ ವಯಸ್ಸು ಹಾಗೂ ಇತ್ತೀಚಿನ ದಿನಗಳಲ್ಲಿ ಕಾಣಿಸಿಕೊಂಡ ಆರೋಗ್ಯ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಮುನ್ನೆಚ್ಚರಿಕಾ ಕ್ರಮವಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು.ಅವರ ಆರೋಗ್ಯ ಸ್ಥಿತಿ ಉತ್ತಮವಾಗಿದ್ದು, ಆತಂಕಪಡಬೇಕಾಗಿಲ್ಲ ಎಂದು ಆಸ್ಪತ್ರೆ ಮೂಲಗಳು ಹೇಳಿವೆ. ಮಹಾರಾಷ್ಟ್ರ ಉಪಮುಖ್ಯಮಂತ್ರಿ ಮತ್ತು ದಿವಂಗತ ಎನ್‌ಸಿಪಿ ಮುಖ್ಯಸ್ಥ ಅಜಿತ್ ಪವಾರ್ ಅವರ ಪತ್ನಿ ಸುನೇತ್ರಾ ಪವಾರ್ ಅವರು ಅಭ್ಯರ್ಥಿಯಾಗಿರುವ ವಿಧಾನಸಭಾ ಉಪಚುನಾವಣೆಯಲ್ಲಿ ಮತ ಚಲಾಯಿಸಲು ಬಾರಾಮತಿಗೆ ಪ್ರಯಾಣಿಸಲು ಸಾಧ್ಯವಾಗುವುದಿಲ್ಲ ಎಂದು ಪವಾರ್ ಟ್ವೀಟ್ ಮಾಡಿದ್ದರು.ಅಜಿತ್ ಪವಾರ್ ವಿಮಾನ ಅಪಘಾತದಲ್ಲಿ ನಿಧನರಾದ ಕಾರಣ ಉಪಚುನಾವಣೆ ಅನಿವಾರ್ಯವಾಯಿತು. ಸುನೇತ್ರಾ ಪವಾರ್ ಅವರಿಗೆ ಮತ ಚಲಾಯಿಸುವಂತೆ ಜನರಿಗೆ ಆಸ್ಪತ್ರೆಯಿಂದಲೇ ಶರದ್ ಪವಾರ್ ಮನವಿ ಮಾಡಿದ್ದರು.

# ದೆಹಲಿ ಮೇಯರ್–ಉಪಮೇಯರ್ ಆಯ್ಕೆಗೆ ಏ.29ರಂದು ಚುನಾವಣೆ

**ನವದೆಹಲಿ, ಏ.23:** ದೆಹಲಿ ಮುನಿಸಿಪಲ್ ಕಾರ್ಪೋರೇಷನ್ (ಡಿಎಂಸಿ) ಮೇಯರ್ ಹಾಗೂ ಉಪಮೇಯರ್ ಆಯ್ಕೆಗಾಗಿ ಏ.29ರಂದು ನಡೆಯಲಿರುವ ಚುನಾವಣೆಗೆ ಮೇಯರ್ ಸ್ಥಾನಕ್ಕೆ ಬಿಜೆಪಿಯ ಪ್ರವೇಶವಾಹಿ ಮತ್ತು ಉಪಮೇಯರ್ ಸ್ಥಾನಕ್ಕೆ ಮೋನಿಕಾ ಪಂತ್ ಗುರುವಾರ ನಾಮಪತ್ರ ಸಲ್ಲಿಸಿದ್ದಾರೆ. ಪ್ರವೇಶವಾಹಿ ಅವರು ರೋಹಿಣಿ ವಾರ್ಡ್ ಪ್ರತಿನಿಧಿಸಿದರೆ, ಮೋನಿಕಾ ಪಂತ್ ಅವರು ಮಹಾನಗರ ಪಾಲಿಕೆಯ ಆನಂದ್ ವಿಹಾರ್ ವಾರ್ಡ್ ಪ್ರತಿನಿಧಿಸುತ್ತಾರೆ.


■ **ಪ್ರವೇಶವಾಹಿ ಮತ್ತು ಮೋನಿಕಾ ಪಂತ್ ನಾಮಪತ್ರ ಸಲ್ಲಿಕೆ**

ನಾಮಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರವೇಶವಾಹಿ, ನಗರದಲ್ಲಿ ಸೌಲಭ್ಯಗಳು, ಡಾರ್ಕ್ ಸ್ಪಾಟ್‌ಗಳು ಮತ್ತು ಹಲವಾರು ಇತರ ಸಮಸ್ಯೆಗಳ ಬಗ್ಗೆ ಹೆಚ್ಚಿನ ಕೆಲಸಗಳನ್ನು ಮಾಡಬೇಕಾಗಿದೆ, ಸಾರ್ವಜನಿಕರಿಗೆ ಸೇವೆಗಳನ್ನು ಸುಧಾರಿಸಬೇಕಾಗಿದೆ ಎಂದು ಹೇಳಿದರು. ನಗರದ ಸೌಂದರ್ಯವನ್ನು ಹೆಚ್ಚಿಸುವ ಮತ್ತು ಒಟ್ಟಾರೆ ಅಭಿವೃದ್ಧಿಯ ಬಗ್ಗೆ ಎಂಸಿಡಿ ದೆಹಲಿ ಸರ್ಕಾರದೊಂದಿಗೆ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಮೇಯರ್ ಅಭ್ಯರ್ಥಿಗಳ ಜೊತೆಗೆ ದೆಹಲಿ ಮಹಾನಗರ ಪಾಲಿಕೆಯ ಸ್ಥಾಯಿ ಸಮಿತಿಗೆ ಜೈ ಭಗವಾನ್ ಯಾದವ್ ಮತ್ತು ಮನೀಶ್ ಚಡ್ಡಾ ಸೇರಿದಂತೆ ಇಬ್ಬರು ಸದಸ್ಯರ ಹೆಸರನ್ನು ಬಿಜೆಪಿ ಘೋಷಿಸಿದೆ. ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರವೇಶವಾಹಿ ಮತ್ತು ಮೋನಿಕಾ ಪಂತ್ ಅವರಿಗೆ ಶುಭ ಕೋರಿದ್ದಾರೆ. ಬಿಜೆಪಿಯ ದೂರದೃಷ್ಟಿ ಮತ್ತು 'ಅಂತ್ಯೋದಯ' ಮಂತ್ರವನ್ನು ಅಳವಡಿಸಿಕೊಳ್ಳುವ ಮೂಲಕ, ನಾಯಕರ ಅನುಭವ ಮತ್ತು ಅವರ ಶ್ರದ್ಧೆಯು ದೆಹಲಿಯ ಅಭಿವೃದ್ಧಿಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದು ಅವರು ಆಶಿಸಿದ್ದಾರೆ.

# ಪತ್ನಿ, ತಾಯಿಯನ್ನು ಕೊಂದು, ಇಬ್ಬರು ಮಕ್ಕಳೊಂದಿಗೆ ರೈಲಿಗೆ ತಲೆಕೊಟ್ಟ ವ್ಯಕ್ತಿ

**ತಿರುಪತಿ, ಏ.23:** ಆಂಧ್ರಪ್ರದೇಶದ ತಿರುಪತಿ ಜಿಲ್ಲೆಯಲ್ಲಿ ಬುಧವಾರ ಹೃದಯ ವಿದ್ರಾವಕ ಘಟನೆ ನಡೆದಿದ್ದು, ಐದು ಜನರ ಇಡೀ ಕುಟುಂಬವೇ ಕೆಲವೇ ಗಂಟೆಗಳಲ್ಲಿ ಪ್ರಾಣ ಕಳೆದುಕೊಂಡಿದೆ.



ಮಧ್ಯವಯಸ್ಕ ಮೋಹನ್ ಎಂಬ ವ್ಯಕ್ತಿ ತನ್ನ ಪತ್ನಿ ಮತ್ತು ಹೆತ್ತತಾಯಿಯನ್ನು ಕತ್ತು ಹಿಸುಕಿ ಕೊಂದು ಬಳಿಕ ಇಬ್ಬರು ಮಕ್ಕಳೊಂದಿಗೆ ರೈಲಿಗೆ ತಲೆಕೊಟ್ಟು ಆತ್ಮಹತ್ಯೆಗೆ ಶರಣಾದ ದಾರುಣ ಘಟನೆ ನಾರಾಯಣವನಂ ಮಂಡಲದ ವೆಂಕಟಕೃಷ್ಣಪಾಲೆಂ ಪಂಚಾಯತ್‌ನಲ್ಲಿ ನಡೆದಿದೆ.

ಮೋಹನ್ ಅವರ ಪತ್ನಿ ಹರಿತಾ(33) ಟೈಲರಿಂಗ್ ಮತ್ತು ಬ್ಯೂಟಿ ವ್ಯವಹಾರ ನಡೆಸುತ್ತಿದ್ದರು. ಆದರೆ ಅವರ ತಾಯಿ ಚಂದ್ರಕಲಾ (65) ಗೃಹಿಣಿಯಾಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಮೋಹನ್ ಅವರು ತನ್ನ ತಾಯಿ ಚಂದ್ರಕಲಾ (65) ಮತ್ತು ಪತ್ನಿ ಹರಿತಾ (33) ಅವರನ್ನು ಮನೆಯಲ್ಲಿ ಕತ್ತು ಹಿಸುಕಿ ಕೊಲೆ ಮಾಡಿದ್ದಾರೆ. ಬಳಿಕ ಅಲ್ಲಿಂದ ಇಬ್ಬರು ಮಕ್ಕಳಾದ ಕೌಶಿಕ್(14) ಮತ್ತು ಹರಿಣಿ (12) ಓದುತ್ತಿದ್ದ ಶಾಲೆಗೆ ಹೋಗಿ ಮನೆಯಲ್ಲಿ ಕುಟುಂಬದ ಸದಸ್ಯರೊಬ್ಬರು ನಿಧನ ಹೊಂದಿದ್ದಾರೆ ಎಂದು ಮಕ್ಕಳನ್ನು ಕರೆದುಕೊಂಡು ಬಂದಿದ್ದ. ಆದರೆ ಆತ ಮನೆಗೆ ವಾಪಸ್ ಆಗಿರಲಿಲ್ಲ.

ಹರಿತಾ ಅವರ ಸಹೋದರ ಮೋಹನ್‌ಗೆ ಕರೆ ಮಾಡಿದಾಗ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿದ್ದು ಗೊತ್ತಾಗಿದೆ. ಅನುಮಾನಗೊಂಡು ಮನೆಯನ್ನು ಪರಿಶೀಲಿಸಿದಾಗ ಇಬ್ಬರ ಶವ ಪತ್ತೆಯಾಗಿದೆ. ಬಳಿಕ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಪೊಲೀಸರು ಹುಡುಕಾಟ ನಡೆಸಿದಾಗ ಮೋಹನ್ ಮಕ್ಕಳೊಂದಿಗೆ ಪುತ್ತೂರು ತಾಲೂಕಿನ ವೇಪಗುಂಟ ಬಳಿಯ ರೈಲ್ವೆ ಹಳಿಯ ಮೇಲೆ ಮಲಗಿ ಆತ್ಮಹತ್ಯೆ ಮಾಡಿಕೊಂಡಿದ್ದು ತಿಳಿದು ಬಂದಿದೆ.

ಕೊಲೆ ಮತ್ತು ನಂತರ ಮೋಹನ್ ಆತ್ಮಹತ್ಯೆಯ ಹಿಂದಿನ ಉದ್ದೇಶ ಇನ್ನೂ ಸ್ಪಷ್ಟವಾಗಿ ತಿಳಿದು ಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಾಥಮಿಕ ವಿಚಾರಣೆಯಲ್ಲಿ ಮೋಹನ್‌ಗೆ ಯಾವುದೇ ಆರ್ಥಿಕ ಅಥವಾ ಮಾನಸಿಕ ಆರೋಗ್ಯ ಸಮಸ್ಯೆಗಳಿಲ್ಲ ಎಂದು ತಿಳಿದುಬಂದಿದೆ.

ಈ ಸಂಬಂಧ ನಾರಾಯಣವನಂ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ನಡೆಸುತ್ತಿದ್ದಾರೆ. ಅಲ್ಲದೆ ರೈಲ್ವೆ ಅಧಿಕಾರಿಗಳು ಹಳಿಗಳ ಮೇಲಿನ ಸಾವುಗಳ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

# ಎಚ್.ಟಿ.ಗ್ರಾಹಕರಿಗಾಗಿ ಬೆಸ್ಕಾಂನಿಂದ ಎಚ್‌ಟಿ ಮಿತ್ರ ಪೋರ್ಟಲ್ ಸೇವೆಗೆ ಸಚಿವ ಕೆ.ಜೆ.ಜಾರ್ಜ್ ಚಾಲನೆ

**ಬೆಂಗಳೂರು, ಏ.23:** ಬೆಸ್ಕಾಂನ ಹೈಟೆನ್ಷನ್ ಗ್ರಾಹಕರಿಗಾಗಿ ಸಂಸ್ಥೆಯ ಇಂಜಿನಿಯರ್‌ಗಳು ಅಭಿವೃದ್ಧಿ ಪಡಿಸಿರುವ ಸೇವೆ ಕೋರಿಕೆ/ಕುಂದುಕೊರತೆ ಪರಿಹಾರ ಪೋರ್ಟಲ್ "ಎಚ್‌ಟಿ ಮಿತ್ರ'ಗೆ ಇಂಧನ ಸಚಿವ ಕೆ.ಜೆ. ಜಾರ್ಜ್ ಗುರುವಾರ ಚಾಲನೆ ನೀಡಿದರು.

ಬೆಸ್ಕಾಂ ಕಾರ್ಪೋರೇಟ್ ಕಚೇರಿ ಯಲ್ಲಿ ಪೋರ್ಟಲ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಎಚ್.ಟಿ. ಗ್ರಾಹಕರು ವಿದ್ಯುತ್ ಸಂಬಂಧಿತ ಸೇವೆಗಳ ಕೋರಿಕೆಗೆ ಹಾಗೂ ದೂರುಗಳನ್ನು ದಾಖಲಿಸಿ ಪರಿಹಾರ ಕಂಡುಕೊಳ್ಳಲು ಈ ಪೋರ್ಟಲ್ ಪಾರದರ್ಶಕ ಮತ್ತು ಪರಿಣಾಮಕಾರಿ ವೇದಿಕೆಯಾಗಲಿದೆ.

ಈ ಸೌಲಭ್ಯವು ಬೆಸ್ಕಾಂ ವ್ಯಾಪ್ತಿಯಲ್ಲಿರುವ ಹೆಚ್ಟಿ ಗ್ರಾಹಕರಿಗೆ ಲಭ್ಯವಾಗಲಿದ್ದು, ಇದರಿಂದ ಒಟ್ಟಾರೆ 18,000ಕ್ಕೂ ಹೆಚ್ಚು ಗ್ರಾಹಕರಿಗೆ ಅನುಕೂಲವಾಗಲಿದೆ ಎಂದರು.

ಈ ಮೊದಲು ಹೆಚ್ಟಿ ಗ್ರಾಹಕರು ದೂರು ದಾಖಲಿಸಲು 1912 ಸಹಾಯವಾಣಿ ಅವಲಂಬಿಸಬೇಕಿತ್ತು




ಅಥವಾ ಖುದ್ದು ಬೆಸ್ಕಾಂ ಕಚೇರಿಗೆ ಭೇಟಿ ನೀಡಬೇಕಿತ್ತು. ಆದರೆ, ಗ್ರಾಹಕರಿಗೆ ತಮ್ಮ ದೂರಿನ ನೈಜ–ಸಮಯದ ಟ್ರ್ಯಾಕಿಂಗ್ ಸಾಧ್ಯವಾಗುತ್ತಿರಲಿಲ್ಲ. 'ಎಚ್‌ಟಿ ಮಿತ್ರ' ಪೋರ್ಟಲ್ ಈ ಎಲ್ಲ ಕೊರತೆಗಳನ್ನು ನೀಗಿಸಲಿದ್ದು, ದೂರು ಪ್ರಕ್ರಿಯೆಯನ್ನು ಒಂದೇ ಡಿಜಿಟಲ್ ವೇದಿಕೆಯಡಿ ಸಂಯೋಜಿಸುತ್ತದೆ. ಗ್ರಾಹಕರು ಲಾಗಿನ್ ಆಗಿ, ದೂರು ದಾಖಲಿಸಿದ ಕೂಡಲೇ ನೈಜ ಸಮಯದಲ್ಲಿ ಅದರ ಸ್ಥಿತಿಗತಿಯನ್ನು ಪರಿಶೀಲಿಸ ಬಹುದು. ಈ ಅಪ್ಲಿಕೇಶನ್‌ನಿಂದಲೇ ಗ್ರಾಹಕರ ಮೊಬೈಲ್‌ಗೆ ಎಸ್‌ಎಂಎಸ್ ಸಂದೇಶಗಳು ರವಾನೆಯಾಗಲಿದೆ, ಎಂದು ಪೋರ್ಟಲ್ ವಿಶೇಷವನ್ನು ವಿವರಿಸಿದರು. ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಸುವುದು ನಮ್ಮ ಸರ್ಕಾರದ ಆದ್ಯತೆ. ಸಮಸ್ಯೆಗಳು ಕಂಡುಬಂದಾಗ ತ್ವರಿತವಾಗಿ ಸ್ಪಂದಿಸಿ, ದೂರು ಪರಿಹರಿಸಲು ತಂತ್ರಜ್ಞಾನದ ಬಳಕೆ ಮಾಡಲಾಗಿದ್ದು, ಬೆಸ್ಕಾಂ ಇಂಜಿನಿಯರಿಗಳೇ ಇದನ್ನು ಸಿದ್ಧಪಡಿಸಿರುವುದು ಶ್ಲಾಘನೀಯ. ಇಂಥ ಗ್ರಾಹಕ ಸ್ನೇಹಿ ನೀತಿ ಹಾಗೂ ಕ್ರಮಗಳಿಗೆ ಸರ್ಕಾರದ ಬೆಂಬಲ ಸದಾ ಇರುತ್ತದೆ ಎಂದು ಸಚಿವರು ಹೇಳಿದರು.

> ಹೆಚ್ಚಿನ ಪ್ರಮಾಣದ ವಿದ್ಯುತ್ ಲೋಡ್ ಬಳಸುವ ಕೈಗಾರಿಕೆಗಳು, ಐಟಿ ಬಿಟಿ ಉದ್ಯಮ, ವಾಣಿಜ್ಯ ಸಂಕೀರ್ಣಗಳನ್ನು ನಡೆಸುವ ಗ್ರಾಹಕರಿಗೆ ತಂತ್ರಜ್ಞಾನ ಆಧಾರಿತ ಈ ಪಾರದರ್ಶಕ ವ್ಯವಸ್ಥೆಯು ಸಕಾಲಿಕವಾಗಿ ಪರಿಹಾರ ಒದಗಿಸುತ್ತದೆ. ಸುಲಲಿತ ವ್ಯವಹಾರಕ್ಕೆ ಒತ್ತು ನೀಡಿ, ತ್ವರಿತ ಪರಿಹಾರಗಳನ್ನು ಒದಗಿಸುವ ಬದ್ಧತೆಗೆ ಈ ಉಪಕ್ರಮ ಸಾಕ್ಷಿಯಾಗಿದೆ.
> – ಗೌರವ್ ಗುಪ್ತ, ಅಪರ ಮುಖ್ಯಕಾರ್ಯದರ್ಶಿ

> ಈ ಪೋರ್ಟಲ್‌ನಲ್ಲಿ ದೂರೂ ದಾಖಲಾದ ಕೂಡಲೇ ಮಾಹಿತಿ ದೊರೆತ ನಂತರ ಯಾರು, ಯಾವ ಕ್ರಮ ವಹಿಸಿದ್ದಾರೆ ಎಂಬ ಮಾಹಿತಿಯೂ ಅಧಿಕಾರಿಗಳಿಗೆ ಸಿಗಲಿದೆ. ಸಂಪೂರ್ಣ ಪಾರದರ್ಶಕವಾಗಿರುವುದರಿಂದ ಗ್ರಾಹಕರ ಸಮಸ್ಯೆಗಳಿಗೆ ತ್ವರಿತ ಹಾಗೂ ಜವಾಬ್ದಾರಿಯುತ ಪರಿಹಾರ ದೊರೆಯಲಿದೆ.
> – ಡಾ.ಎನ್.ಶಿವಶಂಕರ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ




ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ನೀಡಿದ ಹೇಳಿಕೆ ಖಂಡಿಸಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ರಾಜ್ಯ ಬಿಜೆಪಿ ಸಂಸದರು, ಶಾಸಕರು, ಎಂಎಲ್‌ಸಿಗಳು ಗುರುವಾರ ಬೆಂಗಳೂರಿನ ವಿಧಾನಸೌಧದ ಗಾಂಧಿ ಪ್ರತಿಮೆ ಪ್ರತಿಭಟನೆ ನಡೆಸಿದರು.

# ಎಐ–ಕ್ವಾಂಟಮ್ ತಂತ್ರಜ್ಞಾನ ಬಳಕೆಗೆ ಪೂರಕ ಪರಿಸರ ನಿರ್ಮಾಣ: ಸಚಿವ ಬೋಸರಾಜು




**ಬೆಂಗಳೂರು, ಏ.23:** ಕ್ವಾಂಟಮ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಮೆಷಿನ್ ಲರ್ನಿಂಗ್ ನಂತಹ ಆಧುನಿಕ ತಂತ್ರಜ್ಞಾನಗಳ ಬಳಕೆಗೆ ಪೂರಕವಾದ ನೀತಿಗಳನ್ನು ರಾಜ್ಯ ಸರ್ಕಾರ ನಿರ್ಮಿಸಿದ್ದು, ಇದು ತಂತ್ರಜ್ಞಾನ ಕ್ಷೇತ್ರದ ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶಗಳನ್ನ ಕಲ್ಪಿಸಲಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ತಿಳಿಸಿದರು.

ಏಟ್ರಿಯಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನಲ್ಲಿ ಗುರುವಾರ ಆಯೋಜಿಸಿದ್ದ ವಾರ್ಷಿಕ 'ವಿಜ್ಞಾನರಂಗ್–2026' ತಾಂತ್ರಿಕ ಮತ್ತು ಸಾಂಸ್ಕೃತಿಕ ಉತ್ಸವದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ತಂತ್ರಜ್ಞಾನ ಯುಗದಲ್ಲಿ ನಾವೀನ್ಯತೆ ಎನ್ನುವುದು ಕೇವಲ ಒಂದು ಆಯ್ಕೆಯಾಗಿರದೆ, ಸಮಾಜದ ಪ್ರಗತಿ ಹಾಗೂ ಅಭಿವೃದ್ಧಿಗೆ ಅತ್ಯಗತ್ಯವಾಗಿದೆ. ಕೈಗಾರಿಕೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳು ಜೊತೆಯಾಗಿ ಬೆಳೆಯುವ ಅತ್ಯುತ್ತಮ ಪರಿಸರ ವ್ಯವಸ್ಥೆ ನಮ್ಮ ರಾಜ್ಯದಲ್ಲಿದೆ ಎಂದರು.

ಮಕ್ಕಳಲ್ಲಿ ಸಣ್ಣ ವಯಸ್ಸಿನಿಂದಲೇ ವೈಜ್ಞಾನಿಕ ಮನೋಭಾವ ಹಾಗೂ ಪ್ರಾಯೋಗಿಕ ಕಲಿಕೆಯನ್ನು ಬೆಳೆಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು 'ವಿಷನ್ ಗ್ರೂಪ್ ಆಫ್ ಸೈನ್ಸ್ ಅಂಡ್ ಟೆಕ್ನಾಲಜಿ' ಮೂಲಕ ಶೈಕ್ಷಣಿಕ ಸಂಸ್ಥೆಗಳಲ್ಲಿ ನಡೆಯುವ ಸಂಶೋಧನೆ ಹಾಗೂ ಹೊಸ ಆವಿಷ್ಕಾರಗಳಿಗೆ ಆರ್ಥಿಕ ಬೆಂಬಲ ನೀಡುತ್ತಿದೆ. ಅದೇ ರೀತಿ, ಬೆಂಗಳೂರಿನಲ್ಲಿ ನಿರ್ಮಾಣವಾಗಲಿರುವ (ಸೈನ್ಸ್ ಸಿಟಿ) ಹೊಸ ಆಲೋಚನೆಗಳು ಹಾಗೂ ನೈಜ–ಪ್ರಪಂಚದ ಸಾಧ್ಯತೆ ಗಳನ್ನು ಒಟ್ಟುಗೂಡಿಸುವ ಒಂದು ಬೃಹತ್ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದರು.

ಯುವಪೀಳಿಗೆ ಹುಟ್ಟು ಹಾಕುವ ಹೊಸ ಕಲ್ಪನೆಗಳು ಭವಿಷ್ಯದ ಸಮಸ್ಯೆಗಳಿಗೆ ಉತ್ತಮ ಪರಿಹಾರವಾಗಬಲ್ಲವು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಮಾಜದ ಒಳಿತಿಗಾಗಿ ತಮ್ಮ ಜ್ಞಾನವನ್ನು ಬಳಸಬೇಕು. ನೀರಿನ ನಿರ್ವಹಣೆ, ಸುಸ್ಥಿರ ಅಭಿವೃದ್ಧಿ ಮತ್ತು ಡಿಜಿಟಲ್ ಬದಲಾವಣೆಯಂತಹ ಜ್ವಲಂತ ಸಮಸ್ಯೆಗಳಿಗೆ ಸೂಕ್ತ ಪರಿಹಾರಗಳನ್ನು ಕಂಡುಕೊಳ್ಳುವಲ್ಲಿ ಯುವ ಸಮುದಾಯ ಪ್ರಮುಖ ಪಾತ್ರ ವಹಿಸಬೇಕು ಎಂದು ಸಚಿವ ಬೋಸರಾಜು ಕರೆ ನೀಡಿದರು.

## ಮೇ ೯ಕ್ಕೆ ಚಿತ್ರದುರ್ಗದಲ್ಲಿ ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವ

# 50 ವರ್ಷಗಳ ರಾಜಕೀಯ ಪಯಣದ ಸಂಭ್ರಮಾಚರಣೆ ಅಮಿತ್ ಶಾ ಉದ್ಘಾಟನೆ, ಬಿಎಸ್‌ವೈಗೆ ಅಭಿನಂದನೆ

**ಬೆಂಗಳೂರು, ಏ.23:** ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ರಾಜಕೀಯ ಪಯಣವನ್ನು ಸಂಭ್ರಮಾಚರಣೆ ಮೂಲಕ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದಕ್ಕಾಗಿ ಮೇ 9ರಂದು ಚಿತ್ರದುರ್ಗದಲ್ಲಿ ಯಡಿಯೂರಪ್ಪ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗೃಹಮಂತ್ರಿ ಅಮಿತ್‌ಶಾ ಕಾರ್ಯಕ್ರಮ ಉದ್ಘಾಟಿಸಿ ಯಡಿಯೂರಪ್ಪ ಅವರನ್ನು ಸನ್ಮಾನಿಸಲಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಕಾರ್ಯಕ್ರಮದ ಮುನ್ನ ಮೇ 8ರಂದು ಸಂಜೆ 6 ಗಂಟೆಗೆ ಯಡಿಯೂರಪ್ಪನವರ ಪುರ ಪ್ರವೇಶ ವಾಗಲಿದೆ. ಕಾರ್ಯಕ್ರಮಕ್ಕೆ ಸುಮಾರು 10 ಲಕ್ಷಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆ ಇದೆ. ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಸಲು ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದ್ದಾರೆ.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಗುರುವಾರ ಸುದ್ದಿ ಗೋಷ್ಠಿಯಲ್ಲಿ ಮಾಹಿತಿ ನೀಡಿದ ಕಾರಜೋಳ, ನಾಡಿನ ಎಲ್ಲಾ ಮಠಾಧೀಶರು, ಮಾಜಿ ಮುಖ್ಯಮಂತ್ರಿಗಳು, ಸಚಿವರು ಮತ್ತು ಗಣ್ಯಮಾನ್ಯರನ್ನು



ಈ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುತ್ತಿದೆ. ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಏಪ್ರಿಲ್ 26ರಂದು ಬೆಳಿಗ್ಗೆ 10 ಗಂಟೆಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದ್ದಾರೆ.

ಭೂಮಿಪೂಜೆಗೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರನ್ನು ಆಹ್ವಾನಿಸಿದ್ದೇವೆ. ಅವರು, ಸಂಸದರು, ಮಾಜಿ ಸಂಸದರು, ಶಾಸಕರು, ಮಾಜಿ ಶಾಸಕರು, ವಿಧಾನಪರಿಷತ್ ಸದಸ್ಯರು, ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ಸೇರಿ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಜತೆಗೆ ಯಡಿಯೂರಪ್ಪ ಅವರನ್ನು ಬಲ್ಲ ಸಾಹಿತಿಗಳು, ಒಡನಾಡಿಗಳು, ಕಲಾವಿದರು ಸೇರಿ ಸಮಾಜದ ಎಲ್ಲ ರಂಗದವರು ಭಾಗವಹಿಸುತ್ತಾರೆ ಎಂದು ಹೇಳಿದರು. ಅಲ್ಲದೇ ಸಾರ್ವಜನಿಕರು, ರೈತಾಪಿ ವರ್ಗದವರು ಭಾಗವಹಿಸಲಿದ್ದಾರೆ. ಚಿತ್ರದುರ್ಗವು ಕರ್ನಾಟಕದ ಕೇಂದ್ರ ಬಿಂದು. ಆದ್ದರಿಂದ ಕಾರ್ಯಕ್ರಮಕ್ಕೆ ಆಯ್ಕೆ ಮಾಡಿಕೊಂಡಿದ್ದಾಗಿ ತಿಳಿಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಮಾತನಾಡಿ, ಯಡಿಯೂರಪ್ಪ ಅವರ 50 ವರ್ಷಗಳ ರಾಜಕೀಯ ಪಯಣವನ್ನು ಸಂಭ್ರಮಾಚರಣೆ ಮೂಲಕ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ನಾಡಿಗೆ ಯಡಿಯೂರಪ್ಪ ಅವರ ಕೊಡುಗೆಯನ್ನು ಎಲ್ಲ ವರ್ಗದವರೂ ಪ್ರಶಂಸಿಸುತ್ತಾರೆ. ಇದಕ್ಕಾಗಿ ಅರ್ಥಪೂರ್ಣ, ಭವ್ಯ ಕಾರ್ಯಕ್ರಮ ನಡೆಸುತ್ತಿದ್ದೇವೆ ಎಂದರು. ರಾಜ್ಯದ ಮೂಲೆಮೂಲೆಗಳಿಂದ ಅಭಿಮಾನಿಗಳು ಬರಲಿದ್ದಾರೆ. ಲಕ್ಷಾಂತರ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಜನರು ಬರಲಿದ್ದಾರೆ. ಒಂದು ಐತಿಹಾಸಿಕ ಕಾರ್ಯಕ್ರಮ ಇದಾಗಲಿದೆ ಎಂದು ವಿವರಿಸಿದರು.

ಪ್ರಭಾಕರ ಕೋರೆ, ಗೋವಿಂದ ಕಾರಜೋಳ, ಶ್ರೀರಾಮುಲು ಸೇರಿ ಅನೇಕ ಗಣ್ಯರ ಪಾಲ್ಗೊಳ್ಳುವಿಕೆಯಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಲೋಗೋ ವನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು.

# ಬೆಟ್ಟಿಂಗ್: ಪರಮೇಶ್ವರ್ ವಿರುದ್ಧದ ಪ್ರಕರಣಕ್ಕೆ ಹೈಕೋರ್ಟ್ ತಡೆ

**ಬೆಂಗಳೂರು, ಏ.23:** ಕಬಡ್ಡಿ ಪಂದ್ಯ ಒಂದರಲ್ಲಿ 500 ರೂಪಾಯಿ ಬೆಟ್ಟಿಂಗ್ ಪ್ರಕರಣಕ್ಕೆ ಸಂಬಂಧಪಟ್ಟಂತೆ ಗೃಹ ಸಚಿವ ಜಿ ಪರಮೇಶ್ವರ್ ಅವರ ಪ್ರಕರಣಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ನ್ಯಾಯಮೂರ್ತಿ ಸುನಿಲ್ ಯಾದವ್ ಅವರಿದ್ದ ಪೀಠ ಆದೇಶ ನೀಡಿದೆ.

ಈ ಕೇಸ್‌ಗೆ ಸಬಂಧಿಸಿದಂತೆ ವಕೀಲ ಫಣೀಂದ್ರ ವಾದ ಮಂಡಿಸಿದರು. ಸಚಿವರು ಕಬಡ್ಡಿ ಟೂರ್ನಿ ಮುಖ್ಯ ತಿಥಿಯಾಗಿ ಹೋಗಿದ್ದರು. ವಿಜಯಪುರ ತಂಡ ಗೆಲ್ಲುತ್ತದೆ ಎಂದು ಬೆಟ್ಟಿಂಗ್ ಕಟ್ಟಿದ್ರು. ಸೋತ ತಂಡಕ್ಕೆ ಬೇಸರವಾಗಬಾರದೆಂದು ಹೀಗೆ ಹೇಳಿದ್ದಾರೆ. ಇದನ್ನೇ ಅಪರಾಧವೆಂಬಂತೆ ಖಾಸಗಿ ದೂರು ದಾಖಲಿಸಿದ್ದಾರೆ.

ಕೋರ್ಟ್ ಎಫ್‌ಐಆರ್‌ಗೆ ಆದೇಶಿಸುವ ಮುನ್ನ ಪ್ರಕ್ರಿಯೆ



ಪಾಲಿಸಿಲ್ಲ ಎಂದು ವಾದಿಸಿದರು. ಇದೇ ವೇಳೆ ಹೈಕೋರ್ಟ್ ಜಡ್ಜ್ ನ್ಯಾಯಮೂರ್ತಿ ಸುನಿಲ್ ದತ್ ಯಾದವ್ ಅವರು ತಮಾಷೆಗೆ ಮಾತನಾಡಿದರು ಕೂಡ ಕೇಸ್ ದಾಖಲಿಸಬಹುದಾ.

ಉದ್ದೇಶಪೂರ್ವಕವಾಗಿ ಇಂತಹ ಹೇಳಿಕೆ ನೀಡಿದಂತೆ ಕಾಣುತ್ತಿಲ್ಲ ತನಿಖೆಗೆ ಆದೇಶಿಸುವ ಮುನ್ನ ಪೊಲೀಸರ ವಿವರಣೆ ಪಡೆಯಬೇಕಿತ್ತು ಎಂದು ಸುನೀಲ್ ದತ್ ಯಾದವ್ ಅವರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿತು. ಬಳಿಕ ಪ್ರಕರಣಕ್ಕೆ ತಡೆ ನೀಡಿ ವಿಚಾರಣೆಯನ್ನು ಮುಂದೂಡಿತು.

# ಮರುಚಿಂತನೆ ಮಾಡಿ ಕ್ರಾಂತಿಕಾರಿ ಬದಲಾವಣೆಗೆ ಬೆಂಬಲ ನೀಡಿ: ಬೊಮ್ಮಾಯಿ ಮನವಿ

**ಮಹಿಳಾ ಮೀಸಲಾತಿ, ಕ್ಷೇತರ ಮರುವಿಂಗಡಣೆ ವಿಚಾರಕ್ಕೆ ಡಿಎಂಕೆಯವರ ರಾಜಕೀಯ ಹುನ್ನಾರಕ್ಕೆ ರಾಜ್ಯದ ಹಿತಾಸಕ್ತಿ ಬಲಿ**

**ಬೆಂಗಳೂರು, ಏ.23:** ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಮರುವಿಂಗಡಣೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಡಿಎಂಕೆಯವರ ರಾಜಕೀಯ ಹುನ್ನಾರಕ್ಕೆ ರಾಜ್ಯದ ಹಿತಾಸಕ್ತಿ ಬಲಿಕೊಟ್ಟಿದ್ದಾರೆ. ಸಿಎಂ ತಜ್ಞರ ಜೊತೆ ಚರ್ಚಿಸಿ, ಸ್ಪಷ್ಟತೆಯಿಂದ ಮರು ಚಿಂತನೆ ಮಾಡಿ, ತಮ್ಮ ಪಕ್ಷದ ನಾಯಕರನ್ನು ಒಪ್ಪಿಸಿ ಕ್ರಾಂತಿಕಾರಿ ಬದಲಾವಣೆಗೆ ದೊಡ್ಡ ಬೆಂಬಲ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದರು.

ಹಾವೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಮಹಿಳೆಯರಿಗೆ ಮೀಸಲಾತಿ ನೀಡುವ ಪ್ರಥಮ ರಾಜ್ಯಗಳಲ್ಲಿ ಒಂದು. ರಾಮಕೃಷ್ಣ ಹೆಗಡೆಯವರು ಮುಖ್ಯಮಂತ್ರಿಯಾಗಿದ್ದಾಗ ಮಾಡಿರುವಂತ ಅಧಿಕಾರ ವಿಕೇಂದ್ರಿಕರಣದ ಜೊತೆಗೆ ಮಹಿಳಾ ಮೀಸಲಾತಿಯನ್ನು ಜಾರಿ ಮಾಡಲಾಯಿತು. ಆದಾದ ನಂತರ 1993ರಲ್ಲಿ ದೇವೇಗೌಡರು ಮುಖ್ಯಮಂತ್ರಿಯಾಗಿದ್ದಾಗ ಅದನ್ನು ಮತ್ತೊಮ್ಮೆ ಜಾರಿ ಮಾಡಲಾಯಿತು. ಅದನ್ನು ನೋಡಿಕೊಂಡು 1994ರಲ್ಲಿ ಕೇಂದ್ರದಲ್ಲಿ ಪಿ.ವಿ. ನರಸಿಂಹರಾವ್ ಸರ್ಕಾರ ಕೇಂದ್ರದಲ್ಲಿ ಸಂವಿಧಾನದ 73ನೇ ತಿದ್ದುಪಡಿ ಮಾಡಿ ಮಹಿಳಾ ಮೀಸಲಾತಿ ಜಾರಿಗೆ ತಂದರು. ಸಿದ್ದರಾಮಯ್ಯ ಮಹಿಳಾ ಮೀಸಲಾತಿ ಮೊದಲು ಕಾಂಗ್ರೆಸ್ ತಂದಿದೆ ಅಂತ ಹೇಳುತ್ತಾರೆ. ಆದರೆ, ಕಾಂಗ್ರೆಸ್ಸೇತರ ಸರ್ಕಾರ ಮೊದಲು ಮಹಿಳಾ ಮೀಸಲಾತಿ ಜಾರಿಗೆ ತಂದಿದೆ. ಸಿದ್ದರಾಮಯ್ಯ ಅವರು ಕಾಂಗ್ರೆಸ್ ಮೆಚ್ಚಿಸಲು ಹೇಳುತ್ತಾರೆ. ಅಧಿಕೃತವಾಗಿ ಸ್ವಾತಂತ್ರ್ಯ ಭಾರತದಲ್ಲಿ ಪ್ರಥಮ ಬಾರಿಗೆ ಹೇಳಿದವರು ಡಾ. ಬಾಬಾಸಾಹೇಬ್ ಅಂಬೇಡ್ಕರ್. ಹಿಂದೂ ಕೋಡ್ ಬಿಲ್ ತಂದಾಗ ಅದರಲ್ಲಿ ಮಹಿಳೆಯರಿಗೆ ಎಲ್ಲ ರಂಗದಲ್ಲಿ ಸಂಸತ್ತು ಹಾಗೂ ವಿಧಾನಸಭೆಗಳಲ್ಲಿ ಮೀಸಲಾತಿ ಸಿಗಬೇಕು ಎಂದು ಹೇಳಿದ್ದರು ಎಂದರು.

ಸಂವಿಧಾನ ತಿದ್ದುಪಡಿ ಮಾಡಲು ಸಂಸತ್ತಿನಲ್ಲಿ ಮೂರನೇ ಎರಡರಷ್ಟು ಬಹುಮತ ಬೇಕು. ಕೆಲವು ಪ್ರಾದೇಶಿಕ ಪಕ್ಷಗಳು ವಿರೋಧ ಮಾಡುತ್ತ ಬಂದಿದ್ದವು. 1984ರಿಂದ 89ರಲ್ಲಿ ರಾಜೀವ್ ಗಾಂಧಿ ಪ್ರಧಾನಿ ಇದ್ದಾಗ ಅವರಿಗೆ ಮೂರನೇ ಎರಡರಷ್ಟು ಬಹುಮತ ಇತ್ತು. ಆಗಲೇ ಮಾಡಿದ್ದರೆ 30 ವರ್ಷ ಆಗುತ್ತಿತ್ತು. ಆದರೆ, ಅದನ್ನು ಬಿಟ್ಟು ರಾಜೀವ್ ಗಾಂಧಿಯವರು ಮುಸ್ಲಿಂ ಮಹಿಳೆಗೆ ವಿಚ್ಛೇದನ ಆದಾಗ ಅವಳ ಜೀವನ ನಿರ್ವಹಣೆಗೆ ಪರಿಹಾರ ಕೊಡುವಂತೆ ನಿರ್ದೇಶಿಸಿದ ಸುಪ್ರೀಂ ಕೋರ್ಟ್ ಆದೇಶ ರದ್ದುಪಡಿಸಲು ಸಂಸತ್ತಿನ ಬಹುಮತ ಬಳಸಿಕೊಂಡು ವಿಶೇಷ ಕಾನೂನು ತಂದರು. ಆ ಮೇಲೆ 1996ರಲ್ಲಿ ದೇವೇಗೌಡರ ಸರ್ಕಾರ ರಾಜ್ಯಸಭೆಯಲ್ಲಿ ತಂದರು. ಆ ಸರ್ಕಾರ ಹೋಯಿತು. ಇದೆಲ್ಲದರ ಹಿನ್ನೆಲೆಯಲ್ಲಿ 2023ರಲ್ಲಿ ಇದಕ್ಕೆಲ್ಲ ಪರಿಹಾರ ಕಂಡುಕೊಳ್ಳಬೇಕು ಎಂದು ಈಗಿನ ಕೇಂದ್ರ ಸರ್ಕಾರ ತಿದ್ದುಪಡಿ ತರಲಾಯಿತು. ಅದರಲ್ಲಿ ಮಹಿಳೆಯರಿಗೆ ಶೇ33ರಷ್ಟು ಮೀಸಲಾತಿ ಹಾಗೂ ಲೋಕಸಭೆ ಹಾಗೂ ವಿಧಾಸಭೆಗಳ ಸಂಖ್ಯೆಯನ್ನು ಈಗಿರುವ ಕ್ಷೇತ್ರಗಳ ಶೇ 50 ರಷ್ಟು ಹೆಚ್ಚಳ ಮಾಡುವ ತಿದ್ದುಪಡಿ ಮಾಡಿ, ಅದನ್ನು ಮುಂದಿನ ಜನಗಣತಿ ನಂತರ ಜಾರಿ ಮಾಡಲು ತೀರ್ಮಾಣಿಸಲಾಯಿತು ಎಂದು ಹೇಳಿದರು.

**ದಕ್ಷಿಣಕ್ಕೆ ಅನ್ಯಾಯ**

ಜನಗಣತಿ ಎರಡು ವರ್ಷ ವಿಳಂಬವಾಗಿದ್ದರಿಂದ ಜನರ ವಿಶ್ವಾಸ ಗಳಿಸಲು 2029ರಲ್ಲಿ ಜಾರಿ ಮಾಡಲು ಕಾಂಗ್ರೆಸ್ ಸೇರಿದಂತೆ ಎಲ್ಲ ಪಕ್ಷಗಳ ಒತ್ತಡವೂ ಇತ್ತು. ಅದಕ್ಕೆ ಕೇಂದ್ರ ಸರ್ಕಾರ ಮತ್ತೆ ತಿದ್ದುಪಡಿ ತಂದರು. ಶೇ.50ರಷ್ಟು ಸೀಟು ಹೆಚ್ಚಳವಾಗಬೇಕೆಂದರೆ ಡೀಲಿಮಿಟೇಷನ್ ಆಗಬೇಕು. ಡೀಲಿಮಿಟೇಷನ್ ಸಮಿತಿ ಆಗಬೇಕು. ಇದರ ಜೊತೆಗೆ ಮಹಿಳಾ ಮಹಿಳೆಯರಿಗೆ ಶೇ 33 ಮೀಸಲಾತಿ 2029 ಕ್ಕೆ ಜಾರಿಗೆ ಬರಬೇಕು ಎನ್ನುವುದು ಆಗಿತ್ತು. 1971ರ ಜನಗಣತಿಯನ್ನು 1976ರಲ್ಲಿ ಇಂದಿರಾ




ಗಾಂಧಿಯವರು ಎಮರ್ಜೆನ್ಸಿ ಸಂದರ್ಭದಲ್ಲಿ 2020ರವರೆಗೆ ಸ್ಥಗಿತ ಮಾಡಿದ್ದರು. ಆಗ ಕಾಂಗ್ರೆಸ್ ಮಾಡಿರುವ ನೀತಿಯಿಂದ ದಕ್ಷಿಣ ಭಾರತಕ್ಕೆ ಅನ್ಯಾಯವಾಗಿದೆ. ಆಗಿನ ಜನಸಂಖ್ಯೆಯ ಆಧಾರದಲ್ಲಿ ಮಾಡಿದ್ದಾರೆ. ಅದನ್ನು ಎಲ್ಲರೂ ಒಪ್ಪಿಕೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯ 2026ರ ಜನಸಂಖ್ಯೆ ಆಧಾರದ ಮೇಲೆ ಡೀಲಿಮಿಟೇಷನ್ ಆಗಲಿ ಎಂದು ಹೇಳಿದ್ದಾರೆ. ಹೊಸ ಜನಗಣತಿ ಆಧಾರದ ಮೇಲೆ ಡೀಲಿಮಿಟೇಷನ್ ಆಗಲಿ ಎಂದರೆ ದಕ್ಷಿಣ ಭಾರತಕ್ಕೆ ಮತ್ತೆ ಅನ್ಯಾಯವಾಗಲಿದೆ. ಇದರ ಅರಿವಿದೆಯೋ ಇಲ್ಲವೋ ಕೇವಲ ರಾಜಕಾರಣಕ್ಕಾಗಿಯೇ ವಿತಂಡವಾದ, ಸತ್ಯಕ್ಕೆ ದೂರ ಇರುವ ವಾದ ಮಾಡಿ ದಕ್ಷಿಣ ಭಾರತದ ಜನರು, ಜನಪ್ರತಿನಿಧಿಗಳ ಆಯ್ಕೆಗೆ ಮತ್ತು ಕ್ಷೇತ್ರಗಳ ಸಂಖ್ಯೆಗೆ ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳು ದೊಡ್ಡ ಅನ್ಯಾಯ ಮಾಡುತ್ತಿವೆ ಎಂದು ಆರೋಪಿಸಿದರು.

# ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದರೆ ನನ್ನ ವಿರುದ್ಧವೂ ಕ್ರಮವಾಗಲಿ: ಜಮೀರ್ ಸವಾಲು

**ಬೆಂಗಳೂರು, ಏ.23:** ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ, ನಾನೂ ಕೂಡ ಪಕ್ಷಕ್ಕಿಂತ ಮಿಗಿಲಲ್ಲ. ಒಂದು ವೇಳೆ ನಾನೇ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದರೂ ಶಿಸ್ತು ಕ್ರಮ ಜರುಗಿಸಲಿ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಕಾಂಗ್ರೆಸ್ ಹೈಕಮಾಂಡ್‌ಗೆ ಸವಾಲು ಹಾಕಿದ್ದಾರೆ.

ನಗರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಲ್ಲಿ ತಮ್ಮನ್ನು ಯಾರೂ ಟಾರ್ಗೆಟ್ ಮಾಡುತ್ತಿಲ್ಲ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಟಿಕೆಟ್ ಕೈತಪ್ಪಿದ್ದಕ್ಕೆ ಮುಸ್ಲಿಂ ಸಮುದಾಯ ಮತ್ತು ಧರ್ಮಗುರುಗಳಲ್ಲಿ ಬೇಸರ ಇರುವುದು ನಿಜ ಎಂದು ಒಪ್ಪಿಕೊಂಡಿದ್ದಾರೆ. ಧರ್ಮಗುರುಗಳ ಅಸಮಾಧಾನದ ಬಗ್ಗೆ ಅವರ ಜೊತೆಯೇ ಚರ್ಚಿಸಿ ಬಗೆಹರಿಸುತ್ತೇನೆ. ಶುಕ್ರವಾರದ ನಮಾಜ್ ನಂತರ ಅವರೊಂದಿಗೆ ಮಾತುಕತೆ ನಡೆಸಲಿದ್ದೇನೆ. ರಿಜ್ವಾನ್ ಅರ್ಷದ್, ಎನ್.ಎ. ಹ್ಯಾರಿಸ್ ಮತ್ತು ಸಲೀಂ ಅಹ್ಮದ್ ಕೂಡ ಈ ಬಗ್ಗೆ ನನ್ನೊಂದಿಗೆ ಮಾತನಾಡಿದ್ದಾರೆ. ದಾವಣಗೆರೆ ಟಿಕೆಟ್ ವಿಚಾರದಲ್ಲಿ ಹೈಕಮಾಂಡ್ ಮುಂದಿನ ದಿನಗಳಲ್ಲಿ ನಿರ್ಧಾರ ತೆಗೆದುಕೊಳ್ಳುವ ಭರವಸೆ ನೀಡಿದೆ ಎಂದು ತಿಳಿಸಿದರು.

ಆಪ್ತರಾದ ನಸೀರ್ ಅಹ್ಮದ್ ಮತ್ತು ಅಬ್ದುಲ್ ಜಬ್ಬಾರ್ ವಿರುದ್ಧದ ಶಿಸ್ತು ಕ್ರಮದ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಜಮೀರ್ ಅಹ್ಮದ್, ಪಕ್ಷದ ವಿರುದ್ಧ ಕೆಲಸ ಮಾಡಿದರೆ ಕ್ರಮ ಕೈಗೊಳ್ಳಲು ಕೆಲವು ರೀತಿ–ನೀತಿಗಳಿವೆ. ಮೊದಲು ನೋಟಿಸ್ ನೀಡಬೇಕು, ನಂತರ ವಿವರಣೆ ಪಡೆದು ಕ್ರಮ ಕೈಗೊಳ್ಳಬೇಕು ಎಂದು ಪರೋಕ್ಷವಾಗಿ ಆಕ್ಷೇಪ ವ್ಯಕ್ತಪಡಿಸಿದರು.

**ಜಾರಕಿಹೊಳಿ ಭೇಟಿ**

ಜಮೀರ್ ಅಹ್ಮದ್ ಖಾನ್ ಅವರು ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿರುವುದು ರಾಜ್ಯ ರಾಜಕೀಯದಲ್ಲಿ ಭಾರಿ ಕುತೂಹಲ ಮೂಡಿಸಿದೆ. ಮುಸ್ಲಿಂ ಸಮುದಾಯದ ಅಸಮಾಧಾನ



ಮತ್ತು ಪಕ್ಷದ ಒಳಗಿನ ಬೆಳವಣಿಗೆಗಳ ಬಗ್ಗೆ ಇಬ್ಬರು ನಾಯಕರು ಸುದೀರ್ಘ ಚರ್ಚೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ. ಸತೀಶ್ ಜಾರಕಿಹೊಳಿ ಅವರು ಈಗಾಗಲೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಈ ವಿಚಾರಗಳ ಬಗ್ಗೆ ಚರ್ಚಿಸಿದ್ದರು, ಜಮೀರ್ ಅವರ ಭೇಟಿ ಮಹತ್ವ ಪಡೆದುಕೊಂಡಿದೆ. ಪಕ್ಷದ ಆಂತರಿಕ ಬಿಕ್ಕಟ್ಟು ಮತ್ತು ಸಮುದಾಯದ ನಾಯಕರ ಬೇಡಿಕೆಗಳ ನಡುವೆ ಜಮೀರ್ ಅಹ್ಮದ್ ಅವರ ಈ ಸವಾಲು ಮತ್ತು ಸತೀಶ್ ಜಾರಕಿಹೊಳಿ ಅವರೊಂದಿಗಿನ ಭೇಟಿ ಕಾಂಗ್ರೆಸ್ ವಲಯದಲ್ಲಿ ಹೊಸ ಚರ್ಚೆಗೆ ನಾಂದಿ ಹಾಡಿದೆ.

## ಮಹಿಳಾ ಮೀಸಲಾತಿಗೆ ವಿರೋಧಿಸಿದ ಕಾಂಗ್ರೆಸ್ ವಿರುದ್ಧ ಬಿಜೆಪಿ ಆಕ್ರೋಶ ಯಾತ್ರೆ


# ನಾಳೆ ರಾಜ್ಯದ ಜಿಲ್ಲಾ ಕೇಂದ್ರ, ಬಳಿಕ ಬೆಂಗಳೂರು ಹುಬ್ಬಳ್ಳಿಯಲ್ಲಿ ಬೃಹತ್ ರ‍್ಯಾಲಿ: ಮಂಜುಳಾ

**ಬೆಂಗಳೂರು, ಏ.23:** ಮಹಿಳಾ ವಿರೋಧಿ ಕಾಂಗ್ರೆಸ್ ಮತ್ತು ಇಂಡಿ ಕೂಟದ ವಿರುದ್ಧ ರಾಜ್ಯಾದ್ಯಂತ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಏ.25ರಂದು ಆಕ್ರೋಶ ಯಾತ್ರೆ ಮತ್ತು ಸಭೆಗಳನ್ನು ಏರ್ಪಡಿಸಲಾಗುವುದು ಎಂದು ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಕು.ಸಿ.ಮಂಜುಳಾ ಅವರು ತಿಳಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಇದೇ 27ರಿಂದ ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಲ್ಲಿ ಮತ್ತು ಬಿಜೆಪಿಯ 300 ಸಂಘಟನಾತ್ಮಕ ಮಂಡಲಗಳಲ್ಲಿ ಹೋರಾಟ ನಡೆಯಲಿದೆ. ಬಳಿಕ ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಬೃಹತ್ ರ‍್ಯಾಲಿಯನ್ನು ಸಂಘಟಿಸುವ ಕುರಿತು ಚರ್ಚೆ ನಡೆಯುತ್ತಿದೆ ಎಂದರು.

ಕೇಂದ್ರ ಸಚಿವರು, ಸಂಸದರು ವಿಭಾಗ ಕೇಂದ್ರಗಳಲ್ಲಿ ಬುಧವಾರ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ.

ಶಿವಮೊಗ್ಗದಲ್ಲಿ ಸಂಸದ ಬಿ.ವೈ. ರಾಘವೇಂದ್ರ, ಮಂಗಳೂರಿನಲ್ಲಿ ಸಂಸದ ಬೃಜೇಶ್ ಚೌಟ, ಗುರುವಾರ ಮತ್ತು ಶುಕ್ರವಾರದಂದು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್– ಬೆಳಗಾವಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹಾವೇರಿಯಲ್ಲಿ, ಕೇಂದ್ರ ಸಚಿವ ಸೋಮಣ್ಣ ಅವರು 23ರಂದು ಮೈಸೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಕಾಂಗ್ರೆಸ್




ಮತ್ತು ಅವರ ಮಿತ್ರಪಕ್ಷಗಳ ಮಹಿಳಾ ವಿರೋಧಿ ನೀತಿಯ ಕುರಿತು ತಿಳಿಸಲಿದ್ದಾರೆ ಎಂದು ವಿವರ ನೀಡಿದರು.

ಕಾಂಗ್ರೆಸ್ ಪಕ್ಷವು ಇತಿಹಾಸದ ಉದ್ದಕ್ಕೂ ತನ್ನ ಮಹಿಳಾ ವಿರೋಧಿ ಧೋರಣೆ ಪ್ರದರ್ಶನ ಮಾಡಿದ ಕುರಿತು ತಿಳಿಸಲಿದ್ದಾರೆ ಎಂದು ಹೇಳಿದರು. ಇಂದಿರಾ ಗಾಂಧಿ, ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ ಅವರು ಮಾತ್ರ ಮಹಿಳೆಯರು ಎಂದು ಕಾಂಗ್ರೆಸ್ ಭಾವಿಸಿದಂತಿದೆ. ಸಾಮಾನ್ಯ ಮಹಿಳೆಯರಿಗೆ ಸಿಗುವ ಅವಕಾಶಗಳನ್ನು ಅದು ಕಿತ್ತುಕೊಂಡಿದೆ ಎಂದು ಆಕ್ಷೇಪಿಸಿದರು.

ಭಾರತದ ನಾರಿಯರು ಕೇವಲ ಹೂವಲ್ಲ; ಅವರು ಜ್ವಾಲೆ ಕೂಡ ಎಂಬ ನಿಟ್ಟಿನಲ್ಲಿ ಈ ಆಕ್ರೋಶವನ್ನು ನಾವು ವ್ಯಕ್ತಪಡಿಸಲಿದ್ದೇವೆ ಎಂದು ಪ್ರಶ್ನೆಗೆ ಉತ್ತರ ನೀಡಿದರು.

## ಪ್ರಮುಖ ವೃತ್ತಗಳು, ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನೀರು ಸಿಂಪಡನೆಗೆ ಯೋಜನೆ

# ವಾಹನ ಸವಾರರು, ಪಾದಚಾರಿಗಳಿಗೆ ಸೂರ್ಯನ ತಾಪಮಾನದಿಂದ ರಕ್ಷಣೆ ಪಡೆಯಲು ಜಿಬಿಎ ಹೊಸ ಕ್ರಮ

**ಬೆಂಗಳೂರು:ಏ–23** ನಗರದಲ್ಲಿ ದಿನದಿಂದ ದಿನಕ್ಕೆ ತಾಪಮಾನ ಏರಿಕೆಯಾಗುತ್ತಿರುವ ಹಿನ್ನಲೆಯಲ್ಲಿ, ವಾಹನ ಸವಾರರು ಮತ್ತು ಪಾದಚಾರಿಗಳಿಗೆ ತಂಪಿನ ಅನುಭವ ಕಲ್ಪಿಸಲು ಜಿಬಿಎ ಮಹತ್ವದ ಹೊಸ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ.



ಬೇಸಿಗೆಯ ತಾಪದಿಂದ ಕಂಗೆಟ್ಟಿರುವ ವಾಹನ ಸವಾರರಿಗೆ ಸ್ವಲ್ಪ ಮಟ್ಟಿಗೆ ಪರಿಹಾರ ನೀಡುವ ಉದ್ದೇಶದಿಂದ, ನಗರದ ಪ್ರಮುಖ ಜಂಕ್ಷನ್‌ಗಳು, ಸರ್ಕಲ್‌ಗಳು ಹಾಗೂ ಹೆಚ್ಚು ಸಮಯ ತೆಗೆದುಕೊಳ್ಳುವ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನೀರು ಸಿಂಪಡಣೆ ಮಾಡಲು ಯೋಜನೆ ರೂಪಿಸಲಾಗಿದೆ. ಸಿಗ್ನಲ್‌ನಲ್ಲಿ ನಿಂತಿರುವ ವಾಹನ ಸವಾರರಿಗೆ ಇದರಿಂದ ತಾಪಮಾನ ಕಡಿಮೆಯಾಗಿ, ತಣ್ಣನೆಯ ವಾತಾವರಣ ಅನುಭವವಾಗಲಿದೆ.

ಇದೇ ವೇಳೆ, ಪಾದಚಾರಿಗಳಿಗೆ ಅನುಕೂಲವಾಗುವಂತೆ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳ ಬಳಿ ಮಿಸ್ಟ್ ಸ್ಪ್ರೇ (ತಂಪು ನೀರಿನ ಹನಿ) ವ್ಯವಸ್ಥೆ ಅಳವಡಿಸುವ ಸಾಧ್ಯತೆಯನ್ನು ಪರಿಶೀಲಿಸಲು ಅಧಿಕಾರಿಗಳಿಗೆ ವಿಶೇಷ ಅಯುಕ್ತರು ಸೂಚಿಸಿದರು.




ಬೆಂಗಳೂರಿನ ಬಾಲಭವನ ಕಬ್ಬನ್ ಉದ್ಯಾನವನದಲ್ಲಿ ಮಕ್ಕಳು ವಿಶ್ವ ಭೂದಿನವನ್ನು ಆಚರಿಸಿದರು.

# ಗ್ರಾಮಪಂಚಾಯಿತಿ ಕಂಪ್ಯೂಟರ್ ಆಪರೇಟರ್ ಲೋಕಾ ಬಲೆಗೆ

**ಕಲಬುರಗಿ, ಏ.23:** ಜಿಲ್ಲೆಯ ಯಡ್ರಾಮಿ ತಾಲೂಕಿನ ಮಳ್ಳಿ ಗ್ರಾಮ ಪಂಚಾಯತ್‌ನ ಲಂಚಕೋರ ಕಂಪ್ಯೂಟರ್ ಆಪರೇಟರ್ ಬಂದೇನ ವಾಜ್ ಎಂಬಾತ ಬಸವ ವಸತಿ ಯೋಜನೆಯ ಹಣ ಮಂಜೂರು ಮಾಡಲು ಲಂಚ ಪಡೆದು, ಲೋಕಾಯುಕ್ತ ಬಲೆಗೆ ಸಾಕ್ಷಿ ಸಮೇತ ಬಿದ್ದಿದ್ದಾನೆ.

ಮಳ್ಳಿ ಗ್ರಾಮದ ಮಲ್ಲಿಕಾರ್ಜುನ ಅವರ ಸಹೋದರನ ಮನೆ ಬಿಲ್ ಮಾಡಲು 10 ಸಾವಿರ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟು, 5 ಸಾವಿರ ರೂ.ಕೈಯಲ್ಲಿ ಪಡೆದಿದ್ದು, ಮೂರು ಸಾವಿರ ರೂಪಾಯಿ ಫೋನ್ ಫೇ ಮಾಡಿಕೊಂಡಿದ್ದ. ಲೋಕಾಯುಕ್ತ ತನಿಖಾಧಿಕಾರಿ ಮುರುಗುಂಡಿ ಅವರ ನೇತೃತ್ವದ ತಂಡ ದಾಳಿ ನಡೆಸಿದೆ. ಕಂಪ್ಯೂಟರ್ ಆಪರೇಟರ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ.

# ಕಡ್ಡಾಯವಾಗಿ ಕುಡಿಯುವ ನೀರು ಪರೀಕ್ಷಿಸಿ ರಾಯಚೂರು ಸಿಇಓ ಈಶ್ವರಕುಮಾರ ಸೂಚನೆ



**ರಾಯಚೂರು, ಏ. 23:** ಜಿಲ್ಲೆಯ ಎಲ್ಲ ಗ್ರಾಮ ಪಂಚಾಹಿತಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕು' ಎಂದು ಪ್ರಭಾರ ಜಿಲ್ಲಾಧಿಕಾರಿ ಈಶ್ವರಕುಮಾರ ಕಾಂದೂ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತುಂಗಾ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಂಚಾಯಿತಿಗಳಲ್ಲಿ ಹೈಡ್ರೋಜನ್ ಕ್ಲೋರೈಡ್, ಫ್ಲೋರೈಡ್, ಐರನ್, ನೈಟ್ರೇಟ್, ಅಲ್ಕಲೈನಿಟಿ, ಕ್ಲೋರಿನಿ ಹಾಗೂ ಒಟ್ಟು ಕರಗಿದ ಘನವಸ್ತುಗಳ ಸಾಮರ್ಥ್ಯ, ಬ್ಯಾಕ್ಟೀರಿಯಾ ಹಾಗೂ ಹೈಡ್ರೋಜನ್ ಸಲ್ಫೈಡ್ ಪರೀಕ್ಷೆಯನ್ನೂ ಕೂಡ ನಡೆಸಬೇಕು ಎಂದು ಹೇಳಿದರು.

ಪ್ರಸ್ತುತ ಹವಮಾನ ಬದಲಾವಣೆ, ಪ್ರಖರ ಬಿಸಿಲಿನ ತಾಪಮಾನದಿಂದ ಪ್ರತಿಯೊಬ್ಬರ ಸುರಕ್ಷತೆಗಾಗಿ ನಿರಂತರ ಜಾಗೃತಿ, ಮತ್ತು ಎಲ್ಲ ಕುಡಿಯುವ ನೀರಿನ ಮೂಲಗಳು ಕುಡಿಯಲು ಯೋಗ್ಯವಾಗಿವೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸದ್ಯ 40 ಡಿಗ್ರಿಗಿಂತ ಹೆಚ್ಚು ತಾಪಮಾನ ಇದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಾಗುವ ಸಾಧ್ಯತೆ ಇದ್ದು, ನವಜಾತ ಶಿಶು ಹಾಗೂ ಚಿಕ್ಕಮಕ್ಕಳು ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ದರು, ದೀರ್ಘಕಾಲದಿಂದ ಖಾಯಿಲೆಗಳಿಂದ ಬಳಲುವವರು, ಹೊರ ಆವರಣದಲ್ಲಿ ದೈಹಿಕವಾಗಿ ದಿನನಿತ್ಯ ಕೆಲಸ ಮಾಡುವ ಕೂಲಿಕಾರ್ಮಿಕರು, ಕಟ್ಟಡ ಕಾರ್ಮಿಕರು ಮಧ್ಯಾಹ್ನ 12 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮನೆಯಲ್ಲಿ ಇರುವಂತೆ ತಿಳಿವಳಿಕೆ ನೀಡಬೇಕು ಎಂದರು.

ತುರ್ತು ಸಂದರ್ಭ ಎದುರಿಸಲು ತಾಲ್ಲೂಕು ಆಸ್ಪತ್ರೆಗಳಲ್ಲಿ 5 ಐಸಿಯು ಬೆಡ್‌ಗಳ ವಾರ್ಡ್ ಸಿದ್ದಪಡಿಸಬೇಕು ಎಂದು ಆರೋಗ್ಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಸುರಕ್ಷಿತ ಆಹಾರ ಸೇವನೆಗೆ ಜಾಗೃತಿ: ಬೇಸಿಗೆ ಹಿನ್ನೆಲೆಯಲ್ಲಿ ನೀರಿನ ಮೂಲಗಳನ್ನು ನಿಯಮಿತವಾಗಿ ಪರೀಕ್ಷೆ ಹಾಗೂ ಅಸುರಕ್ಷಿತವೆಂದು ಕಂಡು ಬರುವ ಮೂಲಗಳನ್ನು ನಿಯಮಾನುಸಾರ ಕ್ಲೋರಿನೇಷನ್ ಮಾಡಿಸಲು ಎಲ್ಲ ಗ್ರಾಮ ಪಂಚಾಯಿತಿಗಳು, ಸ್ಥಳೀಯ ಸಂಸ್ಥೆಗಳೊದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವನೆ ಬಗ್ಗೆ ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು' ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಮಾತನಾಡಿ, 'ಈಗಾಗಲೇ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಓಆರ್‌ಎಸ್ ಪಾಕೆಟ್ ಹಾಗೂ ತುರ್ತು ಔಷಧಗಳನ್ನು ದಾಸ್ತಾನು ಮಾಡಲಾಗಿದೆ. ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗಕ್ಕಾಗಿ ಜಾಗೃತಿ ನೀಡಲಾಗುತ್ತಿದೆ ಎಂದರು.

# ಮಠದಿಂದ ವಚನಾನಂದ ಸ್ವಾಮೀಜಿ ಉಚ್ಚಾಟನೆ ಆಡಳಿತಾಧಿಕಾರಿ, ದಾಸೋಹ ಸಮಿತಿ ಅಧ್ಯಕ್ಷರ ಅಮಾನತು

**ಅವರಾಗಿಯೇ ಗೌರವದಿಂದ ಮಠ ತೊರೆಯಲಿ, ಇಲ್ಲವಾದರೆ ಮುಂದಿನ ಕ್ರಮ: ಪೀಠದ ಹುಟ್ಟಿನಿಂದ ಇದುವರೆಗಿನ ಲೆಕ್ಕ ಕೊಡುತ್ತೇವೆ: ಧರ್ಮದರ್ಶಿ ಉಮಾಪತಿ**



**ದಾವಣಗೆರೆ, ಏ.23:** ವಚನಾನಂದ ಸ್ವಾಮೀಜಿ ಅವರನ್ನು ಉಚ್ಚಾಟಿಸಿದ್ದೇವೆ ಹಾಗೂ ಆಡಳಿತಾಧಿಕಾರಿ ರಾಜಕುಮಾರ್, ದಾಸೋಹ ಸಮಿತಿ ಅಧ್ಯಕ್ಷ ಪ್ರಕಾಶ್ ಪಾಟೀಲ್ ಅವರನ್ನು ಅಮಾನತು ಮಾಡಿದ್ದೇವೆ. ಅವರಾಗಿಯೇ ಗೌರವದಿಂದ ಮಠ ತೊರೆಯಲಿ. ಇಲ್ಲದಿದ್ದರೆ ಟ್ರಸ್ಟ್ ಮುಂದಿನ ತೀರ್ಮಾನ ಕೈಗೊಳ್ಳಲಿದೆ ಎಂದು ಹರಿಹರದ ಪಂಚಮಸಾಲಿ ಪೀಠದ ಪ್ರಧಾನ ಧರ್ಮದರ್ಶಿ ಬಿ.ಸಿ.ಉಮಾಪತಿ ಸ್ಪಷ್ಟಪಡಿಸಿದ್ದಾರೆ.

ಏಪ್ರಿಲ್ 27ರಂದು ಹರಿಹರ ಮಠದಲ್ಲೇ ಲೆಕ್ಕ ಕೊಡಲು ಮುಂದಾಗಿದ್ದೇವೆ. 2008ರಿಂದ 2026ರವರೆಗೆ ಲೆಕ್ಕ ಕೊಡ್ತೀವಿ. ಸಂಘ ಬೇರೆ, ಟ್ರಸ್ಟ್ ಬೇರೆ ಇದೆ. ನಾವು ಬ್ಯಾಲೆನ್ಸ್ ಶೀಟ್ ಕೊಡ್ತಾ ಬರ್ತಿದ್ದೇವೆ. ಆದರೆ, ದಿಕ್ಕು ತಪ್ಪಿಸುವ ಸಲುವಾಗಿ ಲೆಕ್ಕ ಕೊಡಿ ಎಂಬ ಅಭಿಯಾನ ನಡೆಸಿದ್ದಾರೆ. ಯಾವುದೇ ಟ್ರಸ್ಟ್‌ನಲ್ಲಿ ಲೆಕ್ಕ ಕೊಡುವ ಪದ್ಧತಿ ಇಲ್ಲ. ಆದರೂ ಸಹ ಪೈಸೆ ಪೈಸೆ ಲೆಕ್ಕ ಕೊಡಲು ಮುಂದಾಗಿದ್ದೇವೆ. ಲೆಕ್ಕದ ವಿಚಾರವಾಗಿ ತಪ್ಪು ಕಲ್ಪನೆ ಮೂಡಿಸುತ್ತಿದ್ದಾರೆ. ಹೀಗಾಗಿ ಪೀಠದ ಹುಟ್ಟಿನಿಂದ ಇಲ್ಲಿಯವರೆಗೆ ಲೆಕ್ಕ ಕೊಡುತ್ತೇವೆ ಎಂದರು.

ಸ್ವಾಮೀಜಿ ಮಠದಲ್ಲೇ ಇದ್ದು, ಸುದ್ದಿಗೋಷ್ಠಿಯಲ್ಲಿ ಬಾಯಿಗೆ ಬಂದಂತೆ ಮಾತಾಡುತ್ತಿದ್ದಾರೆ. ಇದೇ 24ರಂದು ಮಠದಲ್ಲಿ ಬಸವ ಜಯಂತಿ ಆಚರಿಸಲು ಮುಂದಾಗಿದ್ದಾರೆ.

ಇದು ತಪ್ಪು. ಅಂದು ಯಾವುದೇ ಅಹಿತಕರ ಘಟನೆಗಳು ನಡೆದರೆ, ಆಸ್ತಿಪಾಸ್ತಿಗೆ ಹಾನಿಯಾದರೆ ಉಸ್ತುವಾರಿ ಡಾ.ರಾಜಕುಮಾರ ಹಾಗೂ ಲೆಕ್ಕ ಕೊಡಿ ಅಭಿಯಾನದ ಅಧ್ಯಕ್ಷ ಸಿರಿಗೆರೆ ಪರಮೇಶ್ವರ ಗೌಡ ಅವರೇ ಕಾರಣರಾಗುತ್ತಾರೆ ಎಂದು ಜಿಲ್ಲಾಧಿಕಾರಿ ಹಾಗು ಎಸ್ಪಿಗೆ ದೂರು ನೀಡಿದ್ದಾರೆ.

# ಬಿಜೆಪಿ ಮುಖಂಡನ ಪುತ್ರನ ಅತ್ಯಾಚಾರ ಪ್ರಕರಣಕ್ಕೆ ತಡೆ ನೀಡಲು ಹೈಕೋರ್ಟ್ ನಕಾರ




**ಮಂಗಳೂರು, ಏ.23:** ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಬಿಜೆಪಿ ಮುಖಂಡನ ಪುತ್ರ ಕೃಷ್ಣಾ ರಾವ್ ವಿರುದ್ಧದ ಅತ್ಯಚಾರ ಪ್ರಕರಣಕ್ಕೆ ತಡೆ ನೀಡಲು ನಿರಾಕರಿಸಿರುವ ಕರ್ನಾಟಕ ಹೈಕೋರ್ಟ್, ತಾಯಿ ಮತ್ತು ಮಗುವನ್ನು ಅನಾಥವಾಗಿಸಲು ಬಿಡಲಾಗದು ಎಂದು ಕಟುವಾಗಿ ನುಡಿದಿದೆ. ಅಲ್ಲದೇ, ಈ ಪ್ರಕರಣಕ್ಕೆ ತಡೆ ನೀಡದರೆ ಕೃತ್ಯ ಬೆಂಬಲಿಸಿದಂತೆ ಎಂದು ಕಿಡಿಕಾರಿದೆ.

ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣಕ್ಕೆ ತಡೆ ಕೋರಿ ಕೃಷ್ಣರಾವ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಬುಧವಾರ ನಡೆಸಿತು.

ಕೃಷ್ಣಾ ರಾವ್ ಪ್ರತಿನಿಧಿಸಿದ್ದ ಹಿರಿಯ ವಕೀಲ ಪಿ ಪಿ ಹೆಗ್ಡೆ ಅವರು ಮದುವೆಯಾಗುವುದಾಗಿ ನಂಬಿಸಿ ಮದುವೆಯಾಗದೇ ಇರುವ ಪ್ರಕರಣ ಇದಾಗಿದೆ. ಕ್ರಿಮಿನಲ್ ಪ್ರಕರಣದಿಂದಾಗಿ ಇಡೀ ಕುಟುಂಬ ವಿನಾಶದ ಹಂತ ತಲುಪಿದೆ. ಒಂಭತ್ತನೇ ತರಗತಿ ಓದುವಾಗ ಸಂತ್ರಸ್ತೆ ಮತ್ತು ಕೃಷ್ಣಾ ರಾವ್‌ಗೆ ಪ್ರೀತಿಯಾಗಿತ್ತು. ಆನಂತರ ಮಗುವಾಗಿದೆ. ರಾಜಕೀಯ ಎದುರಾಳಿಗಳು ಇದನ್ನು ಬಳಕೆ ಮಾಡಿಕೊಂಡು ಕೃಷ್ಣಾ ರಾವ್ ತಂದೆಯ ಮೇಲೆ ದಾಳಿ ಮಾಡುತ್ತಿದ್ದಾರೆ. ಕೃಷ್ಣಾ ರಾವ್ ಅವರ ತಂದೆ–ತಾಯಿ, ಸಂಬಂಧಿಕರನ್ನು ಆರೋಪಿಗಳನ್ನಾಗಿಸಲಾಗಿದೆ. ಕ್ರಿಮಿನಲ್ ಪ್ರಕರಣದಿಂದಾಗಿ ಎರಡೂ ಕುಟುಂಬಗಳು ಒಟ್ಟಿಗೆ ಕುಳಿತು ಮಾತನಾಡಲಾಗದ ಸನ್ನಿವೇಶ ಸೃಷ್ಟಿಯಾಗಿದೆ. ತಾತ್ಕಾಲಿಕವಾಗಿ ತಡೆ ನೀಡಿದರೆ ಎರಡೂ ಕುಟುಂಬ ಮಾತನಾಡಬಹುದು. ಕೃಷ್ಣಾರಾವ್ ಎಂಜಿನಿಯರಿಂಗ್ ವಿದ್ಯಾರ್ಥಿಯಾಗಿದ್ದು, ಮಗು ತನ್ನದಲ್ಲ ಎಂದು ಆತ ಹೇಳುತ್ತಿಲ್ಲ. ಇದರಲ್ಲಿ ಪೋಷಕರ ಪಾತ್ರವಿಲ್ಲ ಎಂದರು.

ಆಗ ಪೀಠವು ಸಂತ್ರಸ್ತೆಯನ್ನು ಮದುವೆಯಾಗಲು ಒಪ್ಪಿದರೆ ಪ್ರಕರಣ ರದ್ದುಪಡಿಸಲಾಗುವುದು. ಇದು ಪದೇ ಪದೇ ಅತ್ಯಾಚಾರ ಮಾಡಿದ ಪ್ರಕರಣವಾಗಿದೆ. ತಾಯಿ ಮತ್ತು ಮಗುವನ್ನು ಅನಾಥವಾಗಿಸಲಾಗದು. ಎಲ್ಲದಕ್ಕೂ ಅಂತ್ಯವಾಡಲು ಸಂತ್ರಸ್ತೆ ಯನ್ನು ಮದುವೆಯಾಗುವುದು ಉತ್ತಮ. ಬೇರೊಬ್ಬರನ್ನು ಮದುವೆ ಯಾಗಬೇಕೆ? ಒಂಭತ್ತನೇ ತರಗತಿ ವಿದ್ಯಾರ್ಥಿನಿ ಜೊತೆಗೆ ಸಂಬಂಧ ಹೊಂದುವುದು ಪೋಕ್ಸೊ ಕಾಯಿದೆ ಅಡಿ ಅಪರಾಧ. ಮಗು ನಿಮ್ಮದು ಎಂದ ಮೇಲೆ ಜವಾಬ್ದಾರಿ ಇರಬೇಕಲ್ಲವೇ? ತಂದೆ ಎಂದು ಒಪ್ಪಿಕೊಂಡ ಮೇಲೆ ಮಗುವಿಗೆ ಮಾಸಿಕ ಜೀವನಾಂಶ ನೀಡುತ್ತಿದ್ದೀರಾ? ಪ್ರಕರಣಕ್ಕೆ ತಡೆ ನೀಡಿದರೆ ನಿಮ್ಮ ಕೃತ್ಯ ಬೆಂಬಲಿಸಿದಂತೆ. ಮಗುವಿನ ಜೀವನಾಂಶಕ್ಕೆ ಮಾಸಿಕ ಹತ್ತು ಸಾವಿರ ರೂಪಾಯಿ ನೀಡಿದರೆ ಪ್ರಕರಣಕ್ಕೆ ತಡೆ ನೀಡಲಾಗುವುದು ಎಂದಿತು.

ಹೆಚ್ಚುವರಿ ಸರ್ಕಾರಿ ಅಭಿಯೋಜಕ ಬಿ ಎನ್ ಜಗದೀಶ್ ಅವರು ಒಂದು ಹಂತದಲ್ಲಿ ಗರ್ಭಪಾತ ಮಾಡಿಸಲು ಮುಂದಾಗಿದ್ದರು ಎಂದರು. ಇದಕ್ಕೆ ಪಿ ಪಿ ಹೆಗ್ಡೆ ಅವರು ಎರಡೂ ಕಡೆಯವರು ಸೇರಿ ಗರ್ಭಪಾತ ಮಾಡಿಸಲು ಮುಂದಾಗಿದ್ದರು. ಆದರೆ, ಸಾಧ್ಯವಾಗಲಿಲ್ಲ ಎಂದರು. ಅಂತಿಮವಾಗಿ, ಶುಕ್ರವಾರ ವಿಚಾರಣೆ ನಡೆಸುವುದಾಗಿ ಹೇಳಿ, ಮುಂದೂಡಿತು.

# ಪ್ರಧಾನಿಯಿಂದ ಹಿಡಿದು ಕಾರ್ಯಕರ್ತರವರೆಗೆ ಬಿಜೆಪಿಯ ಎಲ್ಲರೂ ಸುಳ್ಳುಗಾರರು: ರಾಮಲಿಂಗಾರೆಡ್ಡಿ



**ರಾಮನಗರ, ಏ.23:** ಬಿಜೆಪಿಯಲ್ಲಿ ಪ್ರಧಾನಿ ಮೋದಿ ಅವರಿಂದ ಹಿಡಿದು ಕಾರ್ಯಕರ್ತರವರೆಗೆ ಎಲ್ಲರೂ ಹುಟ್ಟು ಸುಳ್ಳುಗಾರರು. ನಾಚಿಕೆಯೇ ಇಲ್ಲದ ಅವರಿಗೆ, ಸುಳ್ಳು ಹೇಳದಿದ್ದರೆ ನಿದ್ರೆಯೇ ಬರುವುದಿಲ್ಲ. ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ ವಿಂಗಡಣೆ ವಿಷಯದಲ್ಲಿ ಬಿಜೆಪಿ ಜೊತೆಗೆ ಜೆಡಿಎಸ್ ಸಹ ಸುಳ್ಳು ಹೇಳುತ್ತಿವೆ ಎಂದು ಸಚಿವ ರಾಮಲಿಂಗಾರೆಡ್ಡಿ ವಾಗ್ದಾಳಿ ನಡೆಸಿದರು.

ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ ವಿಂಗಡಣೆ ಮಸೂದೆಗೆ ಸೋಲಾದ ಹಿನ್ನೆಲೆಯಲ್ಲಿ ಕಾಂಗ್ರೆಸ್ ವಿರುದ್ಧ ಬಿಜೆಪಿ ಮಾಡುತ್ತಿರುವ ಟೀಕೆ ಕುರಿತು ನಗರದಲ್ಲಿ ಗುರುವಾರ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ಬಿಜೆಪಿ–ಜೆಡಿಎಸ್ ಮಹಿಳಾ ವಿರೋಧಿಗಳು. ನಿಜವಾಗಿಯೂ ಬಿಜಪಿಗೆ ಮಹಿಳಾ ಪರವಾದ ಕಾಳಜಿ ಇದ್ದಿದ್ದರೆ 2023ರಲ್ಲೇ ಪಾಸ್ ಆಗಿದ್ದ ಬಿಲ್‌ಗೆ ಅಂದೇ ಸಂವಿಧಾನಕ್ಕೆ ತಿದ್ದುಪಡಿ ತರುವ ಮಸೂದೆ ಯಾಕೆ ಮಂಡಿಸಿ ಜಾರಿಗೆ ತರಲಿಲ್ಲ. ಆಗ ಎಲ್ಲಾ ಪಕ್ಷಗಳು ಬಿಲ್ ಬೆಂಬಲಿಸಿರಲಿಲ್ಲವೆ ಎಂದು ಪ್ರಶ್ನಿಸಿದರು.

## ಖರ್ಗೆ ಹೇಳಿಕೆ - ಕಾಡಾನೆ ಹಾವಳಿ

ಪ್ರಧಾನಿ ಮೋದಿ ವಿರುದ್ಧ ಭಯೋತ್ಪಾದಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನೀಡಿದ ಹೇಳಿಕೆಗೆ, ನಾನು ಆ ಧಾಟಿಯಲ್ಲಿ ಹೇಳಿಲ್ಲ ಎಂದು ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ. ಆದರೂ, ಆ ವಿಷಯವನ್ನು ಮುಂದುವರಿಸುವುದು ಸರಿಯಲ್ಲ' ಎಂದರು. ಜಿಲ್ಲೆಯಲ್ಲಿ ಹೆಚ್ಚಾಗಿರುವ ಕಾಡಾನೆ ಹಾವಳಿ ತಡೆಗೆ ಅರಣ್ಯ ಇಲಾಖೆ ಸಚಿವರು ಸ್ಪಂದಿಸುತ್ತಿಲ್ಲ ಎಂದು ದೂರುವುದು ಸರಿಯಲ್ಲ. ಇತ್ತೀಚೆಗಷ್ಟೇ ಬಜೆಟ್ ಮಂಡನೆಯಾಗಿದ್ದು, ಇಲಾಖೆಗೆ ಹಣ ಬಿಡುಗಡೆಯಾಗಬೇಕಿದೆ. ಮುಖ್ಯಮಂತ್ರಿ ಹಣ ಕೊಟ್ಟರೆ ಸಚಿವರು ಖರ್ಚು ಮಾಡುತ್ತಾರೆ' ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

# ಮಹಿಳಾ- ಮಕ್ಕಳ ಆಸ್ಪತ್ರೆ ಪರಿಶೀಲನೆ: ಸೇವೆಗಳ ಸುಧಾರಣೆಗೆ ಸಂಸದೆ ಪ್ರಭಾ ಮಲ್ಲಿಕಾರ್ಜುನ ಕಟ್ಟುನಿಟ್ಟಿನ ಸೂಚನೆ

**ದಾವಣಗೆರೆ, ಏ.23:** ದಾವಣಗೆರೆಯ ಚಾಮರಾಜಪೇಟೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಗುರುವಾರ ಸಂಸದರಾದ ಪ್ರಭಾ ಮಲ್ಲಿಕಾರ್ಜುನ ಅವರು ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿದರು.

ಪರಿಶೀಲನೆಯ ನಂತರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಆಸ್ಪತ್ರೆಗೆ ಬರುವ ರೋಗಿಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಉತ್ತಮ ಆರೋಗ್ಯ ಸೇವೆಗಳನ್ನು ನೀಡುವ ದಿಕ್ಕಿನಲ್ಲಿ ಕ್ರಮ ಕೈಗೊಳ್ಳುವುದು ಅತ್ಯಂತ ಮುಖ್ಯ ಎಂದು ಹೇಳಿದರು.

ವೈದ್ಯರು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಬಾರದು ಎಂದು ಎಚ್ಚರಿಕೆ ನೀಡಿದ ಅವರು, ಆಸ್ಪತ್ರೆಯ ಸೇವೆಯನ್ನು ಕಡೆಗಣಿಸಿ ಖಾಸಗಿ ಕ್ಲಿನಿಕ್‌ಗಳಿಗೆ ಆದ್ಯತೆ ನೀಡುವ ವೈದ್ಯರು ತಕ್ಷಣವೇ ಸೇವೆಯಿಂದ ದೂರವಾಗಬಹುದು ಎಂದು ಕಿಡಿಕಾರಿದರು.

ಸೇವಾ ಮನೋಭಾವ ಹೊಂದಿರುವ ವೈದ್ಯರನ್ನು ನೇಮಿಸಿ ರೋಗಿಗಳಿಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳುವುದು ಆಡಳಿತದ ಜವಾಬ್ದಾರಿ ಎಂದು ಡಿಹೆಚ್‌ಓ ಅವರಿಗೆ ಸೂಚಿಸಿದರು.

## ಹೆಚ್ಪಿವಿ ಲಸಿಕೆ ಕುರಿತು ಜಾಗೃತಿ

**ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಹೆಚ್ಪಿವಿ ಲಸಿಕೆ ಪರಿಣಾಮಕಾರಿ ರಕ್ಷಣೆಯಾಗಿದೆ. 9ರಿಂದ 14 ವರ್ಷದ ಹೆಣ್ಣುಮಕ್ಕಳು ತಮ್ಮ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆ ಪಡೆಯಬಹುದು. ಮಾರ್ಚ್ 13 ರಿಂದ ರಾಜ್ಯಾದ್ಯಂತ ಈ ಲಸಿಕೆ ನೀಡಲಾಗುತ್ತಿದೆ. ದಾವಣಗೆರೆ ಜಿಲ್ಲೆಗೆ ಒಟ್ಟು 15,175 ಡೋಸ್ ಲಸಿಕೆ ಬಂದಿದ್ದು, ಮೊದಲ ಹಂತದಲ್ಲಿ 7,535 ಹಾಗೂ ಎರಡನೇ ಹಂತದಲ್ಲಿ 7,640 ಡೋಸ್ ಲಭ್ಯವಾಗಿದೆ. ಇದುವರೆಗೆ ಜಿಲ್ಲೆಯಲ್ಲಿ 3,570 ಹೆಣ್ಣುಮಕ್ಕಳಿಗೆ ಲಸಿಕೆ ನೀಡಲಾಗಿದೆ.**

**ಹೆಣ್ಣುಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಈ ಲಸಿಕೆ ಮಹತ್ವದ ಹೆಜ್ಜೆಯಾಗಿದ್ದು, ಹೆಚ್ಚಿನವರು ಇದರ ಪ್ರಯೋಜನ ಪಡೆಯಬೇಕು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಕರೆ ನೀಡಿದರು.**



ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆಯಿಂದ ಪಿ.ಜಿ ವೈದ್ಯರೇ ಹೆಚ್ಚಿನ ರೋಗಿಗಳನ್ನು ನೋಡುತ್ತಿದ್ದಾರೆ ಎಂಬ ದೂರುಗಳು ಬಂದಿದ್ದು, ಈ ಬಗ್ಗೆ ತಕ್ಷಣ ಗಮನಹರಿಸಲು ಸೂಚನೆ ನೀಡಿದರು. ಔಷಧ ಉಗ್ರಾಣದ ಸಮಸ್ಯೆಗಳ ಕುರಿತು ಸ್ಪಷ್ಟ ಮಾಹಿತಿ ನೀಡುವಂತೆ ಸಂಬಂಧಿಸಿದವರಿಗೆ ತಿಳಿಸಿದರು. ಸಮಸ್ಯೆಗಳನ್ನು ಮರೆಮಾಚದೆ ತಿಳಿಸಿದರೆ ಮಾತ್ರ ಅವುಗಳನ್ನು ಬಗೆಹರಿಸಲು ಸಾಧ್ಯ ಎಂದು ಹೇಳಿದರು.

ಲ್ಯಾಬ್ ತಂತ್ರಜ್ಞರಿಂದ ಸಮರ್ಪಕ ಮಾಹಿತಿ ದೊರೆಯದಿರುವುದು ಹಾಗೂ ರೋಗಿಗಳು ರಶೀದಿ ಹಿಡಿದು ಓಡಾಡುವ ಪರಿಸ್ಥಿತಿ ಇರುವುದಾಗಿ ಬಂದಿರುವ ದೂರುಗಳ ಬಗ್ಗೆ ಗಂಭೀರವಾಗಿ ಗಮನಹರಿಸಬೇಕೆಂದು ಸೂಚಿಸಿದರು. ಬೇಸಿಗೆ ಹಿನ್ನೆಲೆಯಲ್ಲಿ ರೋಗಿಗಳ ಅನುಕೂಲಕ್ಕಾಗಿ ಫ್ಯಾನ್‌ಗಳನ್ನು ಅಳವಡಿಸುವುದು, ಮಹಿಳೆಯರಿಗಾಗಿ ಶೌಚಾಲಯ ಹಾಗೂ ವಿಶ್ರಾಂತಿ ಕೊಠಡಿ ನಿರ್ಮಿಸುವ ಕುರಿತು ಬೇಡಿಕೆ ಕೇಳಿಬಂದಿದ್ದು, ನಿರ್ಮಿತಿ ಕೇಂದ್ರದ ಇಂಜಿನಿಯರ್‌ರಿಂದ ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿ ಆರಂಭಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದರು. ರಾತ್ರಿ ವೇಳೆ ಸುರಕ್ಷತೆಗಾಗಿ ಪೊಲೀಸ್ ಸಿಬ್ಬಂದಿ ನಿಯೋಜನೆ ಕುರಿತೂ ಕ್ರಮ ಕೈಗೊಳ್ಳಲಾಗುವುದು ಎಂದರು.

ಆಸ್ಪತ್ರೆಯಲ್ಲಿ ಸ್ವಚ್ಛತೆ ಹಾಗೂ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗುವುದು. ಅಗತ್ಯವಿರುವ ಸಾಮಗ್ರಿಗಳನ್ನು ಹಂತ ಹಂತವಾಗಿ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ದಾವಣಗೆರೆಯ ಹಳೆ ಭಾಗದಲ್ಲಿರುವ ಈ ಆಸ್ಪತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ರೋಗಿಗಳು ಆಗಮಿಸುತ್ತಿರುವುದರಿಂದ ಯಾರನ್ನೂ ಹೆಚ್ಚು ಸಮಯ ಕಾಯಿಸದೇ ಸಮರ್ಪಕ ಸೇವೆ ನೀಡಬೇಕು ಎಂದು ಸೂಚಿಸಿದರು.


# ಜನರ ನೆಮ್ಮದಿ ಕಿತ್ತುಕೊಂಡ ಕೈಗಾರಿಕಾ ಮಾಲಿನ್ಯ

**ರಾಯಚೂರು, ಏ. 23:** ಜಿಲ್ಲೆಯ ಸಿಂಧನೂರು ತಾಲ್ಲೂಕಿನ 4ನೇ ಮೈಲ್ ಕ್ಯಾಂಪಿನಲ್ಲಿ ಮಹಾನಂದ ಫರ್ನಿಚರ್ ಇಂಡಸ್ಟೀಸ್, ಕರ್ನಾಟಕ ಎಂಟರ್‌ಪ್ರೈಸಸ್, ಮಹಾನಂದ ಪ್ಲಾಸ್ಟಿಕ್ಸ್ ಮತ್ತು ಸ್ಟೀಲ್ ಫರ್ನಿಚರ್ ಕೈಗಾರಿಕಾ ಘಟಕಗಳು ಒಂದೇ ಆವರಣದಲ್ಲಿ ನಾಲ್ಕೈದು ವರ್ಷಗಳಿಂದ ನಡೆಯುತ್ತಿದ್ದು, ಇದರಿಂದ ಉಂಟಾಗುವ ಮಾಲಿನ್ಯದಿಂದ ತೊಂದರೆ ಅನುಭವಿಸುತ್ತಿರುವ ಅಕ್ಕಪಕ್ಕದ ನಿವಾಸಿಗಳು ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮ ಪಂಚಾಯಿತಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಮತ್ತಿತರ ಸಕ್ಷಮ ಪ್ರಾಧಿಕಾರಗಳ ಅನುಮತಿ ಪಡೆಯದೇ ಕೈಗಾರಿಕೆಗಳನ್ನು ನಡೆಸುತ್ತಿರುವುದು ಜನರ ಆಕ್ರೋಶಕ್ಕೆ ಎಡೆಮಾಡಿ ಕೊಟ್ಟಂತಾಗಿದೆ. ಕಳೆದ ಒಂದು ವರ್ಷದಿಂದ 4ನೇ ಮೈಲ್ ಕ್ಯಾಂಪ್‌ನ ನಿವಾಸಿಗಳು ಮತ್ತು ಪರಿಸರ ಮಾಲಿನ್ಯ ವಿರೋಧಿ ಹೋರಾಟ ಸಮಿತಿ ಪದಾಧಿಕಾರಿಗಳು, ಕೈಗಾರಿಕೆ ಇಲಾಖೆ, ತಾಲ್ಲೂಕು ಪಂಚಾಯಿತಿ, ಜಿಲ್ಲಾಧಿಕಾರಿ ಮತ್ತು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗೆ ಹಲವು ಬಾರಿ ದೂರುಗಳನ್ನು ಸಲ್ಲಿಸಿದ್ದರೂ ಯಾವುದೇ ಕ್ರಮ ಜರುಗಿಸದೆ ಇರುವ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಪ್ರಸ್ತುತ ಕೈಗಾರಿಕಾ ಘಟಕಗಳು ವಿರುಪಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟಿದ್ದು, 2024ರವರೆಗೆ ಮಾತ್ರ ಫರ್ನಿಚರ್ ಮಾರಾಟಕ್ಕೆ ಮಾತ್ರ ಅನುಮತಿ ಪಡೆಯಲಾಗಿದೆ. ಆದರೆ, ಫರ್ನಿಚರ್ ತಯಾರಿಕೆಗೆ ಅನುಮತಿ ಪಡೆದಿರುವುದಿಲ್ಲ. ಈ ಕೈಗಾರಿಕೆಗಳಲ್ಲಿ ಫರ್ನಿಚರ್‌ಗಳನ್ನು ಯಂತ್ರಗಳಿಂದ ತಯಾರಿಸುತ್ತಿದ್ದು, ಅದಕ್ಕೆ ಲೇಪಿಸುವ ಪುಡಿ, ಬಣ್ಣದಿಂದ ಉಂಟಾಗುವ ವಾಯುಮಾಲಿನ್ಯದಿಂದ ತಮಗೆ ಉಸಿರುಗಟ್ಟುವ ಪರಿಸ್ಥಿತಿ ಉಂಟಾಗುತ್ತಿದೆ ಎಂದು ಸಾರ್ವಜನಿಕರು ಪಂಚಾಯಿತಿಗೆ ಹತ್ತಾರು ಬಾರಿ ದೂರು ನೀಡಿದ್ದಾರೆ.

ದೂರಿನ ಅನ್ವಯ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ನಿರ್ಣಯ ಅಂಗೀಕರಿಸಿ, 1993ರ ಪ್ರಕರಣ 66 ಅನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದರಿಂದ ಉತ್ಪಾದನಾ ಘಟಕವನ್ನು ಸ್ಥಗಿತಗೊಳಿಸಬೇಕು ಎಂದು ಕೈಗಾರಿಕಾ ಘಟಕದ ಮಾಲೀಕ ವಿ.ಲಕ್ಷ್ಮೀಕಾಂತ ಅವರಿಗೆ ಸೂಚಿಸಿದೆ. ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಿಗೂ ಪತ್ರ ಬರೆದು ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿಕೊಳ್ಳಲಾಗಿದೆ. ಅಲ್ಲದೇ ಪರವಾನಗಿ ಇಲ್ಲದೇ ಫರ್ನಿಚರ್ ಉತ್ಪಾದನೆ ಮಾಡುತ್ತಿರುವುದರಿಂದ, ಜೆಸ್ಕಾಂ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಅವರಿಗೆ ಫರ್ನಿಚರ್ ಉತ್ಪಾದನಾ ಘಟಕದ ವಿದ್ಯುತ್ ಸಂಪರ್ಕ ಕಡಿತಗೊಳಿಸುವಂತೆ ಕೋರಲಾಗಿದೆ.ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಅವರು ಮಹಾನಂದ ಫರ್ನಿಚರ್ ಇಂಡಸ್ಟ್ರೀ ಪರಿವೀಕ್ಷಣೆ ಮಾಡಿ, ಕಾರ್ಖಾನೆ ಮಾಲೀಕರು ಕೈಗಾರಿಕೆ ಇಲಾಖೆ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮತಿ ಪಡೆಯದೇ ಫರ್ನಿಚರ್ ಉತ್ಪಾದನಾ ಘಟಕ ನಡೆಸುತ್ತಿರುವ ಕುರಿತು ಸಾರ್ವಜನಿಕರು ದೂರು ನೀಡಿದ್ದು, ಮುಂದಿನ ಕ್ರಮಕ್ಕಾಗಿ ನಿರ್ದೇಶನ ನೀಡುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಮಾಡಿದ್ದಾರೆ.




ತಹಶೀಲ್ದಾರ್ ಅರುಣ್.ಎಚ್. ದೇಸಾಯಿ ಅವರು, ಡಿಸೆಂಬರ್ 12,2025ರಂದು ಜಿಲ್ಲಾಧಿಕಾರಿಗೆ ಪತ್ರ ಬರೆದು ಫರ್ನಿಚರ್ ಅಲಮಾರ ತಯಾರಿಕಾ ಘಟಕವನ್ನು ಅನಧಿಕೃತವಾಗಿ ನಡೆಸುತ್ತಿರುವುದರಿಂದ ಸೂಕ್ತ ಕ್ರಮಕ್ಕಾಗಿ ನಿರ್ದೇಶನ ನೀಡುವಂತೆ ಜಿಲ್ಲಾಧಿಕಾರಿಯನ್ನು ವಿನಂತಿಸಿದ್ದಾರೆ.

ಈ ಮಧ್ಯೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಅಧಿಕಾರಿ ಗಿರೀಶ್ ಅವರು ಸ್ಥಳ ಪರಿವೀಕ್ಷಣೆ ಮಾಡಿ ಸೆಪ್ಟೆಂಬರ್ 9, 2025ರಂದು ಕೈಗಾರಿಕೆಯ ಮಾಲೀಕರಿಗೆ ನೋಟಿಸ್ ನೀಡಿ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನಿರಪೇಕ್ಷಣಾ ಪತ್ರ ಪಡೆದಿಲ್ಲ. ಉತ್ಪಾದನಾ ಘಟಕ ಕೃಷಿ ಜಮೀನಿನಲ್ಲಿದೆ. ಪುಡಿ ಬಣ್ಣದಿಂದ ಹೊರಡುವ ವಾಯಮಾಲಿನ್ಯ ತಡೆಯಲು ಯಾವುದೇ ಕ್ರಮವಹಿಸಿಲ್ಲ. ಸಮಜಾಯಿಷಿ ನೀಡುವಂತೆ ತಿಳಿಸಿದ್ದಾರೆ.

ಪರವಾನಗಿ ಪಡೆಯಲು ಇನ್ನೂ ಮೀನಮೇಷ ಮಾಡುತ್ತಿದ್ದಾರೆ. ಆದ್ದರಿಂದ ಒಂದೆರಡು ದಿನಗಳಲ್ಲಿ ಅವರ ಉತ್ಪಾದನಾ ಘಟಕಕ್ಕೆ ನೀಡಿರುವ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ವಿ.ಲಕ್ಷ್ಮೀಕಾಂತ, ಮಾಲೀಕಫರ್ನಿಚರ್ ಉತ್ಪಾದನಾ ಘಟಕದಿಂದ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿರುವುದರಿಂದ ಶಾಶ್ವತವಾಗಿ ಕೈಗಾರಿಕಾ ಘಟಕವನ್ನು ಕೈಗಾರಿಕಾ ನಗರಕ್ಕೆ ಸ್ಥಳಾಂತರಗೊಳಿಸಲು ತೀರ್ಮಾನಿಸಿದ್ದೇನೆ ಎಂ.ಗಂಗಾಧರ, ಪರಿಸರ ಮಾಲಿನ್ಯ ವಿರೋಧಿ ಹೋರಾಟ ಸಮಿತಿ ಕಳೆದ ಮೂರ್ನಾಲ್ಕು ವರ್ಷಗಳಿಂದ ನಾಲ್ಕಮೈಲ್ ಕ್ಯಾಂಪಿನ ನಿವಾಸಿಗಳು ವಾಯುಮಾಲಿನ್ಯದ ಪರಿಣಾಮವಾಗಿ ಅಸ್ತಮಾ, ಕ್ಷಯ, ಮತ್ತಿತರ ರೋಗಗಳಿಗೆ ತುತ್ತಾಗುತ್ತಿದ್ದರೂ ಅಧಿಕಾರಿಗಳು ಸ್ಪಂದಿಸದಿರುವುದು ದುರದೃಷ್ಟಕರ.

ಏ.13ರಂದು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ರಾಯಚೂರು ಜಿಲ್ಲಾ ಪರಿಸರ ಅಧಿಕಾರಿ ಶೈಲಜಾ ಅವರು ಭೇಟಿ ನೀಡಿ ಪರಿಸ್ಥಿತಿಯನ್ನು ವೀಕ್ಷಿಸಿದ್ದು, ಪರಿಸರ ಮಾಲಿನ್ಯ ವಿರೋಧಿ ಹೋರಾಟ ಸಮಿತಿಯ ಎಂ.ಗಂಗಾಧರ, ಕೈಗಾರಿಕಾ ಘಟಕದ ನೆರೆ–ಹೊರೆಯ ನಿವಾಸಿಗಳಾದ ಕನಕಪ್ಪ ಮುರಣಿ, ಎಂ.ಭಾಸ್ಕರ್, ಸಣ್ಣ ಈರಪ್ಪ, ತಿಮ್ಮಣ್ಣ ಗೊಲ್ಲರ್, ರಾಜಪ್ಪ ನವಲಿ, ನಿರುಪಾದಿ, ದುರುಗಪ್ಪ, ಬಾಳಪ್ಪ ತಾವು ಕಳೆದ 2–3 ವರ್ಷದಿಂದ ಫ್ಯಾಕ್ಟರಿಯ ಮಾಲಿನ್ಯದಿಂದ ಅನುಭವಿಸುತ್ತಿರುವ ತೊಂದರೆ ಕುರಿತು ಗಮನ ಸೆಳೆದಿದ್ದಾರೆ.

# ಸಿಇಟಿ: ಮೂಗುತಿ ತೆಗೆಯಲಾಗದಿದ್ದಕ್ಕೆ ವಿದ್ಯಾರ್ಥಿನಿಯ ಮೂಗಿಗೇ ಟೇಪ್ ಅಂಟಿಸಿದ ಅಧಿಕಾರಿಗಳು

**ಚಿಕ್ಕಮಗಳೂರು/ಬಳ್ಳಾರಿ:** ರಾಜ್ಯಾದ್ಯಂತ ಇಂದಿನಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುವ 2026ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಆರಂಭವಾಗಿವೆ. ಪರೀಕ್ಷೆ ವೇಳೆ ಪರೀಕ್ಷಾರ್ಥಿಗಳು ಲೋಹದ ಆಭರಣಗಳನ್ನು ಧರಿಸುವುದಕ್ಕೆ ಕಟ್ಟುನಿಟ್ಟಿನ ನಿಷೇಧವಿದ್ದ ಕಾರಣ, ಕೆಲವು ಪರೀಕ್ಷಾ ಕೇಂದ್ರಗಳಲ್ಲಿ ಒಳಪ್ರವೇಶಕ್ಕೂ ಮುನ್ನ ನೂರಾರು ವಿದ್ಯಾರ್ಥಿನಿಯರನ್ನು ತಡೆದು ಮೂಗುತಿ, ಇತರ ಆಭರಣಗಳನ್ನು ತೆಗೆಸಿದ ಘಟನೆಗಳು ನಡೆದವು.

ತಪಾಸಣೆ ವೇಳೆ ಚಿಕ್ಕಮಗಳೂರಿನ ಎಂಇಎಸ್ ಕಾಲೇಜಿನಲ್ಲಿ ವಿದ್ಯಾರ್ಥಿನಿಯರನ್ನು ತಡೆ ಹಿಡಿಯಲಾಯಿತು. ಮೂಗುತಿ ಬಿಚ್ಚಲು ಸಾಧ್ಯವಾಗದ ಅನಿವಾರ್ಯ ಪರಿಸ್ಥಿತಿ ನಿರ್ಮಾಣವಾದಾಗ, ಪರೀಕ್ಷಾ ಸಿಬ್ಬಂದಿಯೇ ವಿದ್ಯಾರ್ಥಿನಿಯರ ಮೂಗಿನ ಮೇಲೆ ಗಮ್ ಟೇಪ್ ಅಂಟಿಸಿ ಪರೀಕ್ಷಾ ಕೊಠಡಿಯೊಳಗೆ ಕಳುಹಿಸಿದ ಘಟನೆ ನಡೆಯಿತು.ನಿಯಮಗಳ ಕಟ್ಟುನಿಟ್ಟಿನ ಪಾಲನೆಗಾಗಿ ಮೂಗಿಗೆ ಟೇಪ್ ಅಂಟಿಸಿರುವುದು ಪೋಷಕರು ಮತ್ತು ಅಭ್ಯರ್ಥಿಗಳ ಅಸಮಾಧಾನಕ್ಕೆ ಕಾರಣವಾಯಿತು. ಪರೀಕ್ಷೆಯ ಒತ್ತಡದ ನಡುವೆ ಈ ವಿಚಿತ್ರ ಸನ್ನಿವೇಶವು ವಿದ್ಯಾರ್ಥಿನಿಯರಲ್ಲಿ ಕೆಲಕಾಲ ಗೊಂದಲ ಸೃಷ್ಟಿಸಿತು.




ಪರೀಕ್ಷೆ ಸುಗಮವಾಗಿ ನಡೆಯಬೇಕು ಎಂಬ ಉದ್ದೇಶದಿಂದ ಸಿಬ್ಬಂದಿ ಈ ಕ್ರಮಕ್ಕೆ ಮುಂದಾದರು. ಅಂತಿಮವಾಗಿ ಯಾವುದೇ ಅಹಿತಕರ ಘಟನೆ ನಡೆಯದೆ, ಪರೀಕ್ಷೆಯು ಸುಗಮವಾಗಿ ಮುಂದುವರೆಯಿತು.

ಪರೀಕ್ಷಾ ಕೇಂದ್ರದ ಸುತ್ತಮುತ್ತ ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.ಬಳ್ಳಾರಿ ಜಿಲ್ಲೆಯಾದ್ಯಂತ 10 ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆಗಳು ನಡೆಯುತ್ತಿವೆ. ಒಟ್ಟು 6,667 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಒಳಪ್ರವೇಶಿಸುವ ಮುನ್ನ ವಿದ್ಯಾರ್ಥಿಗಳನ್ನು ಕಟ್ಟುನಿಟ್ಟಿನ ಪರಿಶೀಲನೆ ನಡೆಸಲಾಯಿತು.

ಈ ವೇಳೆ, ವಿದ್ಯಾರ್ಥಿನಿಯರ ಕಿವಿಯೋಲೆ ಸೇರಿದಂತೆ ಇತರ ಆಭರಣಗಳನ್ನು ಪರೀಕ್ಷಾ ಸಿಬ್ಬಂದಿಯು ಬಿಚ್ಚಿಸಿದರು. ಅಲ್ಲದೆ, ಕೊರಳಿಗೆ ಹಾಗೂ ಕೈಯಲ್ಲಿ ಧರಿಸಿದ್ದ ದಾರ ಗಳನ್ನೂ ಸಹ ತೆಗೆಸಲಾಗಿದೆ. ಬಹುತೇಕ ವಿದ್ಯಾರ್ಥಿಗಳು ಯಾವುದೇ ರೀತಿಯ ಆಭರಣ ಧರಿಸದೇ ಕೇಂದ್ರಗಳಿಗೆ ಆಗಮಿಸಿದ್ದರು. ಪರೀಕ್ಷೆಗಳು ಸುಗಮವಾಗಿ ನಡೆಯಲು ಅಗತ್ಯ ಭದ್ರತೆ ಕೈಗೊಳ್ಳಲಾಗಿತ್ತು.

# ಮನುಕುಲೋದ್ಧಾರಕ್ಕೆ ಆದಿಶಂಕರರ ತತ್ವಗಳು ದಾರಿದೀಪ: ಪ್ರಭಾಕರ ಜೋಶಿ



**ಕಲಬುರಗಿ, ಏ. 23:** ವೇದಗಳ ಸಾರವನ್ನೇ ತಮ್ಮ "ಅದ್ವೈತ' ಸಿದ್ಧಾಂತದ ಮೂಲಕ ಜಗತ್ತಿಗೆ ಪರಿಚಯಿಸಿದ ಶ್ರೀ ಶಂಕರಾಚಾರ್ಯರು ವಿಶ್ವದ ಮಹಾನ್ ದಾರ್ಶನಿಕರು. ಅವರ ದರ್ಶನ ಶಾಸ್ತ್ರವು ಕೇವಲ ಒಂದು ವರ್ಗಕ್ಕಲ್ಲ, ಬದಲಾಗಿ ಇಡೀ ಮನುಕುಲೋದ್ಧಾರಕ್ಕೆ ಪೂರಕ ಎಂದು ರಂಗಾಯಣದ ಮಾಜಿ ನಿರ್ದೇಶಕ ಹಾಗೂ ಪತ್ರಕರ್ತ ಪ್ರಭಾಕರ ಜೋಶಿ ಹೇಳಿದರು.

ಶ್ರೀ ಶಂಕರಾಚಾರ್ಯ ಜಯಂತಿಯನ್ನು ಉದ್ಘಾಟಿಸಿದ ಅವರು, ಶಂಕರಾಚಾರ್ಯರು ವೇದ ಗಳಿಗೆ ಹೊಸ ಭಾಷೆಯ ಬರೆಯುವ ಮೂಲಕ ಸಮಾಜಕ್ಕೆ ಸರಿಯಾದ ದಾರಿಯನ್ನು ತೋರಿಸಿಕೊಟ್ಟಿದ್ದಾರೆ. ಅವರು ಯಾವುದೇ ಹೊಸ ಸಿದ್ಧಾಂತವನ್ನು ಹುಟ್ಟುಹಾಕಲಿಲ್ಲ, ಬದಲಾಗಿ ಅಸ್ತಿತ್ವದಲ್ಲಿದ್ದ ವೇದಗಳ ಜ್ಞಾನವನ್ನೇ ದರ್ಶನವನ್ನಾಗಿ ರೂಪಿಸಿದರು ಎಂದು ತಿಳಿಸಿದರು.

ಧರ್ಮವು ಸರಿಯಾದ ದಾರಿಯಲ್ಲಿದ್ದರೆ ಅದು ಬದುಕಿಗೆ ಬೆಳಕಾಗುತ್ತದೆ. ಅದೇ ಧರ್ಮ ಹಾದಿ ತಪ್ಪಿದರೆ ಸಮಾಜಕ್ಕೆ ಬೆಂಕಿಯಾಗಿ ಪರಿಣಮಿಸುತ್ತದೆ. ಮನುಷ್ಯರು ಸರಿ–ತಪ್ಪುಗಳ ವಿವೇಚನೆಯೊಂದಿಗೆ ಶಂಕರಾಚಾರ್ಯರ ಅಹಿಂಸಾತ್ಮಕ ಮತ್ತು ಜ್ಞಾನಯುಕ್ತ ಹಾದಿಯನ್ನು ಅನುಸರಿಸುವುದು ಇಂದಿನ ಕಾಲದ ಅವಶ್ಯಕತೆಯಾಗಿದೆ. ಶ್ರೀ ಶೃಂಗೇರಿ ಶಾರದಾ ಪೀಠ ವಿಶೇಷ ಪ್ರತಿನಿಧಿ ಪ್ರಕಾಶ ಎಚ್. ಕುಲಕರ್ಣಿ ಅವರು ಮಾತನಾಡಿ, ಶೃಂಗೇರಿ ಜಗದ್ಗುರುಗಳ ಆಶಯದಂತೆ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಶಂಕರ ಜಯಂತಿಯನ್ನು ಅಧಿಕೃತವಾಗಿ ಆಚರಿಸುತ್ತಿರುವುದು ಅತ್ಯಂತ ಶ್ಲಾಘನೀಯ ಎಂದರು.

ಆದಿಶಂಕರಾಚಾರ್ಯರು 8ನೇ ಶತಮಾನದಲ್ಲೇ ಸಮಾಜದಲ್ಲಿ ಸಮಾನತೆ ಹಾಗೂ ಸ್ತ್ರೀ ಸ್ವಾತಂತ್ರ್ಯದ ತತ್ವಗಳನ್ನು ಸಾರಿದ್ದರು. ಅವರ ಅದ್ವೈತ ಸಿದ್ಧಾಂತವನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಕಚೇರಿಯ ಸಹಾಯಕ ಶಿವಪ್ರಭು ಹಿರೇಮಠ ಅವರು ಮಾತನಾಡಿ, ಇಂದಿನ ಸಮಾಜದಲ್ಲಿ ನಮಗೆ ಏಳನೇ ಶತಮಾನದ ಶಂಕರಾಚಾರ್ಯರು ಮತ್ತು ಬಸವಣ್ಣನವರಂತಹ ಶರಣರು ನೆನಪಿದ್ದಾರೆ ಎಂದರೆ ಅದಕ್ಕೆ ಅವರು ಸಮಾಜಕ್ಕೆ ನೀಡಿದ ಕೊಡುಗೆಯೇ ಕಾರಣ. ಶರಣರ ವಿಚಾರಗಳನ್ನು ನಾವು ಕೇವಲ ಭಾಷಣಕ್ಕೆ ಸೀಮಿತ ಗೊಳಿಸುತ್ತಿದ್ದೇವೆ, ಆದರೆ ಅವುಗಳನ್ನು ವೈಯಕ್ತಿಕ ಜೀವನದಲ್ಲಿ ಅಳವಡಿಸಿಕೊಳ್ಳುತ್ತಿಲ್ಲ. ಪ್ರವಚನದಲ್ಲಿ ಪ್ರೀತಿಯ ಬಗ್ಗೆ ಕೇಳುವ ನಾವು ಮನೆಗೆ ಬಂದ ಕೂಡಲೇ ನೆರೆಹೊರೆ ಯವರೊಂದಿಗೆ ಜಗಳವಾಡುತ್ತೇವೆ. ಇಂದಿನ ಶಿಕ್ಷಿತ ಸಮಾಜದಲ್ಲಿ ಸಂಸ್ಕಾರದ ಕೊರತೆ ಎದ್ದು ಕಾಣುತ್ತಿದೆ.

ಯಾದಗಿರಿ ಪಶುಪಾಲನಾ ಇಲಾಖೆ ಪಶು ವೈದ್ಯಕೀಯ ಪರೀಕ್ಷಕಿ ಅನುರಾಧ ನಾಯಕ್ ಅವರು ಉಪನ್ಯಾಸ ನೀಡಿ ಮಾತನಾಡಿ, ಆದಿ ಶಂಕರಾಚಾರ್ಯರು ಕೇವಲ ದಾರ್ಶನಿಕರಲ್ಲ, ಅವರು ಅಧ್ಯಾತ್ಮದ ಮೂಲಕ ಭಾರತವನ್ನು ಭಾವನಾತ್ಮಕವಾಗಿ ಒಂದುಗೂಡಿಸಿದ ಮಹಾನ್ ಸಂಘಟನಾ ಚತುರರು. ಧರ್ಮವು ಸಂಕಷ್ಟದಲ್ಲಿದ್ದಾಗ ಶಂಕರಾಚಾರ್ಯರು 'ಅದ್ವೈತ ಸಿದ್ಧಾಂತ'ದ ಮೂಲಕ ಜೀವ ಮತ್ತು ಪರಮಾತ್ಮ ಒಂದೇ ಎಂದು ಸಾರಿದರು. ಬ್ರಹ್ಮ ಸತ್ಯ, ಜಗತ್ತು ಮಿಥ್ಯ ಎಂಬ ತತ್ವದಡಿ ನಾಲ್ಕು ದಿಕ್ಕುಗಳಲ್ಲಿ ಮಠಗಳನ್ನು ಸ್ಥಾಪಿಸಿ ಸಾಂಸ್ಕೃತಿಕ ಏಕತೆ ಮೂಡಿಸಿದರು. ಸ್ತ್ರೀ ಸಮಾನತೆ ಮತ್ತು ದೀನದಲಿತರ ಬಗ್ಗೆ ಅವರಿಗಿದ್ದ ಕಳಕಳಿ ಇಂದಿಗೂ ನಮಗೆ ಮಾರ್ಗ ದರ್ಶಕವಾಗಿದೆ ಎಂದರು.

---

ಜಮೀರ್‌ಅಹ್ಮದ್ ಖಾನ್ ಜೆಡಿಎಸ್ ಸೇರ್ಪಡೆ ವಿಚಾರಕ್ಕೆ ಎಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯೆ

# ಅಧಿಕಾರಕ್ಕಾಗಿ ನಾಯಕರನ್ನು ಪಕ್ಷಕ್ಕೆ ಸೇರಿಸಿಕೊಳ್ಳುವ ಅಗತ್ಯ ಇಲ್ಲವೇ ಇಲ್ಲ



**ಹಾಸನ, ಏ.23:** ಸಚಿವ ಜಮೀರ್ ಅಹ್ಮದ್ ಖಾನ್ ಜೆಡಿಎಸ್ ಪಕ್ಷಕ್ಕೆ ಸೇರುತ್ತಾರೆ ಎಂಬ ವಿಚಾರಕ್ಕೆ ಸಂಬಂಧಪಟ್ಟಂತೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಅಧಿಕಾರಕ್ಕಾಗಿ ಅಂತಹ ಜನರನ್ನು ಸೇರಿಸಿಕೊಳ್ಳುವ ಅವಶ್ಯಕತೆ ಇಲ್ಲ ಎಂದಿದ್ದಾರೆ.

ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಉದ್ದೂರು ಹೊಸಳ್ಳಿ ಗ್ರಾಮದಲ್ಲಿ ಮಾತನಾಡಿದ ಅವರು, ಯಾವುದೇ ಕಾರಣಕ್ಕೂ ಆ ವಿಷಯವನ್ನು ನನ್ನ ಮುಂದೆ ಹೇಳಬೇಡಿ. ಅವರನ್ನು ಸೇರಿಸಿಕೊಳ್ಳುವ ಅವಶ್ಯಕತೆ ಇಲ್ಲ. ಈಗಾಗಲೇ ಅನುಭವಿಸಿದ್ದೇನೆ. ರಾಜಕೀಯದಲ್ಲಿ ಶಕ್ತಿ ಬರುತ್ತೆ ಅಂತ ಹೇಳಿ ಈ ಕೆಲಸಕ್ಕೆ ಕೈಹಾಕುವುದಿಲ್ಲ. ಬೆಂದ ಮನೆಯಲ್ಲಿ ಗಳ ಹಿರಿಯುವ ಕೆಲಸ ಮಾಡಲ್ಲ. ಕಾಂಗ್ರೆಸ್ಸಿಗರು ಅನ್ನ ತಿನ್ನುತ್ತಿರುವುದು ಆ ವರ್ಗದವರಿಂದ ಅಂತಿದ್ದಾರೆ.

ಕಾಂಗ್ರೆಸ್‌ನವರು ಯಾರಾದರೂ ಅದನ್ನು ವಿರೋಧ ಮಾಡಿದ್ದೀರಾ, ಇದು ಎಲಿಗೆ ಬಂದು ನಿಲ್ಲುತ್ತೆ ನೋಡೋಣ ಎಂದರು.

---

# ಮಹಿಳಾ ಮೀಸಲಾತಿ ವಿರೋಧಿಗಳಿಗೆ ಜನ ತಕ್ಕಪಾಠ ಕಲಿಸಲಿದ್ದಾರೆ: ಶ್ರೀರಾಮುಲು



**ಬಳ್ಳಾರಿ, ಏ.23:** ಮಹಿಳಾ ಮೀಸಲಾತಿ ತಿದ್ದುಪಡಿ ಕಾಯ್ದೆ ಜಾರಿಗೆ ಸಂಸತ್‌ನಲ್ಲಿ ಎನ್‌ಡಿಎ ವಿಫಲವಾಗಿರುವುದನ್ನು ಪ್ರತಿಪಕ್ಷಗಳು ಜಯ ಎಂಬಂತೆ ಬಿಂಬಿಸಿಕೊಳ್ಳುತ್ತಿವೆ. ಅವರಿಗೆ ಜನತೆ ತಕ್ಕಪಾಠ ಕಲಿಸುತ್ತಾರೆಂದು ಮಾಜಿ ಸಚಿವ ಬಿ.ಶ್ರೀರಾಮುಲು ಹೇಳಿದ್ದಾರೆ.

ಅವರು ನಗರದಲ್ಲಿನ ತಮ್ಮಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ. ಗಾಂಧಿ ಕುಟುಂಬಕ್ಕೆ ಮಹಿಳಾ ಮೀಸಲಾತಿ ಬೇಕಿಲ್ಲ. ಕಾರಣ ಅವರಿಗೆ ವಂಶಪರಂಪರೆಯ ರಾಜಕೀಯ ಇರುವುದರಿಂದ. ಇದೇ ರೀತಿ ಡಿಎಂಕೆ.ಸಮಾಜವಾದಿ ಪಕ್ಷ, ಟಿಎಂಸಿಯವರು ಸಹ ಮಹಿಳಾ ಮೀಸಲಾತಿ ವಿರೋಧಿಸಿದ್ದಾರೆ. ಇಂಡಿ ಕೂಟ ಕುಟುಂಬದ ಕೂಟ ಆಗಿದೆಂದು ಆರೋಪಿಸಿದರು.

ಈ ವೇಳೆ ಶ್ರೀರಾಮುಲು ಅವರು ತಮ್ಮ ಕಚೇರಿಯಲ್ಲಿ ಭಗೀರಥರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ. ಭಗೀರಥ ಜಯಂತಿ ಆಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಪಾಲಿಕೆಯ ಪ್ರತಿಪಕ್ಷದ ನಾಯಕ, ಶ್ರೀನಿವಾಸ್ ಮೋತ್ಕರ್, ಸದಸ್ಯರಾದ ಕೆ.. ಹನುಮಂತಪ್ಪ, ಹನುಂತ ಗುಡಿಗಂಟಿ, ಪಕ್ಷದ ಮುಖಂಡರಾದ ಎಸ್.ಗುರುಲಿಂಗನಗೌಡ, ವೇಮಣ್ಣ, ಮೊದಲಾದವರು ಇದ್ದರು.

ಪ್ರಧಾನಿ ಮೋದಿ ಅವರನ್ನು ಮಲ್ಲಿಕಾರ್ಜುನ ಖರ್ಗೆ ಭಯೋತ್ಪಾದಕರು ಎಂದು ಕರೆದಿರುವುದು ದೇಶಕ್ಕೆ ಮಾಡಿದ ಅಪಮಾನವಾಗಿದೆ. ಒಂದು ಕುಟುಂಬವನ್ನು ಓಲೈಕೆ ಮಾಡಲು ಹೀಗೆ ಹೇಳಿದ್ದು ಸರಿಯಲ್ಲ. ಸಣ್ಣ ಖರ್ಗೆ ರೀತಿ ನಿಮ್ಮಂತಹ ಪ್ರಬುದ್ಧರು ಮಾತನಾಡುವುದು ಸರಿಯಲ್ಲ ಎಂದರು. ನಿಜವಾದ ಭಯೋತ್ಪಾದಕರನ್ನು ಸನ್ಮಾನ ಮಾಡುತ್ತಾರೆ ಕಾಂಗ್ರೆಸ್ ನವರು ಇವರನ್ನು ಏನೆಂದು ಕರೆಯಬೇಕು ಎಂದು ಪ್ರಶ್ನಿಸಿದರು.

ಮೇ 9 ಚಿತ್ರದುರ್ಗದಲ್ಲಿ ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಸನ್ಮಾನಿಸಿ ಗೌರವಿಸುವ ಸಮಾವೇಶವನ್ನು ಪಕ್ಷ ಸಂಘಟನೆಗೆ ಒಗ್ಗಟ್ಟು ಪ್ರದರ್ಶಿಸಲು ಸಿದ್ದತೆ ನಡೆಸಿದೆ. ಈ ಸಮಾವೇಶಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಬರಲಿದ್ದಾರೆ. ಹತ್ತು ಲಕ್ಷ ಸೇರುವ ಸಾಧ್ಯತೆ ಇದೆಂದರು.

---

# ಬಸವೇಶ್ವರ ಜಾತ್ರೆ ರಥೋತ್ಸವ: ರಥದ ಚಕ್ರಕ್ಕೆ ಸಿಲುಕಿ ಭಕ್ತನ ಕಾಲು ಕಟ್



ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಗುರುವಾರ ನಡೆದ ಶ್ರೀ ಬಸವೇಶ್ವರ ಜಾತ್ರೆಯ ವೇಳೆ ರಥದ ಚಕ್ರ ಹರಿದ ಪರಿಣಾಮ ಇಬ್ಬರು ಭಕ್ತರು ಗಾಯಗೊಂಡಿದ್ದಾರೆ.

**ಬೀದರ್, ಏ. 23:** ಮಹಾತ್ಮ ಬಸವೇಶ್ವರ ಜಾತ್ರಾ ಮಹೋತ್ಸವದ ವೇಳೆ ಅವಘಡ ಸಂಭವಿಸಿದೆ. ರಥೋತ್ಸವದ ವೇಳೆ ರಥದ ಚಕ್ರಕ್ಕೆ ಸಿಲುಕಿ ಮೂವರು ಗಾಯಗೊಂಡಿದ್ದು, ಓರ್ವನ ಕಾಲು ತುಂಡಾದ ಘಟನೆ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಥೇರ್ ಮೈದಾನದಲ್ಲಿ ನಡೆದಿದೆ. ಗುರುವಾರ ಬೆಳಗ್ಗೆ ಬಸವೇಶ್ವರ ಜಾತ್ರಾ ಮಹೋತ್ಸವದ ವೇಳೆ ಈ ಘಟನೆ ನಡೆದಿದೆ.

ರಥೋತ್ಸವಕ್ಕೆ ಜನಸಾಗರವೇ ಹರಿದು ಬಂದಿದೆ. ದೇವಾಲಯದ ಮುಂಭಾಗದಲ್ಲಿ ರಥೋತ್ಸವ ಹಿನ್ನೆಲೆಯಲ್ಲಿ ಬೃಹತ್ ರಥ ಎಳೆಯುತ್ತಿದ್ದಾಗ ರಥದ ಚಕ್ರಕ್ಕೆ ಸಿಲುಕಿ ಓರ್ವ ಭಕ್ತನ ಕಾಲು ಕಟ್ ಆಗಿದೆ. ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ರಥೋತ್ಸವಕ್ಕೆ ಭಕ್ತಾದಿಗಳು ಸಾಗರೋಪಾದಿಯಲ್ಲಿ ಆಗಮಿಸಿದ್ದು, ಥೇರ್ ಮೈದಾನದಲ್ಲಿ ಭಕ್ತಿಭಾವದಿಂದ ಭಕ್ತರು ರಥ ಎಳೆಯುತ್ತಿದ್ದರು. ಈ ವೇಳೆ ಮೂವರು ಭಕ್ತರು ರಥದ ಚಕ್ರಕ್ಕೆ ಸಿಲುಕಿ ಗಾಯಗೊಂಡಿದಾರೆ. ಅವರಲ್ಲಿ ಓರ್ವನ ಕಾಲು ಕಟ್ ಆಗಿದೆ.

ರಥ ಎಳೆಯುವಾಗ ಏಕಾಏಕಿ ಜನರ ನಡುವೆ ನೂಕು ನುಗ್ಗಲು ಉಂಟಾಗಿದ್ದು, ಈ ವೇಳೆ ನಿಯಂತ್ರಣ ತಪ್ಪಿದ ರಥ ಮುಂದಕ್ಕೆ ಸಾಗಿದೆ. ಈ ವೇಳೆ ಕೆಲವರು ಕೆಳಗೆ ಬಿದ್ದಿದ್ದು, ಮೂವರು ರಥದ ಚಕ್ರಕ್ಕೆ ಸಿಲುಕಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಧನರಾಜ್, ಭೀಮಾಶಂಕರ್ ಹಾಗೂ ರಿಷಬ್ ಸೇರಿ ಮೂವರು ಗಾಯಗೊಂಡಿದ್ದು, ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಲ್ಲಿ ಧನರಾಜ್ ಅವರ ಎರಡೂ ಕಾಲುಗಳು ತುಂಡಾಗಿದೆ. ರಿಷಬ್ ಎಂಬಾತನ ಕಾಲುಗಳಿಗೆ ಗಂಭೀರ ಗಾಯಗಳಾಗಿವೆ. ಭೀಮಾಶಂಕರ್ ಸಣ್ಣಪುಟ್ಟ ಗಾಯಗೊಂಡಿದ್ದಾರೆ.

---

# 3–4 ತಿಂಗಳಲ್ಲಿ ರಾಜ್ಯ ರಾಜಕೀಯದಲ್ಲಿ ಬದಲಾವಣೆ: ಈಶ್ವರಪ್ಪ ಭವಿಷ್ಯ



**ಬಳ್ಳಾರಿ, ಏ.23:** ಮುಖ್ಯ ಮಂತ್ರಿ ಸಿದ್ದರಾಮಯ್ಯ ಬೆಂಬಲಿಗರು ಒಂದು ಕಡೆ ಸೇರಿ ಸಭೆ ಮಾಡುತ್ತಿದ್ದಾರೆ. ಸಿಎಂ ಮತ್ತು ಡಿಸಿಎಂ ಗುಂಪು ಮಿತಿಮೀರಿ ಶಿಸ್ತು ಮೀರಿ ನಡೆದು ಕೊಳ್ಳುತ್ತಿದ್ದಾರೆ. ಬರುವ ಮೂರ್ನಾಲ್ಕು ತಿಂಗಳಲ್ಲಿ ರಾಜ್ಯದ ರಾಜಕಾರಣ ಬಹಳಷ್ಟು ಬದಲಾವಣೆ ಆಗಲಿದೆ ಎಂದು ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಹೇಳಿದ್ದಾರೆ.

ನಗರದ ಅತಿಥಿ ಗೃಹದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು. ದಾವಣಗೆರೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ನ ಅನೇಕ ಮುಸ್ಲೀಂ ನಾಯಕರು ಪಕ್ಷ ವಿರೋಧಿ ಚಟುವಟಿಕೆ ಮಾಡಿದ್ದಾರೆಂದು ಪಕ್ಷದಿಂದ ಹೊರ ಹಾಕಿದ್ದಾರೆ. ಅದಕ್ಕೆ ಮುಸ್ಲಿಂ ಗುರುಗಳು ಅದನ್ನು ವಿರೋಧಿಸಿ ಎಚ್ಚರಿಕೆ ನೀಡಿದ್ದಾರೆ. ಇದನ್ನು ಪಕ್ಷದ ಮುಖಂಡರಾರೂ ಖಂಡಿಸಿಲ್ಲ.

ಮುಸ್ಲೀಂರು ಯುಪಿ ಸೇರಿದಂತೆ ಹಲವು ರಾಜ್ಯಗಳಲ್ಲಿ ಬೇರೆ ಪಕ್ಷ ಬೆಂಬಲಿಸಿದ್ದಾರೆ. ಈಗ ನಡೆದಿರುವ ರಾಜ್ಯಗಳ ಚುನಾವಣೆ ಫಲಿತಾಂಶದಿಂದ ಕಾಂಗ್ರೆಸ್ ಅವಸಾನದ ದಿಕ್ಕಿನಲ್ಲಿ ಸಾಗಲಿದೆಂದರು. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗಳು ಹಾಸ್ಯಾಸ್ಪದ ವಾಗಿವೆ. ಅವರು ದೇಶದ ಕ್ಷಮೆ ಕೇಳಬೇಕು ಎಂದ ಅವರು, ಮಹಿಳಾ ಮೀಸಲಾತಿ ಜಾರಿಗೆ ಕಾಂಗ್ರೆಸ್ ವಿರೋಧ ಮಾಡಿದ್ದು ಮಹಿಳೆಯರಿಗೆ ಮಾಡಿದ ಅಪಮಾನ ಎಂದರು.

ಹಿಂದುತ್ವಕ್ಕೆ ಬಿಜೆಪಿಯಲ್ಲಿ ಬೆಲೆ ಇಲ್ಲ. ಜಾತಿ ರಾಜ ಕಾರಣಕ್ಕೆ ಬೆಲೆ ಇರುವ ಕಾರಣ ಶುದ್ದೀಕರಣ ಆಗಲಿ ಎಂದ ಅವರು ಶುದ್ದೀಕರಣ ಆಗುತ್ತೆ ಎಂಬ ನಂಬಿಕೆ ಇದೆಂದರು.

ಯಡಿಯೂರಪ್ಪ ಅವರಿಗೆ ಚಿತ್ರದುರ್ಗದಲ್ಲಿ ಸನ್ಮಾನ ಸಮಾವೇಶಕ್ಕೆ ಕರೆದರೆ ಸ್ನೇಹಿತರ ಜೊತೆ ಚರ್ಚಿಸಿ ತೀರ್ಮಾನಿಸುವೆ ಎಂದರು.

---

# ದೇವಸ್ಥಾನಗಳು ನಂಬಿಗೆಯ ಶ್ರದ್ಧಾ ಕೇಂದ್ರಗಳು: ಶ್ರೀ ರಂಭಾಪುರಿ ಜಗದ್ಗುರುಗಳು

**ಹಗರಿಬೊಮ್ಮನಹಳ್ಳಿ, ಏ.23–** ಭಾರತೀಯ ಸಂಸ್ಕೃತಿಯಲ್ಲಿ ಧರ್ಮಕ್ಕೆ ಬಹಳಷ್ಟು ಮಹತ್ವ ಕೊಟ್ಟಿದ್ದಾರೆ. ಸಾಹಿತ್ಯ ಸಂಸ್ಕೃತಿ ಮತ್ತು ಪರಂಪರೆ ಉಳಿಸಿ ಬೆಳೆಸಿಕೊಂಡು ಬರುವುದರಲ್ಲಿ ದೇವಸ್ಥಾನಗಳ ಪಾತ್ರ ದೊಡ್ಡದು. ದೇವಸ್ಥಾನಗಳು ಜನರ ನಂಬಿಗೆಯ ಶ್ರದ್ಧಾ ಕೇಂದ್ರಗಳಾಗಿವೆಯೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.


ಅವರು ಬುಧವಾರ ತಾಲೂಕಿನ ಗಿರಿಗೊಂಡನಹಳ್ಳಿ ಗ್ರಾಮದಲ್ಲಿ ಶ್ರೀ ಈಶ್ವರ ದೇವಸ್ಥಾನ ಮತ್ತು ಪರಿವಾರ ದೇವಸ್ಥಾನಗಳ ಉದ್ಘಾಟನೆ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವರು ಧರ್ಮದಲ್ಲಿ ನಂಬಿಗೆಯಿಟ್ಟ ಆಸ್ತಿಕರು ಈ ನಾಡಿನಲ್ಲಿ ಇದ್ದಾರೆ. ದೇವರಲ್ಲಿ ನಂಬಿಗೆ ವಿಶ್ವಾಸಗಳಿಲ್ಲದ ನಾಸ್ತಿಕರು ಕೂಡಾ ಇದ್ದಾರೆ. ಭಗವಂತ ಕೊಟ್ಟ ಕೊಡುಗೆಯನ್ನು ಬೇರೆ ಯಾರೂ ಕೊಡಲಿಕ್ಕೆ ಸಾಧ್ಯವಿಲ್ಲ. ದೇವರು ಮತ್ತು ಮರಣ ಇದೆ ಎಂಬುದನ್ನರಿತು ಧರ್ಮ ಮಾರ್ಗದಲ್ಲಿ ನಡೆಯಬೇಕು. ನಾವು ಮಾಡಿದ ಉಪಕಾರ ಪರರು ಮಾಡಿದ ಅಪಕಾರ ಎರಡನ್ನೂ ಮರೆಯಬೇಕು. ಜೀವನ ಸಮೃದ್ಧಿ ಶಾಂತಿಗೆ ಆಧ್ಯಾತ್ಮವೊಂದೇ ಆಶಾಕಿರಣ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ಸಿದ್ಧಾಂತದ ಬೋಧನೆ ಮನುಕುಲದ ಉನ್ನತಿಗೆ ಕಾರಣವಾಗಿದೆ ಎಂದರು.

---

ಇತರ ಗ್ರಹಗಳಲ್ಲೂ ವಾಸಸ್ಥಾನ ನಿರ್ಮಾಣಕ್ಕೆ ಸಿದ್ಧತೆ

# ಮಾನವ ಭೂಮಿಯಾಚೆಗಿನ ಗ್ರಹಗಳನ್ನೂ ತಲುಪುವ ಸಾಮರ್ಥ್ಯ ಕಂಡುಕೊಂಡಿದ್ದಾನೆ: ಎ.ಎಸ್.ಕಿರಣ್‌ಕುಮಾರ್



**ಧಾರವಾಡ, ಏ.23:** ಭೂಮಿಯಾಚೆಗಿನ ಇತರ ಗ್ರಹಗಳಿಗೂ ತಲುಪುವ ಸಾಮರ್ಥ್ಯವನ್ನು ಮಾನವ ಕಂಡುಕೊಂಡಿದ್ದಾನೆ. ಇತರ ಗ್ರಹಗಳಲ್ಲಿ ವಾಸ ಸ್ಥಾನ ನಿರ್ಮಾಣಕ್ಕೆ ಸಿದ್ಧತೆಗಳು ನಡೆದಿವೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಮಾಜಿ ಅಧ್ಯಕ್ಷ ಎ.ಎಸ್.ಕಿರಣಕುಮಾರ್ ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯದ ಗಾಂಧೀ ಭವನದಲ್ಲಿ ಗುರುವಾರ ನಡೆದ 75ನೇ ವಾರ್ಷಿಕ ಘಟಿಕೋತ್ಸವ ದಲ್ಲಿ ಮಾತನಾಡಿ, ಬದಲಾವಣೆ ವೇಗ ನಿಧಾನವಾಗಿದ್ದಾಗ, ಜನರು ಹೊಸ ಪರಿಸ್ಥಿತಿಗಳಿಗೆ ಹೊಂದಿಕೊಳ್ಳಲು ಸಾಕಷ್ಟು ಸಮಯ ಸಿಗುತ್ತಿತ್ತು. ಆದರೆ ಈಗ ವೇಗವಾದ ಬದಲಾವಣೆಗಳು ವ್ಯಕ್ತಿಗಳು, ಗುಂಪುಗಳು, ಸಮುದಾಯಗಳು ಮತ್ತು ರಾಷ್ಟ್ರಗಳ ಮೇಲೆ ಹೇಗೆ ಪರಿಣಾಮ ಬೀರುತ್ತವೆ ಎಂಬುದನ್ನು ಸಂಶೋಧಕರು ವಿವರಿಸಿದ್ದಾರೆ. ಪ್ರಸ್ತುತ ಲಭ್ಯವಿರುವ ತಂತ್ರಜ್ಞಾನಗಳನ್ನು ಮಾತ್ರ ಬಳಸಿಕೊಂಡು ಸಮಸ್ಯೆಗಳನ್ನು ಪರಿಹರಿಸಿದರೆ ಸಾಲದು. ಇತರರಿಗಿಂತ ಮುಂದೆ ಸಾಗಬೇಕು. ಈಗ ಎಲ್ಲರೂ ವಿಶ್ವದ ಅನ್ವೇಷಕರೇ ಆಗಿದ್ದಾರೆ. ಈ ಅನ್ವೇಷಣೆ ನಿಟ್ಟಿನಲ್ಲಿ ನಮ್ಮಲ್ಲಿ ಇರುವ ಸಾಮರ್ಥ್ಯಗಳನ್ನು ತಿಳಿದುಕೊಳ್ಳಬೇಕು ಎಂದರು.

ಶಿಕ್ಷಣತಜ್ಞ, ಪ್ರೊ.ಅಚ್ಯುತ ಸಾಮಂತ, ಕರ್ನಾಟಕದ ಮುಖ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ಹಾಗೂ ಹುಬ್ಬಳ್ಳಿಯ ಮಜೇಥಿಯಾ ಫೌಂಡೇಶನ್ ಸ್ಥಾಪಕ ಜಿತೇಂದ್ರ ಡಿ. ಮಜೇಥಿಯಾ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು. ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ, ಕುಲಪತಿ ಪ್ರೊ.ಎ.ಎಂ.ಖಾನ್, ಆಡಳಿತಾಂಗ ಕುಲಸಚಿವ ಶಂಕರ ವಣಿಕ್ಯಾಳ, ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ವೈ.ಮಟ್ಟಿಹಾಳ ಉಪಸ್ಥಿತರಿದ್ದರು.

**ಡಾ. ಅಚ್ಯುತ ಸಮಂತಗೆ 71ನೇ ಡಾಕ್ಟರೇಟ್:** ಸಮಂತಾ ಅವರಿಗೆ ಈಗಾಗಲೇ 70 ವಿವಿಗಳು ಗೌರವ ಡಾಕ್ಟರೇಟ್ ನೀಡಿ ಗೌರವಿಸಿವೆ. ಇಂದು ಸ್ವೀಕರಿಸಿದ ಕರ್ನಾಟಕ ವಿಶ್ವವಿದ್ಯಾಲಯದ ಗೌರವ 71 ಡಾಕ್ಟರೇಟ್ ಆಗಿರುವುದು ವಿಶೇಷ. ಸಮಂತ ಅವರು, ಸುಮಾರು 80,000ಕ್ಕೂ ಹೆಚ್ಚು ಬುಡಕಟ್ಟು ಬಡ ಹಾಗೂ ಅನಾಥಮಕ್ಕಳಿಗೆ ಶಿಕ್ಷಣ ಮತ್ತು ವಸತಿ ನೀಡಿ ಅವರ ಬದುಕಿಗೆ ಬೆಳಕು ನೀಡಿದ್ದಾರೆ. ಬುಡಕಟ್ಟು ಮಕ್ಕಳಿಗೆ ಶಿಕ್ಷಣ ಕೊಡಲು ಇಡೀ ಬದುಕನ್ನೇ ಸಮರ್ಪಿಸಿಕೊಂಡಿದ್ದಾರೆ. ಸಮಂತ ಅವರ ಸೇವೆಯನ್ನು ಇದೀಗ ಕರ್ನಾಟಕ ವಿಶ್ವವಿದ್ಯಾಲಯ ಗುರುತಿಸಿ ಗೌರವಿಸಿದೆ.

---

ಅಕ್ಷರಸಂತ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ

# ಶ್ರೀಗಳ ಶೈಕ್ಷಣಿಕ ಸೇವೆ ಅವಿಸ್ಮರಣೀಯ: ಡಾ.ಮಲ್ಲಿಕಾರ್ಜುನ ಸ್ವಾಮೀಜಿ



ಭಾಲ್ಕಿ ಹಿರೇಮಠ ಸಂಸ್ಥಾನದ ಚನ್ನಬಸವಾಶ್ರಮದಲ್ಲಿ ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಹಾಗೂ ವಚನ ಜಾತ್ರೆ, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತಮಹೋತ್ಸವದ ಅಂಗವಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗ್ರಂಥ ಲೋಕಾರ್ಪಣೆ ಧಾರವಾಡದ ಮುರುಘಾಮಠದ ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ಮತ್ತು ಡಾ.ಗೊ.ರು.ಚನ್ನಬಸಪ್ಪ ಅವರು ನೆರವೇರಿಸಿದರು. 50ಕ್ಕೂ ಹೆಚ್ಚು ಮಠಾಧಿಪತಿಗಳು ಭಾಗವಹಿಸಿದ್ದರು.

**ಬೀದರ್, ಏ.23:** ಸರಳ ಸಜ್ಜನಿಕೆಯ, ವಿನಯಶೀಲ ಮತ್ತು ಶೈಕ್ಷಣಿಕ ಶ್ರೇಷ್ಠರಾದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಕಾರ್ಯಗಳು ನಮ್ಮೆಲ್ಲರಿಗೂ ಮಾದರಿಯಾಗಿವೆ. ವಿಶೇಷವಾಗಿ ಅವರು ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಅವಿಸ್ಮರಣೀಯ ಎಂದು ಶ್ರೀಮುರುಘಾಮಠ ಧಾರವಾಡದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಪ್ರತಿಪಾದಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನ ಚನ್ನಬಸವಾಶ್ರಮದಲ್ಲಿ ಲಿಂ. ಡಾ.ಚನ್ನಬಸವ ಪಟ್ಟದ್ದೇವರ 27ನೇ ಸ್ಮರಣೋತ್ಸವ ಹಾಗೂ ವಚನ ಜಾತ್ರೆ–2026, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ಯ ಆಯೋಜಿಸಿದ್ದ ಗ್ರಂಥ ಲೋಕಾರ್ಪಣೆ ಕಾರ್ಯಕ್ರಮದ ಸನ್ನಿಧಾನ ವಹಿಸಿ, ಶ್ರೀಗಳ ಅಂತರಂಗದಲ್ಲಿ ಮನುಕುಲದ ಸೃಷ್ಟಿ ಸಾಕಷ್ಟಿದೆ. ಆಚಾರ, ವಿಚಾರ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡ ಶ್ರೇಷ್ಠ ಪಟ್ಟಾಧ್ಯಕ್ಷರು ಅವರಾಗಿದ್ದಾರೆ. ತಮ್ಮ ಶಿಕ್ಷಣ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ರಾಷ್ಟ್ರೀಯ ಶ್ರೇಷ್ಠ ಸಂಶೋಧಕರಾಗಿ ಹೊರಹೊಮ್ಮಬೇಕು ಎನ್ನುವ ದೂರ ದೃಷ್ಟಿ ಅವರದ್ದಾಗಿದೆ. ಬಸವಲಿಂಗ ಪಟ್ಟದ್ದೇವರಿಗೆ ಉತ್ತಮ ಉತ್ತರಾಧಿಕಾರಿಗಳಾಗಿ ಶ್ರೀ ಗುರುಬಸವ ಪಟ್ಟದ್ದೇವರು ಸಿಕ್ಕಿದ್ದು, ಈ ಮಠದ ಪರಂಪರೆ ಶ್ರೇಷ್ಠತೆಗೆ ಸಾಕ್ಷಿಯಾಗಿದೆ. ಬೆಂಗಳೂರಿನ ಹಿರಿಯ ಚಿಂತಕ ಡಾ. ಗೊ.ರು.ಚನ್ನಬಸಪ್ಪ ಅವರು ಗ್ರಂಥ ಲೋಕಾರ್ಪಣೆ ಮಾಡಿ ಮಾತನಾಡಿದರು.


ಅಥಣಿಯ ಶ್ರೀ ಪ್ರಭುಚನ್ನಬಸವ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿರಕ್ತಮಠ ಸೇಗುಣಸಿಯ ಡಾ. ಮಹಾಂತಪ್ರಭು ಮಹಾಸ್ವಾಮಿಗಳು ಅನುಭಾವನುಡಿ ನುಡಿದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರು ಬಸವ ಪಟ್ಟದ್ದೇವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೆಳಗಾವಿ ರುದ್ರಾಕ್ಷಿಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು, ಪಾಂಡೋಮಟ್ಟಿ ಕಮ್ಮತ್ತಹಳ್ಳಿಯ ಡಾ. ಗುರುಬಸವ ಮಹಾಸ್ವಾಮಿಗಳು, ಚಿತ್ರದುರ್ಗದ ಬಸವಕುಮಾರ ಮಹಾಸ್ವಾಮಿಗಳು, ಗುಳೇದಗುಡ್ಡದ ಜಗದ್ಗುರು ಗುರುಸಿದ್ದ ಮಹಾಸ್ವಾಮಿಗಳು, ಹುಬ್ಬಳ್ಳಿಯ ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು, ಬಸವನ ಬಾಗೇವಾಡಿಯ ಶ್ರೀ ಪ್ರಸಿದ್ಧಲಿಂಗ ಸ್ವಾಮೀಜಿ, ಬೀಳಗಿಯ ಗುರುಪಾದ ಶಿವಾಚಾರ್ಯ ಸ್ವಾಮೀಜಿ ಸನ್ನಿಧಾನ ವಹಿಸಿದ್ದರು. ಕೃಷಿ ಸಚಿವರ ಆಪ್ತ ಕಾರ್ಯದರ್ಶಿ ಪ್ರಭಾಕರ ಎಚ್ ಬಸವಗುರುಪೂಜೆ ನೆರವೇರಿಸಿದರು. ಡಾ. ಸಂತೋಷ ಹಾನಗಲ್, ಡಾ. ಕೆ.ರವಿಂದ್ರನಾಥ, ಪ್ರಕಾಶ ಗಿರಮಲ್ಲನವರ, ಡಾ. ಕಲ್ಯಾಣರಾವ್ ಪಾಟೀಲ, ಗುರಪ್ರಸಾದ ಬಿರಾದಾರ, ಬಸವರಾಜ ಖಂಡೇರಾವ, ರಜನಿಕಾಂತ ಚವ್ಹಾಣ, ವೀರಶೆಟ್ಟಿ ಬಾವುಗೆ, ಡಾ. ರಘುಶಂಕ ಭಾಂತಬ್ರಾ, ಸಚಿನ ಪರಬ, ಮಹೇಶ ಬನ್ನಾಳೆ ಉಪಸ್ಥಿತರಿದ್ದರು.

ಇದೇವೇಳೆ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ವಿರಚಿತ ಶರಣಲೋಕ, ಅಮೃತ ಮಹೋತ್ಸವ ನೆನಪಿನ ಸಂಪುಟ ಲಿಂಗಾಯತ ಸಂಕಥನ, ಡಾ. ಕಲ್ಯಾಣರಾವ್ ಪಾಟೀಲ ಸಂಪಾದಕತ್ವದ ಕಲ್ಯಾಣ ಕಾರುಣ್ಯ, ಮಹೇಶ ಬನ್ನಾಳೆ ವಿರಚಿತ ತ್ಯಾಗಮೂರ್ತಿ ಪೂಜ್ಯ ಡಾ. ಬಸವಲಿಂಗ ಪಟ್ಟದ್ದೇವರು, ಡಾ.ಬಸವ ರಾಜ ಸಬರದ ವಿರಚಿತ 'ನಾಥರು ಶರಣರು ಸೂಫಿಗಳು', ಡಾ. ಸೋಮ ನಾಥ ಯಾಳವಾರ ವಿರಚಿತ 'ಸಾವ ಧಾನಿ', ಡಾ. ರಘುಶಂಕ ಭಾತಂಬ್ರಾ ವಿರಚಿತ 'ಬಸವಲೇಖ', ಗುರುನಾಥ ರಾಜಗೀರಾ ವಿರಚಿತ 'ಸರ್ವೇಜನೋ ಮಸ್ತಕೋ ಭವಂತು' ಗ್ರಂಥ ಗಳ ಲೋಕಾರ್ಪಣೆ ಮಾಡಲಾಯಿತು.

---

# ಕಲಬುರಗಿಗೆ ಕೊನೆಯ ಸ್ಥಾನ: ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಗೆ ಬಿಜೆಪಿ-ಜೆಡಿಎಸ್ ತರಾಟೆ



**ಕಲಬುರಗಿ, ಏ.23:** ಲಕ್ಷಾಂತರ ವಿದ್ಯಾರ್ಥಿಗಳು ಕಾತರದಿಂದ ಕಾಯುತ್ತಿದ್ದ 2025–26ನೇ ಸಾಲಿನ ಎಸ್‌ಎಸ್‌ಎಲ್ಸಿ ಪರೀಕ್ಷೆಯ ಫಲಿತಾಂಶ ಗುರುವಾರ ಪ್ರಕಟವಾಗಿದ್ದು, ದಕ್ಷಿಣ ಕನ್ನಡ ಜಿಲ್ಲೆ ಮೊದಲ ಸ್ಥಾನ ಪಡೆದಿದ್ದರೆ, ಶೇ.85.06 ಫಲಿತಾಂಶ 'ದೊಂದಿಗೆ ಕಲಬುರಗಿ ಜಿಲ್ಲೆ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿದೆ. ಇದಕ್ಕಾಗಿ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ತರಾಟೆಗೆ ತೆಗೆದುಕೊಂಡಿವೆ.

ಸ್ವಂತಜಿಲ್ಲೆಯ ಮಕ್ಕಳ ಭವಿಷ್ಯ ರೂಪಿಸುವಲ್ಲಿ ಖರ್ಗೆ ಕುಟುಂಬ ವಿಫಲವಾಗಿದೆ ಎಂದು ವಾಗ್ದಾಳಿ ನಡೆಸಿವೆ. ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಬಿಜೆಪಿ, 'ಮಹಾಜ್ಞಾನಿ ಪ್ರಿಯಾಂಕ್ ಖರ್ಗೆ ಅವರೇ ಎಲ್ಲಿದ್ದೀರಿ' ಎಂದು ಪ್ರಶ್ನಿಸಿದ್ದರೆ, ಫಲಿತಾಂಶದಲ್ಲಿ ಕಲಬುರಗಿ 35ನೇ ಅಂದರೆ ಕೊನೆಯ ಸ್ಥಾನ ಪಡೆದಿದ್ದು, ಹಿಂದಿನ ಸಾಲಿನಲ್ಲಿಯೂ 34ನೇ ಸ್ಥಾನದಲ್ಲಿತ್ತು. 4–5 ದಶಕಗಳಿಂದ ಕಲಬುರಗಿ ಜಿಲ್ಲೆ ಆಳುತ್ತಿರುವ ಖರ್ಗೆ ಕುಟುಂಬ ಸ್ವಂತ ಜಿಲ್ಲೆಯ ಮಕ್ಕಳ ಭವಿಷ್ಯ ರೂಪಿಸುವಲ್ಲಿ ವಿಫಲವಾಗಿರುವುದು ನಾಚಿಕೆಗೇಡಿನ ಸಂಗತಿ ಎಂದು ಜೆಡಿಎಸ್ ಕುಟುಕಿದೆ.

ಕಲಬುರಗಿ ಜಿಲ್ಲೆಯಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ, ಶಿಕ್ಷಕರ ನೇಮಕ ಸೇರಿದಂತೆ ಶಿಕ್ಷಣದ ಪ್ರಗತಿಗೆ ಅಗತ್ಯವಿರುವ ಮೂಲಸೌಕರ್ಯ ಕಲ್ಪಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದೀರಿ ಎಂದು ಎರಡೂ ಪಕ್ಷಗಳು ಆಕ್ರೋಶ ವ್ಯಕ್ತಪಡಿಸಿದೆ. ಉಸ್ತುವಾರಿ ಸಚಿವರೇ ನಿಮ್ಮ ಭಾಷಣದ ಸಾಧನೆಗೆ ಈ ಫಲಿತಾಂಶವನ್ನು ಸೇರಿಸಿಕೊಳ್ಳಿ. ಕಲಬುರಗಿಯನ್ನು ಅಕ್ಷರಶಃ ಶೈಕ್ಷಣಿಕ ಅಂಧಕಾರಕ್ಕೆ ದೂಡಿದ್ದೀರಿ. ಮಾತಿನಲ್ಲಿ ತೋರಿಸುವ ಶೌರ್ಯ ಶಿಕ್ಷಣದ ಸುಧಾರಣೆಯಲ್ಲಿ ತೋರಿಸಿ ಎಂದಿವೆ.






## ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯ

# ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ.)

ನಂ. 17/4, ವೀರಶೈವ ಲಿಂಗಾಯತ ಭವನ, ಸದಾಶಿವನಗರ, ಬೆಂಗಳೂರು-560080

## ರಾಷ್ಟ್ರೀಯ ಮಹಿಳಾ ಮತ್ತು ಯುವ ವಿಭಾಗಗಳ

# ಪದಗ್ರಹಣ ಕಾರ್ಯಕ್ರಮ

**ದಿನಾಂಕ: 24-04-2026ನೇ ಶುಕ್ರವಾರ ಬೆಳಗ್ಗೆ 11.00 ಗಂಟೆಗೆ - ಸ್ಥಳ: ಟೌನ್ ಹಾಲ್, ಜೆ.ಸಿ.ರಸ್ತೆ, ಬೆಂಗಳೂರು**

### ದಿವ್ಯ ಸಾನ್ನಿಧ್ಯ



ಪಟ್ಟದ ಶ್ರೀ ಡಾ.ಮಲಯ ಶಾಂತಮುನಿ ದೇಶಿಕೇಂದ್ರ
ಶಿವಾಚಾರ್ಯ ಮಹಾಸ್ವಾಮೀಜಿ
ಮೇಲಣಗವಿ ವೀರಸಿಂಹಾಸನ ಸಂಸ್ಥಾನ ಮಠ, ಶಿವಗಂಗೆ



ಡಾ। ಶ್ರೀ ಶ್ರೀ ತ್ರಿನೇತ್ರ ಮಹಂತ ಶಿವಯೋಗಿ ಸ್ವಾಮಿಗಳು
ಚಂದ್ರವನ ಆಶ್ರಮ, ಬೇಬಿಮಠ, ಶ್ರೀರಂಗಪಟ್ಟಣ

### ಸ್ವಾಗತ ಕೋರುವವರು



**ಶ್ರೀಮತಿ ವೀಣಾ ಕಾಶಪ್ಪನವರ್**
ಅಧ್ಯಕ್ಷರು, ರಾಷ್ಟ್ರೀಯ ಮಹಿಳಾ ವಿಭಾಗ
ಅಖಿಲ ಭಾರತ ವೀರಶೈವ–ಲಿಂಗಾಯತ
ಮಹಾಸಭಾ

**ಶ್ರೀ ವೆಂಕಟರೆಡ್ಡಿ ಪಾಟೀಲ್**
ಅಧ್ಯಕ್ಷರು, ರಾಷ್ಟ್ರೀಯ ಯುವ ಘಟಕ
ಅಖಿಲ ಭಾರತ ವೀರಶೈವ–ಲಿಂಗಾಯತ
ಮಹಾಸಭಾ

### ವಿಶೇಷ ಆಹ್ವಾನಿತರು

ಶ್ರೀ ಬೀನು ಕೆ ಶಂಕರ
ಅಧ್ಯಕ್ಷರು, ಕೇರಳ ರಾಜ್ಯ ಘಟಕ
ಶ್ರೀ ಡಿ.ಎಲ್. ಬಾಲಾಜಿ
ಅಧ್ಯಕ್ಷರು, ತಮಿಳುನಾಡು ರಾಜ್ಯ ಘಟಕ


ಶ್ರೀ ದಂಡಿನ ಶಿವಾನಂದ ಅಧ್ಯಕ್ಷರು,
ಆಂಧ್ರಪ್ರದೇಶ ರಾಜ್ಯ ಘಟಕ
ಶ್ರೀ ನೇತಿ ಮಹೇಶ್ವರ
ಅಧ್ಯಕ್ಷರು, ತೆಲಂಗಾಣ ರಾಜ್ಯ ಘಟಕ

ಶ್ರೀ ವಿಶ್ವನಾಥ ಬಾಬುರಾವ್ ಚಕೋಟೆ
ಅಧ್ಯಕ್ಷರು, ಮಹಾರಾಷ್ಟ್ರ ರಾಜ್ಯ ಘಟಕ
ಶ್ರೀ ಶ್ರೀಕಾಂತ ಚೌಕಿಮಠ
ಅಧ್ಯಕ್ಷರು, ದೆಹಲಿ ರಾಜ್ಯ ಘಟಕ

ನಾಡಿನ ಹರಗುರು ಚರಮೂರ್ತಿಗಳು, ಸಮಾಜದ ಮಾಜಿ ಸಚಿವರು, ಸಂಸದರು, ಶಾಸಕರು, ಮಹಾಸಭೆಯ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ರಾಜ್ಯ, ಜಿಲ್ಲಾ, ಮಹಾನಗರ, ತಾಲ್ಲೂಕು ಘಟಕಗಳ/ಮಹಿಳಾ/ಯುವ/ವಿವಿಧ ವಿಭಾಗಗಳ ಅಧ್ಯಕ್ಷರು ಪದಾಧಿಕಾರಿಗಳು, ಕಾರ್ಯನಿರ್ವಾಹಕ ಸಮಿತಿ ಸದಸ್ಯರುಗಳು, ಸಮಾಜದ ಬಾಂಧವರು ಭಾಗವಹಿಸುವರು.



ಉದ್ಘಾಟನೆ :
**ಶ್ರೀ ಜಗದೀಶ ಶೆಟ್ಟರ್**
ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿಗಳು



ಅಧ್ಯಕ್ಷತೆ :
**ಶ್ರೀ ಈಶ್ವರ್ ಬಿ ಖಂಡ್ರೆ**
ಅಧ್ಯಕ್ಷರು, ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾ (ರಿ.) ಹಾಗೂ ಮಾನ್ಯ ಆರಣ್ಯ, ಜೈವಿಕ ಮತ್ತು ಪರಿಸರ ಇಲಾಖೆ ಸಚಿವರು,



ರಾಷ್ಟ್ರೀಯ ಮಹಿಳಾ ಮತ್ತು ರಾಷ್ಟ್ರೀಯ ಯುವ ವಿಭಾಗ ಪದಗ್ರಹಣ ನೆರವೇರಿಸುವವರು :
**ಶ್ರೀ ಬಸವರಾಜ ಹೊರಟ್ಟಿ**
ಸಭಾಪತಿಗಳು, ಕರ್ನಾಟಕ ವಿಧಾನಪರಿಷತ್



ಆಶಯ ನುಡಿ :
**ಶ್ರೀ ಶಂಕರ ಬಿದರಿ,**
ಐ.ಪಿ.ಎಸ್(ನಿ.) ಅಧ್ಯಕ್ಷರು, ಕರ್ನಾಟಕ ರಾಜ್ಯ ಘಟಕ

### ಮುಖ್ಯ ಅತಿಥಿಗಳು :

**ಶ್ರೀ ವಿ. ಸೋಮಣ್ಣ**
ರೈಲ್ವೆ ಹಾಗೂ ಜಲಶಕ್ತಿ ಖಾತೆಗಳ ರಾಜ್ಯ ಸಚಿವರು, ಭಾರತ ಸರ್ಕಾರ
**ಶ್ರೀ ಶಿವಾನಂದ ಎಸ್. ಪಾಟೀಲ**
ಸಚಿವರು, ಜವಳಿ ಮತ್ತು ಸಕ್ಕರೆ ಅಭಿವೃದ್ಧಿ, ಕೃಷಿ ಮಾರುಕಟ್ಟೆ ಇಲಾಖೆ
**ಶ್ರೀ ಶರಣಬಸಪ್ಪ ದರ್ಶನಾಪುರ**
ಸಚಿವರು, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಇಲಾಖೆ
**ಶ್ರೀ ಅಶೋಕ ಎಂ ಪಟ್ಟಣ**
ಶಾಸಕರು, ರಾಮದುರ್ಗನಗರ ಮುಖ್ಯ ಸಚೇತಕರು, ಕರ್ನಾಟಕ ವಿಧಾನಸಭೆ
**ಶ್ರೀ ವಿಜಯಾನಂದ ಕಾಶಪ್ಪನವರ**
ಶಾಸಕರು, ಹುನಗುಂದ
ಅಧ್ಯಕ್ಷರು, ಕೆ.ರಾ.ವೀ.ಲಿಂ.ಅಭಿವೃದ್ಧಿ ನಿಗಮ, ಜಿಗ್ಸ್
**ಶ್ರೀ ಅರುಣ್ ಎಂ.ವೈ.ಪಾಟೀಲ್**
ಛೇರಮನ್, NEKRTC
**ಶ್ರೀ ಎಂ.ಬಿ.ಪಾಟೀಲ**
ಸಚಿವರು. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ
**ಡಾ. ಶರಣಪ್ರಕಾಶ ಪಾಟೀಲ**
ಸಚಿವರು, ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಇಲಾಖೆ
**ಶ್ರೀ ಬಸವರಾಜ ರಾಯರೆಡ್ಡಿ**
ಶಾಸಕರು, ಯಲಬುರ್ಗಾ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು
**ಶ್ರೀ ಬಿ.ಕೆ.ಸಂಗಮೇಶ್ವರ**
ಶಾಸಕರು, ಭದ್ರಾವತಿ ಅಧ್ಯಕ್ಷರು, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಔ.. ಮತ್ತು ಭೂಸೇನೆ
**ಶ್ರೀ ಸಿ.ಎಸ್.ನಾಡಗೌಡ**
ಚೆರಮನ್, ಕರ್ನಾಟಕ ಸಾಬೂನು ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್
**ಶ್ರೀ ಪ್ರವೀಣ್ ಪಾಟೀಲ್ ಹರವಾಳ್**
ಛೇರಮನ್, GESCOM
**ಶ್ರೀ ಎಸ್.ಎಸ್.ಮಲ್ಲಿಕಾರ್ಜುನ**
ಸಚಿವರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ತೋಟಗಾರಿಕೆ
**ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ್**
ಸಚಿವರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ
**ಶ್ರೀ ಬಿ.ಆರ್.ಪಾಟೀಲ್**
ಶಾಸಕರು, ಆಳಂದ ಉಪಾಧ್ಯಕ್ಷರು, ರಾಜ್ಯ ಯೋಜನಾ ಆಯೋಗ
**ಶ್ರೀ ಜಿ.ಎಸ್. ಪಾಟೀಲ**
ಶಾಸಕರು, ರೋಣ ಅಧ್ಯಕ್ಷರು, ಖನಿಜ ಅಭಿವೃದ್ಧಿ ನಿಗಮ
**ಶ್ರೀ ವಿ.ಎಸ್.ಆರಾಧ್ಯ**
ಛೇರಮನ್, ಬಿ.ಎಂ.ಟಿ.ಸಿ
**ಶ್ರೀಮತಿ ಶಿವಲೀಲಾ ವಿನಯ್ ಕುಲಕರ್ಣಿ**
ಅಧ್ಯಕ್ಷರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ


### ದಿವ್ಯನಮನ



**"ತತಾಯುಷಿ" ಡಾ. ಭೀಮಣ್ಣ ಖಂಡ್ರೆ,**
ಮಾಜಿ ಸಚಿವರು ಮಾಜಿ ಗೌರವಾಧ್ಯಕ್ಷರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ.)



**ಡಾ. ಶಾಮನೂರು ಶಿವಶಂಕರಪ್ಪ,**
ಮಾಜಿ ಸಚಿವರು ಮಾಜಿ ಅಧ್ಯಕ್ಷರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ.)



**ಎನ್.ತಿಪ್ಪಣ್ಣ,**
ಮಾಜಿ ಶಾಸಕ, ಮಾಜಿ ಹಿರಿಯ ಉಪಾಧ್ಯಕ್ಷ ಡಾ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ಆರ್)

### ಅತಿಥಿಗಳು :

**ಶ್ರೀ ಪಿ.ಸಿ.ಗದ್ದಿಗೌಡ ಸಂಸದ,**
ಬಾಗಲಕೋಟ
**ಶ್ರೀ ಈರಣ್ಣ ಕಡಾಡಿ**
ರಾಜ್ಯಸಭಾ ಸದಸ್ಯರು
**ಶ್ರೀ ಲಕ್ಷ್ಮಣ ಸವದಿ**
ಶಾಸಕರು, ಅಥಣಿ
**ಶ್ರೀ ಬಾಬಾಸಾಹೇಬ ಡಿ. ಪಾಟೀಲ**
ಶಾಸಕರು, ಕಿತ್ತೂರು
**ಶ್ರೀ ಎಚ್.ಎಂ. ಗಣೇಶ ಪ್ರಸಾದ್**
ಶಾಸಕ, ಗುಂಡ್ಲುಪೇಟೆ
**ಶ್ರೀ ಎನ್. ಭರತ್ ರೆಡ್ಡಿ**
ಶಾಸಕರು, ಬಳ್ಳಾರಿ.
**ಶ್ರೀ ಸಿ.ಸಿ. ಪಾಟೀಲ**
ಶಾಸಕರು, ನರಗುಂದ
**ಶ್ರೀ ಸಿದ್ದು ಸವದಿ**
ಶಾಸಕರು, ತೇರದಾಳ
**ಶ್ರೀ ಜಗದೀಶ್ ಗುಡಗುಂಟಿ**
ಶಾಸಕರು, ಜಮಖಂಡಿ
**ಡಾ. ಶೈಲೇಂದ್ರ ಬೆಲ್ದಾಳೆ**
ಶಾಸಕರು, ಬೀದರ್ ದಕ್ಷಿಣ
**ಶ್ರೀ ಬಿ.ವೈ.ರಾಘವೇಂದ್ರ**
ಸಂಸದರು, ಶಿವಮೊಗ್ಗ
**ಶ್ರೀ ಬಿ.ವೈ. ವಿಜಯೇಂದ್ರ**
ಶಾಸಕರು, ಶಿಕಾರಿಪುರ
**ಶ್ರೀ ಭರಮನಗೌಡ ಕಾಗೆ**
(ರಾಜು) ಶಾಸಕರು, ಕಾಗವಾಡ
**ಶ್ರೀ ಹಂಪನಗೌಡ ಬಾದರ್ಲಿ**
ಶಾಸಕರು, ಸಿಂಧನೂರು
**ಶ್ರೀ ಯು.ಬಿ. ಬಣಕಾರ**
ಶಾಸಕರು, ಹಿರೇಕೆರೂರು
**ಶ್ರೀ ಕೆ. ಷಡಕ್ಷರಿ ಶಾಸಕರು,**
ಶಾಸಕರು, ತಿಪಟೂರು
**ಶ್ರೀ ಬಸವರಾಜು ವಿ ಶಿವಗಂಗಾ**
ಶಾಸಕರು, ಚನ್ನಗಿರಿ
**ಶ್ರೀಮತಿ ಶಶಿಕಲಾ ಜೊಲ್ಲೆ**
ಶಾಸಕರು, ನಿಪ್ಪಾಣಿ
**ಶ್ರೀ ಜ್ಯೋತಿ ಗಣೇಶ್**
ಶಾಸಕರು, ತುಮಕೂರು ನಗರ
**ಶ್ರೀ ಎಸ್.ಎನ್. ಚನ್ನಬಸಪ್ಪ (ಚನ್ನಿ)**
ಶಾಸಕರು, ಶಿವಮೊಗ್ಗ
**ಶ್ರೀ ಭೀಮನಗೌಡ ಬಿ ಪಾಟೀಲ್**
ಶಾಸಕರು, ದೇವರಹಿಪ್ಪರಗಿ
**ಡಾ. ಪ್ರಭಾ ಮಲ್ಲಿಕಾರ್ಜುನ**
ಸಂಸದರು, ದಾವಣಗೆರೆ
**ಶ್ರೀ ಯಶವಂತರಾಯಗೌಡ**
ಪಾಟೀಲ ಶಾಸಕರು, ಇಂಡಿ
**ಶ್ರೀ ಅಲ್ಲಮಪ್ರಭು ಪಾಟೀಲ**
ಶಾಸಕರು, ಕಲಬುರ್ಗಿ ದಕ್ಷಿಣ
**ಶ್ರೀ ಮಹಾಂತೇಶ ಎಸ್. ಕೌಜಲಗಿ**
ಶಾಸಕರು, ಬೈಲಹೊಂಗಲ
**ಶ್ರೀ ಗಣೇಶ ಪ್ರಕಾಶ ಹುಕ್ಕೇರಿ**
ಶಾಸಕರು. ಚಿಕ್ಕೋಡಿ-ಸದಲಗಾ
**ಶ್ರೀ ಡಿ.ಜಿ. ಶಾಂತನಗೌಡ**
ಶಾಸಕ, ಹೊನ್ನಾಳಿ
**ಶ್ರೀಮತಿ ಲತಾ ಮಲ್ಲಿಕಾರ್ಜುನ**
ಶಾಸಕರು, ಹರಪನಹಳ್ಳಿ
**ಡಾ. ಶಿವರಾಜ್ ಪಾಟೀಲ್**
ಶಾಸಕರು, ರಾಯಚೂರು ನಗರ
**ಶ್ರೀ ಶರಣು ಸಲಗಾರ**
ಶಾಸಕರು, ಬಸವಕಲ್ಯಾಣ
**ಶ್ರೀ ಸಿದ್ದಲಿಂಗಪ್ಪ ನಾಗಭೂಷಣ ಪಾಟೀಲ**
ಶಾಸಕರು, ಹುಮ್ನಾಬಾದ್
**ಶ್ರೀ ನಿಖಿಲ್ ಕತ್ತಿ**
ಶಾಸಕರು. ಹುಕ್ಕೇರಿ
**ಶ್ರೀ ಸಾಗರ ಈಶ್ವರ ಖಂಡ್ರೆ**
ಸಂಸದರು, ಬೀದರ್
**ಶ್ರೀ ಎಂ.ವೈ. ಪಾಟೀಲ**
ಶಾಸಕರು, ಅಫಜಲಪುರ
**ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರು**
ಶಾಸಕರು, ಯಾದಗಿರಿ
**ಶ್ರೀ ಅಶೋಕ ಎಂ. ಮನಗೂಳಿ**
ಶಾಸಕರು, ಸಿಂಧಗಿ
**ಶ್ರೀ ಎಚ್.ಡಿ.ತಮ್ಮಯ್ಯ**
ಶಾಸಕರು, ಚಿಕ್ಕಮಗಳೂರು
**ಶ್ರೀ ಕೆ.ಸಿ.ವೀರೇಂದ್ರ (ಪಪ್ಪಿ)**
ಶಾಸಕರು, ಚಿತ್ರದುರ್ಗ
**ಶ್ರೀ ಅರವಿಂದ ಬೆಲ್ಲದ**
ಶಾಸಕರು, ಹುಬ್ಬಳ್ಳಿ-ಧಾರವಾಡ (ಪಶ್ಚಿಮ)
**ಶ್ರೀ ಬಸನಗೌಡ ಪಾಟೀಲ್ ಯತ್ನಾಳ್**
ಶಾಸಕರು, ವಿಜಯಪುರ
**ಶ್ರೀ ಬಿ.ಪಿ.ಹರೀಶ್**
ಶಾಸಕರು, ಹರಿಹರ
**ಶ್ರೀ ಮಹೇಶ ಟೆಂಗಿನಕಾಯಿ**
ಶಾಸಕರು, ಹುಬ್ಬಳ್ಳಿ-ಧಾರವಾಡ ಸೆಂಟ್ರಲ್
**ಶ್ರೀ ಶರಣಗೌಡ ಕಂದಕೂರ**
ಶಾಸಕರು, ಗುರುಮಠಕಲ್
**ಶ್ರೀ ಎಂ.ಆರ್. ಪಾಟೀಲ್**
ಶಾಸಕರು, ಕುಂದಗೋಳ
**ಶ್ರೀ ಪ್ರದೀಪ್ ಶೆಟ್ಟರ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ಶರಣಗೌಡ ಪಾಟೀಲ್ ಬಯ್ಯಾಪುರ**
ವಿಧಾನ ಪರಿಷತ್ ಸದಸ್ಯರು
**ಪ್ರೊ. ಎಸ್.ವಿ. ಸಂಕನೂರ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ವೈ.ಎಂ. ಸತೀಶ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ಪಿ.ಎಚ್. ಪೂಜಾರ**
ವಿಧಾನಪರಿಷತ್ ಸದಸ್ಯರು
**ಶ್ರೀ ಭೀಮರಾವ್ ಪಾಟೀಲ್**
ವಿಧಾನಪರಿಷತ್ ಸದಸ್ಯರು
**ಶ್ರೀ ಎಸ್. ರುದ್ರೇಗೌಡ**
ವಿಧಾನಪರಿಷತ್ ಸದಸ್ಯರು
**ಶ್ರೀ ಪ್ರಕಾಶ್ ಹುಕ್ಕೇರಿ**
ವಿಧಾನಪರಿಷತ್ ಸದಸ್ಯರು
**ಶ್ರೀ ಹನುಮಂತ ರುದ್ರಪ್ಪ ನಿರಾಣಿ**
ವಿಧಾನಪರಿಷತ್ ಸದಸ್ಯರು
**ಡಾ. ಧನಂಜಯ ಸರ್ಜಿ ಬಿ**
ವಿಧಾನಪರಿಷತ್ ಸದಸ್ಯರು
**ಶ್ರೀ ಶಶೀಲ್ ಜಿ ನಮೋಶಿ**
ವಿಧಾನಪರಿಷತ್ ಸದಸ್ಯರು
**ಶ್ರೀಮತಿ ತುಳಜಾಪುರ ಸ್ವಪ್ನ**
ಅಧ್ಯಕ್ಷರು, ವೀರಶೈವ ಲಿಂಗಾಯತ/ಲಿಂಗ ಬಲಿಜ ಅಭಿವೃದ್ಧಿ ನಿಗಮ, ಆಂಧ್ರಪ್ರದೇಶ ಸರ್ಕಾರ
**ಶ್ರೀ ಚನ್ನರಾಜ ಹಟ್ಟಿಹೊಳಿ**
ವಿಧಾನ ಪರಿಷತ್ ಸದಸ್ಯರು
**ಶ್ರೀ ಚಂದ್ರಶೇಖರ ಬಿ ಪಾಟೀಲ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ಸುನೀಲಗೌಡ ಪಾಟೀಲ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ಬಿ.ಜಿ. ಪಾಟೀಲ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ಕೆ.ಎಸ್. ನವೀನ್**
ವಿಧಾನ ಪರಿಷತ್ ಸದಸ್ಯರು
**ಶ್ರೀ ವಸನೂರಿ ಚಂದ್ರಶೇಖರ**
ಅಧ್ಯಕ್ಷರು, ವೀರಶೈವ ಜಂಗಮ ಅಭಿವೃದ್ಧಿ ನಿಗಮ, ಆಂಧ್ರಪ್ರದೇಶ ಸರ್ಕಾರ